ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – 134

ಪಟ್ಟಿ – ೧೭

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೇಳನೇ ಅಧಿವೇಶನ
ಮುಂದುವರೆದ ಉಪವೇಶನ

**ಬುಧವಾರ, ದಿನಾಂಕ : ೨೫ನೇ ಮಾರ್ಚ್, ೨೦೧೫**

---

## ಸಮೂಹ – III

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

F-1 B/

## ಕಾಡು ಪ್ರಾಣಿಗಳ ಹಾವಳಿ.

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧೦ (೧೩೯೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಕಾಡು ಪ್ರಾಣಿಗಳು ನಾಡಿಗೆ ಬಂದು ಹಾವಳಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣವೇನು ;

(ಆ) ರಾಜ್ಯದಲ್ಲಿ ಕಾಡು ಪ್ರಾಣಿಗಳ ಹಾವಳಿಗೊಳಗಾಗಿ ಇದುವರೆವಿಗೆ ಪ್ರಾಣತೆತ್ತವರ ಸಂಖ್ಯೆ ಎಷ್ಟು ; ಪ್ರಾಣ ಕಳೆದುಕೊಂಡ ಕುಟುಂಬದವರಿಗೆ ಪರಿಹಾರ ನೀಡಲಾಗಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಇ) ರಾಜ್ಯದಲ್ಲಿ ಕಾಡು ಪ್ರಾಣಿಗಳಿಂದ ಆದ ಬೆಳೆಯು ನಷ್ಟದ ಪ್ರಮಾಣವೆಷ್ಟು ; (ಪ್ರದೇಶವಾರು ನಷ್ಟದ ವಿವರ ಹಾಗೂ ಪರಿಹಾರದ ವಿವರ ನೀಡುವುದು)

(ಈ) ನೆಲಮಂಗಲ ತಾಲ್ಲೂಕಿನ ವೀರಸಾಗರ ಗ್ರಾಮದಲ್ಲಿ ೧೦ ಕಾಡಾನೆಗಳ ಹಿಂಡು ರೈತರ ತೋಟ ಮತ್ತು ಆಸ್ತಿಯನ್ನು ಹಾಳು ಮಾಡಿರುವುದು ನಿಜವೇ ; ಹಾಗಿದ್ದಲ್ಲಿ, ನಷ್ಟದ ಮೊತ್ತವೇನು ;

(ಉ) ಕಳೆದ ಮೂರು ತಿಂಗಳುಗಳಿಂದ ಈ ಕಾಡಾನೆಗಳು ಶಿವಗಂಗೆ ಬೆಟ್ಟದ ಸುತ್ತಮುತ್ತ ಮತ್ತು ತುಮಕೂರು ತಾಲ್ಲೂಕಿನ ಕೆಲ ಭಾಗದಲ್ಲಿ ರೈತರ ಬೆಳೆ ಹಾನಿ ಮಾಡಿದ್ದರೂ, ಅರಣ್ಯ ಇಲಾಖೆಯ ಅಧಿಕಾರಿಗಳು ಕೈಕಟ್ಟಿ ಕುಳಿತಿರುವುದು ನಿಜವೇ ; ಹಾಗಿದ್ದಲ್ಲಿ, ಕೈಗೊಂಡ ಕ್ರಮವೇನು ;

(ಊ) ಹೊಸ್ನೆಹಳ್ಳಿ, ಅಗಲಕುಪ್ಪೆ, ಶಿವಗಂಗೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಚಿರತೆ, ಕರಡಿ, ಕಾಡಾನೆಗಳ ದಾಳಿಯಿಂದ ರೈತರು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ದನಕರುಗಳು, ಹಸುಗಳು ಕಾಡು ಪ್ರಾಣಿಗಳಿಗೆ ತುತ್ತಾಗಿರುವುದು ನಿಜವಲ್ಲವೇ ? (ಹಾಗಿದ್ದಲ್ಲಿ ವಿವರ ನೀಡುವುದು)

## ಬಾಕಿ ಇರುವ ಪೋಡಿ ಕಡತಗಳ ಬಗ್ಗೆ ಹಾಗೂ ಭೂಮಾಪಕರ ನೇಮಕಾತಿ ಬಗ್ಗೆ.

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೧೧(೨೫೪೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜಿಲ್ಲಾವಾರು (ಪಟ್ಟಿ ಸಮೇತ) ೧–೦೭–೨೦೧೪ ರವರೆಗೆ ಪೋಡಿಗಾಗಿ ಬಾಕಿಯಿರುವ ಕಡತಗಳ ಸಂಖ್ಯೆ ಎಷ್ಟು ; (ಇವುಗಳಲ್ಲಿ (ಎ) ೨ ವರ್ಷಗಳಿಂದ (ಬಿ) ೧ ವರ್ಷಗಳಿಂದ (ಸಿ) ೬ ತಿಂಗಳಿಂದ ಬಾಕಿ ಇರುವ ಪಟ್ಟಿ ನೀಡುವುದು)

(ಆ) ಇಂತಹ ಪೋಡಿ ಕಡತಗಳ ವಿಲೇವಾರಿಗೆ ವಿಳಂಬ ಆಗುತ್ತಿರಲು ಕಾರಣವೇನು ; ಪೋಡಿ ಕಡತಗಳು ೩ ತಿಂಗಳಲ್ಲಿ ಬಗೆಹರಿಸಲು ಸರ್ಕಾರ ಯಾವ ರೀತಿ ಕ್ರಮ ವಹಿಸುತ್ತಿದೆ ;

(ಇ) ರಾಜ್ಯದಲ್ಲಿ ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ ಭೂಮಾಪಕರ ಹುದ್ದೆ ಎಷ್ಟು ; ೦೧–೦೭–೨೦೧೪ ರವರೆಗೆ ಖಾಲಿ ಇರುವ ಭೂಮಾಪಕರ ಸಂಖ್ಯೆ ಎಷ್ಟು ;

(ಈ) ಸರ್ಕಾರವು ಖಾಲಿ ಇರುವ ಭೂಮಾಪಕರ ಹುದ್ದೆಯನ್ನು ತುಂಬಲು ಕ್ರಮವಹಿಸಲಿದೆಯೇ ; ಹಾಗಿದ್ದಲ್ಲಿ, ಎಷ್ಟು ಭೂಮಾಪಕರನ್ನು ನೇಮಿಸಿಕೊಳ್ಳಲಾಗಿದೆ ನೇಮಕಗೊಂಡ ಭೂಮಾಪಕರಿಗೆ ನೇಮಕಾತಿ ಆದೇಶ ನೀಡಿದೆಯೇ ; ಇಲ್ಲವಾದಲ್ಲಿ ಯಾವಾಗ ನೇಮಕಾತಿ ಆದೇಶ ಹೊರಡಿಸಲಾಗುವುದು ;

(ಉ) ನೇಮಕಾತಿಗೊಳ್ಳುವ ಭೂಮಾಪಕರಿಗೆ ಅಗತ್ಯ ತರಬೇತಿ ನೀಡಲಾಗುತ್ತಿದೆಯೇ ?

## ಭೂ ಪರಿವರ್ತನೆ ಪೋಡಿಗಾಗಿ ಸಲ್ಲಿಸಿರುವ ಅರ್ಜಿಗಳ ವಿಲೇವಾರಿ ಬಗ್ಗೆ.

ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೨೧೧೨(೨೫೪೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಾಲ್ಲೂಕು ದಾಸನಪುರ ಹೋಬಳಿ ಭೂ ಪರಿವರ್ತನೆ ಜಮೀನಿನ ಪೋಡಿಗಾಗಿ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ದಿನಾಂಕವಾರು ವಿವರ ನೀಡುವುದು)

(ಆ) ಭೂ ಪರಿವರ್ತನೆ ಪೋಡಿಗಾಗಿ ಸಲ್ಲಿಸಿರುವ ಅರ್ಜಿಗಳು ೩–೪ ವರ್ಷಗಳಿಂದ ವಿಲೇ ಆಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಭೂ ಪರಿವರ್ತನೆ ಪೋಡಿಗಾಗಿ ಸಲ್ಲಿಸಿರುವ ಅರ್ಜಿಗಳ ವಿಲೇವಾರಿಗಾಗಿ ಕಾಲಮಿತಿ ನಿಗದಿಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ ಎಷ್ಟು ಕಾಲಮಿತಿಯಲ್ಲಿ ಸದರಿ ಅರ್ಜಿಗಳನ್ನು ವಿಲೇವಾರಿ ಮಾಡಲಾಗುವುದು ?

## ಪಿಟಿಸಿಎಲ್ ಪ್ರಕರಣಗಳ ಬಗ್ಗೆ.

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೧೩(೨೫೪೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಹಶೀಲ್ದಾರ್ ಮತ್ತು ಬೆಂಗಳೂರು ಉತ್ತರ ವಿಭಾಗಾಧಿಕಾರಿಗಳು ಅನಾವಶ್ಯಕವಾಗಿ ೭೯ ಎಬಿ ಮತ್ತು ಪಿಟಿಸಿಎಲ್ ಪ್ರಕರಣಗಳು ದಾಖಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಪ್ರಕರಣಗಳನ್ನು ದಾಖಲು ಮಾಡಲು ಉಪಯೋಗಿಸುತ್ತಿರುವ ಮಾನದಂಡವೇನು ;

(ಇ) ಬೆಂಗಳೂರು ಉತ್ತರ ತಾಲ್ಲೂಕಿನಲ್ಲಿ ದಾಖಲಾಗಿರುವ ೭೯ ಎಬಿ ಮತ್ತು ಪಿಟಿಸಿಎಲ್ ಈ ಪ್ರಕರಣಗಳನ್ನು ದಾಖಲು ಮಾಡಿ ರೈತರಿಗೆ ಅನಾವಶ್ಯಕವಾಗಿ ತೊಂದರೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸದರಿ ಅಧಿಕಾರಿಯ ವಿರುದ್ಧ ಯಾವ ರೀತಿ ಕ್ರಮಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಕಂದಾಯ ಇಲಾಖೆಯಲ್ಲಿ ಖಾತೆ ತಿದ್ದುಪಡಿ.

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೧೪(೨೫೪೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಹಶೀಲ್ದಾರ್‌ರ ಕಛೇರಿಯಲ್ಲಿ ಸಿಬ್ಬಂದಿ ವರ್ಗದವರು ದಾಸನಪುರ ರಾಜಸ್ಥ ನಿರೀಕ್ಷಕರು ಅನಾವಶ್ಯವಾಗಿ

ಖಾತೆ ತಿದ್ದುಪಡಿ ಪೋಡಿ ಮಾಡಲು ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ೭೯ ಎಬಿ ಮತ್ತು ಪಿಟಿಸಿಎಲ್ ಪ್ರಕರಣಗಳನ್ನು ದಾಖಲು ಮಾಡಿ ರೈತರಿಗೆ ತೊಂದರೆ ನೀಡುತ್ತಿರುವ ಅಧಿಕಾರಿಗಳ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮದ್ದೂರು ತಾಲ್ಲೂಕಿನ ಶಿಂಷಾ ನದಿ ಎಡ ಬಲ ಭಾಗದಲ್ಲಿ ಬರುವ ಕೆರೆಗಳ ನೀರಾವರಿ ಬಗ್ಗೆ.

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೧೫(೨೪೧೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯ ತಾಲ್ಲೂಕಿನ ಶಿಂಷಾ ನದಿ ಎಡಬಲ ಭಾಗದಲ್ಲಿ ಬರುವ ಸುಮಾರು ೧೬ ಗ್ರಾಮಗಳ ಕೆರೆಗಳಿಗೆ ಏತ ನೀರಾವರಿಯ ಯೋಜನೆ ಮೂಲಕ ನೀರು ತುಂಬಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಗ್ರಾಮಗಳು ಈ ಯೋಜನೆಯಡಿ ಸೇರಿವೆ ; (ಅನುಷ್ಠಾನಗೊಳಿಸುವ ಅಂದಾಜು ಮೊತ್ತದೊಂದಿಗೆ ಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಕಾಮಗಾರಿಗೆ ಯಾವಾಗ ಅನುಮೋದನೆ ನೀಡಿ ಕಾಮಗಾರಿ ಪೂರ್ಣಗೊಳಿಸಲಾಗುವುದು ? (ಪೂರ್ಣ ಮಾಹಿತಿ ನೀಡುವುದು)

# ನೀರು ಬಳಕೆದಾರರ ಸಹಕಾರ ಸಂಘಗಳಿಗೆ ಕರವಸೂಲಾತಿಗಳ ಬಗ್ಗೆ.

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೧೬(೨೫೫೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೀರು ಬಳಕೆದಾರರ ಸಹಕಾರ ಸಂಘಗಳಿಗೆ ಸರ್ಕಾರದ ಆದೇಶದನ್ವಯ ನೀರು ನಿರ್ವಹಣೆ ಮತ್ತು ಕರವಸೂಲಾತಿ ಆದೇಶಗಳ ಬಗ್ಗೆ ಇದುವರೆಗೂ ಯಾವುದೇ ಕ್ರಮ ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ವಹಿಸಿದ ಕ್ರಮಗಳೇನು ;

(ಇ) ರಾಜ್ಯದ ವಿವಿಧ ನೀರಾವರಿ ನಿಗಮಗಳಲ್ಲಿ ಈಗಾಗಲೇ ನೀರು ಬಳಕೆದಾರರ ಸಂಘಗಳಿಗೆ ಸರ್ಕಾರದ ಆದೇಶದನ್ವಯ ನೀರು ನಿರ್ವಹಣೆ ಮತ್ತು ಕರವಸೂಲಾತಿ ಆದೇಶಗಳನ್ನು ಜಾರಿ ಮಾಡಿ, ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಯಲ್ಲಿ ಮಾತ್ರ ಜಾರಿ ಮಾಡಲು ಇಲಾಖಾ ಅಧಿಕಾರಿಗಳು ಮೀನ ಮೇಷ ಎಣಿಸುತ್ತಿರುವುದು ಸರಿಯೇ ;

(ಈ) ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ವಹಿಸಿದ ಕ್ರಮಗಳೇನು ?

## ವಿಶ್ವೇಶ್ವರಯ್ಯ ನಾಲೆಗಳ ದುರಸ್ತಿ ಬಗ್ಗೆ.

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೧೭(೨೫೫೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯ ಕೃಷ್ಣರಾಜ ಸಾಗರದ ವ್ಯಾಪ್ತಿಯಲ್ಲಿ ಬರುವ ವಿಶ್ವೇಶ್ವರಯ್ಯ ನಾಲೆಗಳ ಮತ್ತು ಅದರ ಕೆಳಭಾಗದಲ್ಲಿ ಬರುವ ನಾಲೆಗಳ ಸಂಖ್ಯೆ ಎಷ್ಟು ;

(ಆ) ಅಭಿವೃದ್ಧಿಗಾಗಿ ಕಳೆದ ೨ ವರ್ಷಗಳಿಂದ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ವರ್ಷಾವಾರು, ಅನುದಾನವಾರು, ಕಾಮಗಾರಿವಾರು ವಿವರ ನೀಡುವುದು)

(ಇ) ಆ ಪೈಕಿ ಕೈಗೊಂಡ ಕಾಮಗಾರಿಗಳು ಎಷ್ಟು ; (ವಿವರ ನೀಡುವುದು)

(ಈ) ನಾಲಾವ್ಯಾಪ್ತಿಯ ಮದ್ದೂರು ಮತ್ತು ಮಳವಳ್ಳಿ ತಾಲ್ಲೂಕಿನ ಕಡೆ ಭಾಗದ ಜಮೀನುಗಳಿಗೆ ನೀರು ತಲುಪಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಯುವಜನ ಸಬಲೀಕರಣದಡಿ ಕೈಗೊಂಡ ಕಾರ್ಯಕ್ರಮಗಳು.

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೧೮(೨೫೪೨) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಡಿಯಲ್ಲಿ ರಾಜ್ಯದ ಯುವಜನರ ಸಬಲೀಕರಣಕ್ಕೆ ಕೈಗೊಂಡಿರುವ ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಆ) ಸದರಿ ಇಲಾಖೆಯಡಿ ಜಾರಿಯಾಗಿರುವ 'ರಾಜ್ಯ ಯುವನೀತಿ' ಜಾರಿಗೆ ನಿಗದಿಪಡಿಸಿರುವ ಅನುದಾನ ಮತ್ತು ಕಾಲಮಿತಿ ಎಷ್ಟು; ಹಾಗಿದ್ದಲ್ಲಿ, ಈ ಯುವ ನೀತಿ ಅಡಿ ಕೈಗೊಳ್ಳಲಾಗಿರುವ ಕಾರ್ಯಕ್ರಮಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇಲಾಖೆ ವತಿಯಿಂದ ರಾಜ್ಯದಲ್ಲಿರುವ ಬೃಹತ್ ಮತ್ತು ಮಿನಿ ಕ್ರೀಡಾಂಗಣಗಳ ಸಂಖ್ಯೆ ಎಷ್ಟು ; (ಜಿಲ್ಲಾ ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು) ಈ ಕ್ರೀಡಾಂಗಣಗಳನ್ನು ಸುಸ್ಥಿತಿಯಲ್ಲಿಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸಂರಕ್ಷಿತ ಪ್ರಾಣಿಗಳು ಸಾವೀಗಿಡಾಗುತ್ತಿರುವ ಬಗ್ಗೆ.

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೧೯(೨೫೫೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಪ್ರಾಣಿ ಸಂಗ್ರಹಾಲಯದಲ್ಲಿ ಸಂರಕ್ಷಿತ ಪ್ರಾಣಿಗಳು ಸಾವಿಗೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ೫ ವರ್ಷಗಳಿಂದ ಎಷ್ಟು ಪ್ರಾಣಿಗಳು ಸಾವಿಗೀಡಾಗಿವೆ ; ಇದಕ್ಕೆ ಕಾರಣವೇನು ; (ಪ್ರಾಣಿವಾರು ವಿವರ ನೀಡುವುದು)

(ಇ) ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಮುಂಜಾಗ್ರತಾ ಕ್ರಮಗಳೇನು ?

# ನೀರಾವರಿ ಯೋಜನೆಗಳಿಗೆ ಆಯವ್ಯಯದಲ್ಲಿ ನೀಡಿದ ಅನುದಾನ ಹಾಗೂ ಯೋಜನೆಗಳು.

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೨೧೨೦(೨೪೧೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೨ ರಿಂದ ೨೦೧೪-೧೫ನೇ ಸಾಲಿನವರೆಗೆ ಸರ್ಕಾರವು ಆಯವ್ಯಯದಲ್ಲಿ ಬೃಹತ್ ಮತ್ತು ಮಧ್ಯಮ ನೀರಾವರಿ ಇಲಾಖೆಗೆ ಮೀಸಲಿರಿಸಿರುವ ಅನುದಾನ ಬಿಡುಗಡೆ ಮಾಡಿದ ಹಾಗೂ ಖರ್ಚು ಮಾಡಿದ ಮೊತ್ತವೆಷ್ಟು ; (ವರ್ಷವಾರು ಮಾಹಿತಿ ಒದಗಿಸುವುದು)

(ಆ) ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ ಬೃಹತ್ ಮತ್ತು ಮಧ್ಯಮ ನೀರಾವರಿ ಇಲಾಖೆಯಿಂದ ಸರ್ಕಾರವು ಯಾವ ಯಾವ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ ಪೂರ್ಣವಾದ ಮತ್ತು ಪ್ರಗತಿ ಹಂತದಲ್ಲಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಇ) ಈ ಭಾಗದ ಜಿಲ್ಲೆಗಳಲ್ಲಿ ಪೂರ್ಣವಾದ ನೀರಾವರಿ ಯೋಜನೆಗಳಿಂದ ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ ? (೨೦೧೨ನೇ ಸಾಲಿನಿಂದ ಪ್ರಸ್ತುತ ೨೦೧೪-೧೫ನೇ ಸಾಲಿನವರೆಗೆ ವಾರ್ಷಿಕವಾರು ಜಿಲ್ಲಾವಾರು ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಅನಾವೃಷ್ಟಿಯಿಂದ ಬರಗಾಲ.

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೨೧(೨೪೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕಿನಲ್ಲಿ ಅನಾವೃಷ್ಟಿಯಿಂದಾಗಿ ಭೀಕರ ಬರಗಾಲ ತಲೆದೋರಿರುವುದರಿಂದ ಜಾನುವಾರುಗಳಿಗೆ ಮೇವು ಮತ್ತು ನೀರಿನ ಅತಿ ತೀವ್ರ ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರವು ಮೇವು ಹಾಗೂ ನೀರಿನ ಅಭಾವವನ್ನು ನೀಗಿಸಲು ಮುನ್ನೇಚ್ಚರಿಕೆಗೆ ಯಾವ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಮೇವು ಮತ್ತು ನೀರು ಟ್ಯಾಂಕರ್ ವ್ಯವಸ್ಥೆಯ ಕೇಂದ್ರಗಳನ್ನು ತೆರೆಯಲು ಸರ್ಕಾರ ಉದ್ದೇಶಿಸಿದೆಯೇ ; ಹಾಗಿದ್ದಲ್ಲಿ ಎಲ್ಲೆಲ್ಲಿ ತೆರೆಯಲಾಗುವುದು ? (ಮಾಹಿತಿ ನೀಡುವುದು)

## ಮಿನಿ ವಿಧಾನ ಸೌಧ ನಿರ್ಮಿಸುವುದು.

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೨೨(೨೪೨೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ನಗರದಲ್ಲಿ ಮಿನಿ ವಿಧಾನ ಸೌಧ ನಿರ್ಮಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಅದು ಯಾವ ಸ್ಥಳದಲ್ಲಿ ಮತ್ತು ಕಟ್ಟಡವನ್ನು ನಿರ್ಮಾಣ ಮಾಡಲು ಎಷ್ಟು ಹಣ ಬೇಕಾಗುತ್ತದೆ ; ಕಟ್ಟಡದ ಕಾಮಗಾರಿಯನ್ನು ಕೈಗೊಳ್ಳಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಯಾವಾಗ ಪ್ರಾರಂಭಿಸಲಾಗುವುದು ಅಥವಾ ಪ್ರಸ್ತಾವನೆಯು ಯಾವ ಹಂತದಲ್ಲಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಹೊಸದಾಗಿ I.T.I ಕಾಲೇಜುಗಳ ಪ್ರಾರಂಭ.

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೨೩(೨೪೨೦) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಹೊಸದಾಗಿ ಪ್ರಾರಂಭಿಸಲಾಗಿರುವ I.T.I ಕಾಲೇಜುಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಹೊಸ I.T.I ಕಾಲೇಜುಗಳನ್ನು ಪ್ರಾರಂಭಿಸುವ ಪ್ರಸ್ತಾವನೆಗಳೆಷ್ಟು ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ ಪ್ರಾರಂಭ ಮಾಡುವುದು ಯಾವಾಗ ಮತ್ತು ಎಲ್ಲಿ ? (ಮಾಹಿತಿ ನೀಡುವುದು)

# ತಹಶೀಲ್ದಾರ ಕಛೇರಿಗಳಲ್ಲಿ ಪಹಣೆ/ಜಾತಿ ಪ್ರಮಾಣ ಪತ್ರಗಳಿಗೆ ವಿಳಂಬ.

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೨೧೨೪(೨೪೧೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿ ತಹಶೀಲ್ದಾರರ ಕಛೇರಿಗಳಲ್ಲಿ ಸಾರ್ವಜನಿಕರಿಗೂ ಮತ್ತು ರೈತರಿಗೂ ತಮ್ಮ ಜಮೀನಿನ ಪಹಣೆ ಪತ್ರಿಕೆ ಪಡೆದುಕೊಳ್ಳಲು ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಇದರ ನಿವಾರಣೆಗೆ ಸರ್ಕಾರವು ಈ ಬಗ್ಗೆ ಕೂಡಲೇ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಅರ್ಜಿ ಸಲ್ಲಿಸಿದ ಕೂಡಲೇ ತ್ವರಿತವಾಗಿ ಜಮೀನಿನ ದಾಖಲಾತಿಗಳನ್ನು ನೀಡಲು ತಹಶೀಲ್ದಾರ ಕಛೇರಿಯಲ್ಲಿ ರೈತರಿಗೆ ತುಂಬಾ ತೊಂದರೆ ಅನುಭವಿಸುತ್ತಿರುವುದರಿಂದ ಕೂಡಲೇ ಬೇಜವಾಬ್ದಾರಿ ಅಧಿಕಾರಿ/ನೌಕರರ ವರ್ತನೆ ವಿರುದ್ಧ ಯಾವ ಕ್ರಮ ಜರುಗಿಸಲಾಗುವುದು ; (ಮಾಹಿತಿ ನೀಡುವುದು)

(ಈ) ಬೀದರ್ ಜಿಲ್ಲೆಯಲ್ಲಿ ಜಾತಿ ಪ್ರಮಾಣ ಪತ್ರ ಹಾಗೂ ಆದಾಯ ಪ್ರಮಾಣ ಪತ್ರ ಪಡೆದಕೊಳ್ಳಲು ಆಗುತ್ತಿರುವ ತೊಂದರೆಗಳೇನು ; ಮತ್ತು ತೊಂದರೆ ಆಗದಂತೆ ಸರ್ಕಾರವು ಯಾವ ಕ್ರಮ ಕೈಗೊಳ್ಳುವುದು ? (ಸಂಪೂರ್ಣ ಮಾಹಿತಿ ನೀಡುವುದು)

# ರಾಜ್ಯದ ಕಾದಿಟ್ಟ ಅರಣ್ಯ ಪ್ರದೇಶಗಳಲ್ಲಿ ಸಂಭವಿಸಿದ ಬೆಂಕಿ ಅವಘಡಗಳು.

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೧೨೫(೨೫೨೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ತಿಂಗಳಲ್ಲಿ ರಾಜ್ಯದಲ್ಲಿ ಎಷ್ಟು ಕಡೆ ಕಾದಿಟ್ಟ ಅರಣ್ಯ ಪ್ರದೇಶಕ್ಕೆ ಬೆಂಕಿ ಅವಘಡ ಸಂಭವಿಸಿದ ಪ್ರಕರಣಗಳು ನಡೆದಿವೆ ; ಅವು ಎಲ್ಲೆಲ್ಲಿ ; ಯಾವ ಕಾರಣಕ್ಕೆ ; (ವಿವರ ನೀಡುವುದು)

(ಆ) ಈ ಬೆಂಕಿ ಅವಘಡದಲ್ಲಿ ಅಮೂಲ್ಯವಾದ ಔಷಧಿ ಸಸ್ಯಗಳು ಮತ್ತು ಪ್ರಕೃತಿ ಸಂಪತ್ತು ನಾಶ ಹೊಂದಿವೆ ; ಅವು ಯಾವುವು ; ಆದ ನಷ್ಟ ಎಷ್ಟು ; (ಪ್ರಕರಣವಾರು ವಿವರ ನೀಡುವುದು)

(ಇ) ಈ ಅನಾಹುತಗಳಿಗೆ ಸಂಬಂಧಿಸಿದಂತೆ ಸರ್ಕಾರ ಏನಾದರೂ ಕ್ರಮ ಕೈಗೊಂಡಿದೆಯೇ ;

(ಈ) ಈ ರೀತಿ ಬೆಂಕಿ ಅನಾಹುತ ಆಗದಂತೆ, ಕಾದಿಟ್ಟ ಅರಣ್ಯ ಪ್ರದೇಶಗಳನ್ನು ರಕ್ಷಿಸಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ?

## 'ಯುವ ನೀತಿ' ಯಡಿ ಬಳ್ಳಾರಿ ಜಿಲ್ಲೆಯಲ್ಲಿ ಅನುಷ್ಠಾನಗೊಂಡಿರುವ ಕಾರ್ಯಕ್ರಮಗಳ ಕುರಿತು.

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೧೨೬(೨೫೩೪) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರ ಜಾರಿಗೊಳಿಸಿರುವ "ಯುವ ನೀತಿ" ಯಡಿ ಬಳ್ಳಾರಿ ಜಿಲ್ಲೆಯಲ್ಲಿ ಅನುಷ್ಠಾನಗೊಂಡಿರುವ ಯುವ ಜನ ಕಾರ್ಯಕ್ರಮಗಳು ಯಾವುವು ;

(ಆ) ಕಳೆದ ಎರಡು ವರ್ಷಗಳಲ್ಲಿ ಮಾಡಿರುವ ಅನುದಾನದ ವೆಚ್ಚ ಎಷ್ಟು ? (ವರ್ಷಾವಾರು, ಕಾರ್ಯಕ್ರಮವಾರು ವಿವರ ನೀಡುವುದು)

## ಬಳ್ಳಾರಿ ಜಿಲ್ಲೆಯಲ್ಲಿರುವ ಅಸಂಘಟಿತ ಕಾರ್ಮಿಕರಿಗೆ ವಿಮೆ ಒದಗಿಸುವ ಕುರಿತು.

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೧೨೮(೨೫೩೫) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಅಸಂಘಟಿತ ವಲಯದ ಕಾರ್ಮಿಕರ ಸಂಖ್ಯೆ ಎಷ್ಟು ; (ಅಂಕಿ ಅಂಶಗಳೊಂದಿಗೆ ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಇವರಲ್ಲಿ ಎಷ್ಟು ಮಂದಿಯನ್ನು ರಾಷ್ಟ್ರೀಯ ಸ್ವಾಸ್ಥ್ಯ ವಿಮಾ ಯೋಜನೆಯಡಿ ನೋಂದಾಯಿಸಲಾಗಿದೆ ; ಬಾಕಿಯವರನ್ನು ವಿಮಾದಾರರನ್ನಾಗಿಸಲು ಇಲಾಖೆ ಕೈಗೊಂಡಿರುವ ಕ್ರಮವೇನು ?

## ಬಳ್ಳಾರಿ ಜಿಲ್ಲೆಯಲ್ಲಿರುವ ಕೆರೆಗಳ ಸ್ಥಿತಿಗತಿ ಕುರಿತು.

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೨೮(೨೫೩೬) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖಾ ವ್ಯಾಪ್ತಿಗೆ ಬರುವ ಕೆರೆಗಳ ಸಂಖ್ಯೆ ಎಷ್ಟು ; ಅವು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕೆರೆಗಳ ನೀರಿನ ಶೇಖರಣಾ ಸಾಮರ್ಥ್ಯವೆಷ್ಟು ; (ಕೆರೆವಾರು ಮಾಹಿತಿ ಒದಗಿಸುವುದು)

(ಇ) ಈ ಕೆರೆಗಳಲ್ಲಿ ದುಸ್ಥಿತಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಈ) ಈ ಕೆರೆಗಳನ್ನು ಸುಸ್ಥಿತಿಗೆ ತರಲು ಸರ್ಕಾರ ಯಾವ ಯಾವ ಕ್ರಮ ಕೈಗೊಳ್ಳಲಾಗುವುದು ?

## ನಾಗರಹೊಳೆ ರಾಷ್ಟ್ರೀಯ ಉದ್ಯಾನದ ಹಾಡಿಗಳಿಗೆ ನೀರಿನ ವ್ಯವಸ್ಥೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೨೯(೨೪೨೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಾಗರಹೊಳೆ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯ, ಕಾಕನಕೋಟೆ ಬಳ್ಳೆ ಅರಣ್ಯ ವಲಯದ ಡಿ.ಬಿ. ಕುಪ್ಪೆ ಗ್ರಾಮ ಪಂಚಾಯತಿಗೆ ಸೇರಿದ ಬಳ್ಳೇಹಾಡಿ, ಗೋಳೂರು, ಮಚ್ಚೂರು, ಆನೆಮಾಳ,

ಬಾವಲಿಹಾಡಿ, ಮನೆಮಾಲೆಹಾಡಿ, ಹೊಸೂರುಹಾಡಿ, ಗೋಳೂರು, ಗ್ರಾಮ, ಕಡೆಗದ್ದೆ ಗ್ರಾಮಗಳಲ್ಲಿ ನೀರಿನ ಬವಣೆ ನಿವಾರಿಸಲು ಸರ್ಕಾರ ಸಿದ್ಧವಿದ್ದರೂ, ಅರಣ್ಯ ಅಧಿಕಾರಿಗಳು ವನ್ಯಜೀವಿ ಕಾಯ್ದೆ ಅನ್ವಯ ಅಡ್ಡಿಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಹಾಡಿಗಳಿಗೆ ಸಾಮೂಹಿಕ ಅರಣ್ಯ ಹಕ್ಕುಪತ್ರ ನೀಡಿದ್ದರೂ ಅರಣ್ಯ ಅಧಿಕಾರಿಗಳು ತೊಂದರೆ ನೀಡುತ್ತಿದ್ದು, ಈ ಬಗ್ಗೆ ಹಾಡಿಯ ಜನರು ಪ್ರತಿಭಟನೆ ಮಾಡಿರುವುದು ಗಮನಕ್ಕೆ ಬಂದಿದೆಯೇ ; ಇದನ್ನು ನಿವಾರಣೆ ಮಾಡಿ ಈ ಹಾಡಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ ?

## ಹುಲಿಧಾಮಗಳ ದಿನಗೂಲಿ ನೌಕರರ ಸಮಸ್ಯೆ.

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೩೦(೨೪೨೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಹುಲಿಧಾಮಗಳು ಯಾವುವು ; ಇಲ್ಲಿ ದಿನಗೂಲಿ ಮೇಲೆ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು ; ಇವರಿಗೆ ನಿಗದಿಪಡಿಸಿರುವ ದಿನಗೂಲಿ ಎಷ್ಟು, ಹುಲಿಧಾಮಗಳ ದಿನಗೂಲಿ ನೌಕರರ ವೇತನಕ್ಕೆ ಸರ್ಕಾರ ಕಳೆದ ಎರಡು ವರ್ಷಗಳಲ್ಲಿ ಒದಗಿಸಿರುವ ಹಣ ಎಷ್ಟು ; (ಪ್ರತಿಯೊಂದು ಹುಲಿಧಾಮದ ವಿವರ ಒದಗಿಸುವುದು)

(ಆ) ದಿನಗೂಲಿ ನೌಕರರ ವೇತನವನ್ನು ಅವರ ಬ್ಯಾಂಕ್ ಖಾತೆಗೆ ಹಾಕಬೇಕೆಂಬ ನಿಯಮವಿದ್ದರೂ, ಗುತ್ತಿಗೆದಾರರು ಅದನ್ನು ಉಲ್ಲಂಘಿಸಿ ನೇರವಾಗಿ ಕಡಿಮೆ ದಿನಗೂಲಿ ನೀಡುವುದು, ಎರಡು ಮೂರು ತಿಂಗಳು ದಿನಗೂಲಿಯನ್ನು ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸುವರ್ಣಾವತಿ ಚಿಕ್ಕಹೊಳೆ ಜಲಾಶಯಗಳಿಂದ ಕೆರೆಗಳಿಗೆ ನೀರು

**ಶ್ರೀ ಎಸ್.ನಾಗರಾಜು (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೩೧ (೨೪೬೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಾಮರಾಜನಗರ ಜಿಲ್ಲೆಯ ಸುವರ್ಣಾವತಿ ಚಿಕ್ಕಹೊಳೆ ಜಲಾಶಯಗಳಿಂದ ಬೇಸಿಗೆಯಲ್ಲಿ ಜನ ಜಾನುವಾರುಗಳಿಗೆ ಕುಡಿಯುವ ನೀರನ್ನು ಒದಗಿಸಲು ದೊಡ್ಡಕೆರೆ, ಚಿಕ್ಕಕೆರೆ, ಸಿಂಡಿಗೆರೆ, ನಗರಕೆರೆ ಬಂಡಿಗೆರೆ ಮತ್ತು ಮರಗದ ಕೆರೆಗೆ ನೀರು ಹರಿಸುವಂತೆ ಜನತೆ ಒತ್ತಾಯಿಸಿರುವುದು ನಿಜವಲ್ಲವೆ; ಕೂಡಲೇ ಈ ಕೆರೆಗಳಿಗೆ ನೀರನ್ನು ಹರಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು; ಸದರಿ ಜಲಾಶಯಗಳಿಂದ ಈ ಕೆರೆಗಳಿಗೆ ನೀರು ಹರಿಯುವ ಕಾಲುವೆಗಳನ್ನು ದುರಸ್ತಿ ಪಡಿಸದೇ ಇರುವುದು ಗಮನಕ್ಕೆ ಬಂದಿದೆಯೇ; ಇವುಗಳನ್ನು ಎನ್ ಆರ್ ಇ ಜಿ ಅಥವಾ ಬೇರೆ ಯೋಜನೆ ಅಡಿಯಲ್ಲಿ ದುರಸ್ತಿಗೊಳಿಸಲು ಕ್ರಮ ಜರುಗಿಸಲಾಗುವುದೇ ?

## ನೇಕಾರರ ಸಮಗ್ರ ಅಭಿವೃದ್ಧಿ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೩೨ (೨೫೬೧) ಮಾನ್ಯ ಜವಳಿ ಹಾಗೂ ಬಂದರು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ನೇಕಾರರ ಸಮಗ್ರ ಅಭಿವೃದ್ಧಿಗಾಗಿ ೨೦೧೪-೧೫ನೇ ಸಾಲಿನ ಆಯವ್ಯಯದಲ್ಲಿ ೧೨೦ ಕೋಟಿ ರೂ. ಒದಗಿಸಿರುವುದು ನಿಜವೇ ;

(ಆ) ನೇಕಾರರ ಅಭಿವೃದ್ಧಿಗಾಗಿ ರಾಜ್ಯದಲ್ಲಿ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ;

(ಇ) ಈ ಯೋಜನೆಯಲ್ಲಿ ರಾಜ್ಯದ ಎಷ್ಟು ನೇಕಾರರಿಗೆ ಪ್ರಯೋಜನವಾಗಿದೆ ; (ವಿವರ ನೀಡುವುದು)

(ಈ) ಇದಕ್ಕಾಗಿ ಬಿಡುಗಡೆ ಮಾಡಿದ ಅನುದಾನ ಸದ್ಬಳಕೆಯಾಗಿದೆಯೇ ? (ವಿವರ ನೀಡುವುದು)

## ಆನೆಗಳು ರೈತರ ಬೆಳೆಗಳನ್ನು ನಾಶಪಡಿಸುತ್ತಿರುವುದು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೩೩ (೨೪೨೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಆನೆಗಳು ರೈತರ ಬೆಳೆಗಳನ್ನು ನಾಶಪಡಿಸಿರುವುದು; ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ಈ ವಿಷಯದಲ್ಲಿ ಪರಿಹಾರಧನ ವಿತರಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿ ಇಂತಹ ಎಷ್ಟು ಜನ ರೈತರ ಬೆಳೆಗಳು ಹಾನಿಗೊಳಗಾಗಿರುತ್ತವೆ; ಎಷ್ಟು ಪರಿಹಾರಧನ ವಿತರಿಸಲಾಗಿದೆ ;

(ಇ) ನಮ್ಮ ರಾಜ್ಯದಲ್ಲಿ ೨೦೧೪-೨೦೧೫ನೇ ಸಾಲಿನಲ್ಲಿ ಎಷ್ಟು ಜನ ರೈತರ ಬೆಳೆಗಳು ಹಾನಿಗೊಳಗಾಗಿವೆ; ಎಷ್ಟು ಜನ ರೈತರಿಗೆ ಪರಿಹಾರಧನ ವಿತರಿಸಲಾಗಿದೆ ?

## ಖಾಲಿಯಿರುವ ಸರ್ವೆಯರ್ ಹುದ್ದೆಗಳನ್ನು ತುಂಬುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೨೧೩೪ (೨೪೨೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಸರ್ವೆಯರ್ ಹುದ್ದೆಗಳು ಖಾಲಿ ಇರುತ್ತವೆ; ಅವುಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಹುದ್ದೆಗಳು ಖಾಲಿ ಇರುವುದರಿಂದ ಸರ್ವೆ ಮಾಡುವ ಕೆಲಸ ವಿಳಂಬವಾಗಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಕೂಡಲೇ ಈ ಹುದ್ದೆಗಳನ್ನು ತುಂಬಲು ಕ್ರಮಕೈಗೊಳ್ಳಲಾಗುವುದೇ ?

## ಬೆಳಗಾವಿ ಜಿಲ್ಲೆ ಇಂಚಲ ನೀರಾವರಿ ಕೆರೆಗೆ ನೀರು ತುಂಬಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೨೧೩೫ (೨೪೩೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಈ ವರ್ಷದ ಆಯವ್ಯಯದಲ್ಲಿ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಘೋಷಣೆ ಮಾಡಿದ ಸಂಗತಿ ನಿಜವೇ ;

(ಆ) ಸವದತ್ತಿ ತಾಲ್ಲೂಕಿನ ಇಂಚಲ ನೀರಾವರಿ ಕೆರೆಗೆ ಹಿರೇಬೂದನೂರು ಕೆರೆಯಿಂದ ಅಥವಾ ಬೇರೆ ಯಾವುದೇ ಮೂಲದಿಂದ ನೀರು ತುಂಬಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ಈ ಕೆರೆಗೆ ಯಾವ ಪ್ರಕಾರ ನೀರು ತುಂಬಿಸಬೇಕು; ನೀರಿನ ಲಭ್ಯತೆ ಹೇಗೆ, ಯಾವ ಮೂಲದಿಂದ ತುಂಬಿಸಬೇಕು ಎಂಬುದನ್ನು ಸರ್ವೆ ಮಾಡಲು ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರಿಗೆ ಆದೇಶಿಸಲಾಗುವುದೇ ?

## ಶಿವಯೋಗ ಮಂದಿರದ ಚಿಕ್ಕ ನೀರಾವರಿ ಕೆರೆಯ ಹೂಳು ತೆಗೆಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೨೧೩೬ (೨೪೩೧) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಜಿಲ್ಲೆಯ ಶಿವಯೋಗ ಮಂದಿರದಲ್ಲಿ ಸಣ್ಣ ನೀರಾವರಿ ಇಲಾಖೆಗೆ ಸೇರಿದ ಕೆರೆಯಲ್ಲಿ ಗಿಡಕಂಟಿಗಳು ಬೆಳೆದಿದ್ದು, ಸಾಕಷ್ಟು ಹೂಳು ತುಂಬಿದ್ದು, ಅದನ್ನು ತೆಗೆಸಲು ಕ್ರಮ ಕೈಗೊಳ್ಳಲಾಗುವುದೇ ;

(ಆ) ಸಾಕಷ್ಟು ಹೂಳು ತುಂಬಿದ್ದರಿಂದ ಅಲ್ಲಿ ನೀರು ನಿಲ್ಲದಂತೆ ಆಗಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಬೇಸಿಗೆಯಲ್ಲಿ ದನಕರುಗಳಿಗೆ ಕುಡಿಯುವ ನೀರಿನ ತೊಂದರೆ ಆಗಬಾರದೆಂಬ ಉದ್ದೇಶದಿಂದ ಹೂಳು ತೆಗೆಯಲು ಕ್ರಮ ಕೈಗೊಳ್ಳಲಾಗುವುದೇ; ಹಾಗೂ ಇದಕ್ಕೆ ಅವಶ್ಯವಿರುವ ಹಣ ಬಿಡುಗಡೆ ಮಾಡಲಾಗುವುದೇ ?

# ಮಲಪ್ರಭಾ ನದಿಯಿಂದ ಬೈಲಹೊಂಗಲ ತಾಲ್ಲೂಕಿನ ದೊಡ್ಡವಾಡ ಕೆರೆಗೆ ನೀರು ತುಂಬಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೨೧೩೭ (೨೪೨೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನದಿಯಿಂದ ಕೆರೆಗೆ ನೀರು ತುಂಬಿಸುವ ಕಾರ್ಯಕ್ರಮವನ್ನು ಈ ವರ್ಷದ ಆಯವ್ಯಯ ಪತ್ರದಲ್ಲಿ ಘೋಷಿಸಲಾಗಿದೆಯೇ ;

(ಆ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ದೊಡ್ಡವಾಡ ಕೆರೆಗೆ ಮಲಪ್ರಭಾ ನದಿಯಿಂದ ನೀರು ತುಂಬಿಸುವ ಕೆಲಸ ಕೈಗೊಳ್ಳಲಾಗುವುದೇ;

(ಇ) ಈ ಕೆರೆಗೆ ನೀರು ತುಂಬಿಸುವುದರಿಂದ ಬರಗಾಲಕ್ಕೆ ತುತ್ತಾಗುತ್ತಿರುವ ದೊಡ್ಡವಾಡ, ಬೆಳವಡಿ, ನನಗುಂಡಿಕೊಪ್ಪ, ಉಡಕೇರಿಗಳ ಜಮೀನುಗಳಿಗೆ ಅನುಕೂಲವಾಗುವುದಿಲ್ಲವೇ ;

(ಈ) ಈ ಕೆರೆಗೆ ನೀರಿನ ಲಭ್ಯತೆ ಹಾಗೂ ನೀರನ್ನು ಯಾವ ಮೂಲದಿಂದ ತೆಗೆದುಕೊಳ್ಳಬೇಕು ಎಂಬುದನ್ನು ತಯಾರಿಸುವ ಪ್ರಾಜೆಕ್ಟ್ ರಿಪೋರ್ಟ್ ಹಾಗೂ ಸರ್ವೆ ಕೆಲಸ ಕೈಗೊಳ್ಳಲು ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ನೀರಾವರಿ ನಿಗಮ, ಬೆಂಗಳೂರು ಇವರಿಗೆ ಆದೇಶ ಮಾಡಲಾಗುವುದೇ ?

# ಭೀಮನ ಕೊಲ್ಲಿಯಲ್ಲಿ ನಾವೆ ಹಾಗೂ ಜಟ್ಟಿ ನಿರ್ಮಾಣ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೨೧೩೮ (೨೪೪೪೩) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ಜಿಲ್ಲೆ, ಹೆಚ್.ಡಿ.ಕೋಟೆ ತಾಲ್ಲೂಕಿನ ಭೀಮನ ಕೊಲ್ಲಿಯ ಶ್ರೀ ಮಹದೇಶ್ವರಸ್ವಾಮಿ ದೇವಸ್ಥಾನಕ್ಕೆ ಕಬಿನಿ ಜಲಾಶಯದ ಮುಳುಗಡೆಯಿಂದ ಸುತ್ತಮುತ್ತಲಿನ ಗ್ರಾಮಸ್ಥರು ದೇವಸ್ಥಾನಕ್ಕೆ ಬಂದು ಹೋಗಲು ಒಂದು ಸುಸಜ್ಜಿತ ಯಾಂತ್ರೀಕೃತ ನಾವೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಸದರಿ ಸ್ಥಳದಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ನಿರ್ಮಿಸಲಾದ ಜಟ್ಟಿ ನಿರ್ಮಾಣದ ಕಾಮಗಾರಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಉ) ಯಾವ ಕಾಲಮಿತಿಯಲ್ಲಿ ನಾವೆ ಹಾಗೂ ಜಟ್ಟಿ ನಿರ್ಮಾಣದ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ?

## ಬೋಳಾರೆ ಸಣ್ಣ ಅಣೆಕಟ್ಟಿನ ಒತ್ತುವರಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೨೧೩೯ (೨೪೪೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಕೊಪ್ಪ ಹೋಬಳಿಯ ಬೋಳಾರೆ ಸಣ್ಣ ಅಣೆಕಟ್ಟು ಸರ್ಕಾರಿ ದಾಖಲೆಯಲ್ಲಿ ಇದೆಯೇ; ಇದ್ದಲ್ಲಿ, ಈ ಅಣೆಕಟ್ಟು ನಿರ್ಮಾಣಗೊಂಡಿದ್ದು ಯಾವಾಗ ;

(ಆ) ಸದರಿ ಅಣೆಕಟ್ಟು ಎಷ್ಟು ಎಕರೆ ಪ್ರದೇಶದಲ್ಲಿ ನಿರ್ಮಾಣಗೊಂಡಿದೆ; ಅಣೆಕಟ್ಟಿನಿಂದ ಎಷ್ಟು ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಒದಗಿಸಲಾಗಿದೆ ;

(ಇ) ಸದರಿ ಅಣೆಕಟ್ಟಿನ ಜಾಗವು ಬೇನಾಮಿ ವ್ಯಕ್ತಿಗಳಿಂದ ಒತ್ತುವರಿಯಾಗಿದೆಯೆ; ಒತ್ತುವರಿಯಾಗಿದ್ದಲ್ಲಿ, ತೆರವುಗೊಳಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ?

## ಸೋಮನಹಳ್ಳಿ ಗ್ರಾಮದ ಜಮೀನನ್ನು ಖಾಸಗಿಯವರು ಕಬಳಿಸಿದ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೨೧೪೦ (೨೪೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಸೋಮನಹಳ್ಳಿ ಗ್ರಾಮದ ಸರ್ವೆ ನಂಬರ್ ೨೨೫ (ರೀ ಸರ್ವೆ ನಂಬರ್ ೨೬೪, ೨೬೫, ೨೬೬) ಈ ಜಮೀನು ವಾಸ್ತವವಾಗಿ ಶ್ರೀ ಆಂಜನೇಯಸ್ವಾಮಿ ಹಾಗೂ ವಿರಾಟ್ ಕಾಲರುದ್ರ

ಮುನೇಶ್ವರಸ್ವಾಮಿ ದೇವಾಲಯದ್ದಾಗಿದ್ದು, ಈ ಸಂಬಂಧ ನಕಲಿ ದಾಖಲೆ ಸೃಷ್ಟಿಸಿ, ಖಾಸಗಿಯವರು ಕಬಳಿಸಿರುವುದರ ವಿರುದ್ಧ ರಿಟ್ ಅರ್ಜಿ ಸಂಖ್ಯೆ ೪೬೪೩೫/೨೦೧೩ರಲ್ಲಿ ಸದರಿ ಜಮೀನನ್ನು ಸರ್ಕಾರಕ್ಕೆ ವಶಪಡಿಸಿಕೊಳ್ಳುವಂತೆ ಉಚ್ಚನ್ಯಾಯಾಲಯ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಉಚ್ಚನ್ಯಾಯಾಲಯದ ಆದೇಶಕ್ಕೆ ಪೂರಕವಾಗಿ ತಹಶೀಲ್ದಾರರು ಸಹ ವರದಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಜಮೀನು ಮತ್ತು ದೇವಸ್ಥಾನ ಪ್ರಸ್ತುತ ಯಾರ ಸ್ವಾಧೀನದಲ್ಲಿದೆ; ದೇವಾಲಯದ ಪೂಜಾ ಕೈಂಕರ್ಯಗಳನ್ನು ಯಾರಿಂದ ನೆರವೇರಿಸಲಾಗುತ್ತಿದೆ ;

(ಈ) ಕೋರ್ಟ್ ಹಾಗೂ ತಹಶೀಲ್ದಾರರ ವರದಿಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಉ) ಯಾವ ಕಾಲಮಿತಿಯಲ್ಲಿ ಜಮೀನನ್ನು ಸರ್ಕಾರದ ವಶಕ್ಕೆ ತೆಗೆದುಕೊಂಡು ದೇವಾಲಯದ ಪೂಜಾ ಕೈಂಕರ್ಯಗಳನ್ನು ನಡೆಸಲು ಅವಕಾಶ ಕಲ್ಪಿಸಲಾಗುವುದು ?

## ಪರೀಕ್ಷಾ ಸುಧಾರಣೆಯ ಸಂಬಂಧ ಮಧ್ಯಂತರ ವರದಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೨೧೪೧ (೨೪೪೪೪) ) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶ್ರೀ ಹೆಚ್. ಮಹೇಶಪ್ಪ, ಉಪ ಕುಲಪತಿಗಳು, ವಿ.ಟಿ.ಯು. ಬೆಳಗಾಂ ಇವರ ನೇತೃತ್ವದಲ್ಲಿ ಪರೀಕ್ಷಾ ಸುಧಾರಣೆ ಸಮಿತಿಯು ನೀಡಿರುವ ಮಧ್ಯಂತರ ವರದಿಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಸದರಿ ವರದಿಯಲ್ಲಿನ ಅಂಶಗಳೇನು ; (ವಿವರ ನೀಡುವುದು)

(ಇ) ಸದರಿ ವರದಿಯನ್ನು ಅನುಷ್ಠಾನಗೊಳಿಸುವಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಯಾವ ಕಾಲಮಿತಿಯಲ್ಲಿ ವರದಿಯನ್ನು ಅನುಷ್ಠಾನಗೊಳಿಸಲಾಗುವುದು ?

## ಜೈನ ಸಮಾಜದವರಿಗೆ ಧಾರ್ಮಿಕ ಅಲ್ಪಸಂಖ್ಯಾತರ ಪ್ರಮಾಣ ಪತ್ರ ಕೊಡುವ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೨೧೪೨ (೨೪೩೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಜೈನ ಧರ್ಮೀಯರಿಗೆ ಧಾರ್ಮಿಕ-ಅಲ್ಪಸಂಖ್ಯಾತರ ಪ್ರಮಾಣ ಪತ್ರವನ್ನು ಕೊಡಲಾಗುತ್ತಿದೆಯೆ ;

(ಆ) ಹಾಗಿದ್ದಲ್ಲಿ, ಶ್ವೇತಾಂಬರ ಹಾಗೂ ದಿಗಂಬರ ಜೈನ ಪಂಥದವರಿಬ್ಬರಿಗೂ ತಹಶೀಲ್ದಾರರ ಕಛೇರಿಗಳಲ್ಲಿ ಅಲ್ಪಸಂಖ್ಯಾತರ ಪ್ರಮಣ ಪತ್ರ ನೀಡಲಾಗುತ್ತಿದೆಯೇ ;

(ಇ) ಬೆಂಗಳೂರು ನಗರ ಜಿಲ್ಲೆಗಳು/ ತಾಲ್ಲೂಕುಗಳಲ್ಲಿ ಸರ್ಕಾರ ನಿಗಧಿಪಡಿಸಿದ ಷೆಡ್ಯೂಲಿನಲ್ಲಿ ಜೈನ ಧರ್ಮ ನಮೂದಾಗದೇ ಇರುವುದರಿಂದ ಪ್ರಮಾಣ ಪತ್ರ ನೀಡಲು ತೊಂದರೆ ಕೊಡಲಾಗುತ್ತಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಜೈನ ಧರ್ಮವು ಭಾರತ ಸರ್ಕಾರದಿಂದ ಧಾರ್ಮಿಕ-ಅಲ್ಪಸಂಖ್ಯಾತರ ಧರ್ಮವೆಂದು ಘೋಷಣೆಯಾಗಿರುವುದರಿಂದ

|

ಜೈನ ಧರ್ಮೀಯರೆಲ್ಲರಿಗೂ ಪ್ರಮಾಣ ಪತ್ರ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ನೋಂದಣಿ ಇಲಾಖೆಯಲ್ಲಿನ ಭ್ರಷ್ಟಾಚಾರ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೧೪೩ (೨೪೩೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನೋಂದಣಿ ಇಲಾಖೆಯಲ್ಲಿ ಭ್ರಷ್ಟಾಚಾರ ತೀವ್ರ ಹೆಚ್ಚಳವಾಗಿರುವ ಕುರಿತು ಸಾರ್ವಜನಿಕವಾಗಿ ಚರ್ಚೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಜನ ನೋಂದಣಿ ಇಲಾಖೆಯ ಸಿಬ್ಬಂದಿಗಳ ಮೇಲೆ ಲೋಕಾಯುಕ್ತ ದಾಳಿ ಪ್ರಕರಣಗಳು ದಾಖಲಾಗಿವೆ; ಪ್ರತಿಯೊಂದು ಪ್ರಕರಣದ ವಿವರ ನೀಡುವುದು ;

(ಇ) ನೋಂದಣಿ ಇಲಾಖೆಯಲ್ಲಿರುವ ಹುದ್ದೆವಾರು ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಈ) ತಾತ್ಕಾಲಿಕ / ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## I.T.I ಶಿಕ್ಷಣಕ್ಕೆ ಸುವ್ಯವಸ್ಥೆಗೊಳಿಸಿ ಕಾಯಕಲ್ಪ ಒದಗಿಸುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೧೪೪ (೨೪೩೫) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ I.T.I ಶಿಕ್ಷಣ (ಇಲಾಖೆಯಿಂದ ಆರಂಭಿಸಿ ಕಾಲೇಜುಗಳವರೆಗೂ) ಸುವ್ಯವಸ್ಥಿತ ರೀತಿಯಲ್ಲಿ ಕಾಯಕಲ್ಪ

ಒದಗಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ನಿಟ್ಟಿನಲ್ಲಿ ಸರ್ಕಾರದ ನೀತಿ ಹಾಗೂ ಕಾರ್ಯ ಯೋಜನೆ ಏನು ?

## ತೋಟಗಾರಿಕಾ ಬೆಳೆ ಹಾನಿಗೆ ಒದಗಿಸಲಾದ ಪರಿಹಾರ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೧೪೫ (೨೪೩೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿ ಅಕಾಲಿಕ ಮಳೆಯಿಂದಾಗಿ ಆನೇಕ ತೋಟಗಾರಿಕಾ ಬೆಳೆಗಳು ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಯಾವ ಯಾವ ಬೆಳೆಗಳು ಹಾನಿಯಾಗಿದೆ ;

(ಇ) ಎಷ್ಟು ಮೊತ್ತದ ಬೆಳೆಗಳು ಹಾನಿಗೆ ಒಳಗಾಗಿರುತ್ತವೆ ;

(ಈ) ಹಾನಿಗೊಳಗಾದ ರೈತರಿಗೆ ನೀಡಿರುವ ಪರಿಹಾರ ಏನು ;

(ಉ) ಈ ನಿಟ್ಟಿನಲ್ಲಿ ಸರ್ಕಾರದ ಕ್ರಮ ಏನು ? (ಬೆಳೆವಾರು, ರೈತವಾರು, ಪರಿಹಾರದ ಮೊತ್ತವಾರು ಸಂಪೂರ್ಣ ವಿವರ ನೀಡುವುದು)

## ಜಲಸಂಪನ್ಮೂಲ ಇಲಾಖೆಯಲ್ಲಿನ ಹುದ್ದೆಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೧೪೬ (೨೪೩೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಲಸಂಪನ್ಮೂಲ ಇಲಾಖೆಯಲ್ಲಿ ಹೊಸದಾಗಿ ಸೃಜಿಸಲಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಅವು ಯಾವುವು ;

(ಆ) ಇದರಲ್ಲಿ ನೇರ ನೇಮಕಾತಿಗೆ ಇರುವ ಹುದ್ದೆಗಳು ಎಷ್ಟು; ಪದೋನ್ನತಿ ಮೂಲಕ ಭರ್ತಿ ಮಾಡಲಿರುವ ಹುದ್ದೆಗಳು ಎಷ್ಟು;

(ಇ) ನೇರ ನೇಮಕಾತಿಯಾಗದೇ ಎಷ್ಟು ವರ್ಷಗಳಾಯಿತು; ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಈ) ನಿಯಮ ೩೨ರ ಅಡಿ ಪ್ರಭಾರದಲ್ಲಿ ಇರುವ ಹುದ್ದೆಗಳು ಎಷ್ಟು; ಅವು ಯಾವುವು ?

## ಕರ್ನಾಟಕ ಮೇಲ್ಮನವಿ ಪ್ರಾಧಿಕಾರದಲ್ಲಿ ಬಾಕಿ ಇರುವ ಮೇಲ್ಮನವಿ ಪ್ರಕರಣಗಳು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೧೪೭ (೨೪೩೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಮೇಲ್ಮನವಿ ಪ್ರಾಧಿಕಾರದಲ್ಲಿ (Karnataka Appellate Tribunal) ಕಂದಾಯ ಇಲಾಖೆಗೆ ಸಂಬಂಧಿಸಿದ ಎಷ್ಟು ಮೇಲ್ಮನವಿ ಪ್ರಕರಣಗಳು ಬಾಕಿ ಇವೆ ;

(ಆ) ಯಾವ ಪ್ರಕರಣ ಯಾವ ದಿನಾಂಕದಿಂದ ಬಾಕಿ ಇವೆ; (ಪ್ರಕರಣವಾರು ವಿವರ ನೀಡುವುದು) ;

(ಇ) ನ್ಯಾಯ ನೀಡುವಿಕೆಯಲ್ಲಿ ತುಂಬಾ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಬಾಲ ಕಾರ್ಮಿಕ ಪದ್ಧತಿ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) :-**

೨೧೪೮ (೨೪೯೯) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೩ ವರ್ಷಗಳಲ್ಲಿ ಎಷ್ಟು ಬಾಲಕಾರ್ಮಿಕರನ್ನು ಪತ್ತೆ ಮಾಡಲಾಗಿದೆ ;

(ಆ) ಬಾಲ ಕಾರ್ಮಿಕ ಪದ್ಧತಿಯನ್ನು ನಿರ್ನಾಮ ಮಾಡಲು ಕಳೆದ ಮೂರು ವರ್ಷಗಳಲ್ಲಿ ಖರ್ಚು ಮಾಡಲಾದ ಹಣವೆಷ್ಟು ;

(ಇ) ಬಾಲ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ತೊಡೆದು ಹಾಕಲು ಸರ್ಕಾರವು ಕೈಗೊಂಡ' ಕ್ರಮಗಳೇನು ? (ಪೂರ್ಣ ವಿವರ ನೀಡುವುದು)

## ತಿಪ್ಪಗೊಂಡನಹಳ್ಳಿ ಜಲಾಶಯದ ಪರಿಸರ ಹಾನಿ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) :-**

೨೧೪೯ (೨೫೨೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರ್ಕಾವತಿ ಮತ್ತು ಕುಮುದ್ವತಿ ನದಿಗಳ ಜೀವನಾಡಿಯಾಗಿರುವ ತಿಪ್ಪಗೊಂಡನಹಳ್ಳಿ ಜಲಾಶಯದ ಅಚ್ಚುಕಟ್ಟು ಪ್ರದೇಶದಲ್ಲಿ ಕೃಷಿ ಹೊರತುಪಡಿಸಿ ಇತರೆ ಚಟುವಟಿಕೆಗಳನ್ನು ನಿಷೇಧಿಸಿರುವುದು ನಿಜವೇ ;

(ಆ) ಈ ನಿಷೇಧದ ಆದೇಶವನ್ನು ಈಗ ವಾಪಸ್ಸು ಪಡೆಯಲಾಗಿದೆಯೇ ಅಥವಾ ಆದೇಶ ಜಾರಿಯಲ್ಲಿದೆಯೇ ;

(ಇ) ತಿಪ್ಪಗೊಂಡನಹಳ್ಳಿ ಜಲಾಶಯದ ಅಚ್ಚುಕಟ್ಟು ಪ್ರದೇಶದಲ್ಲಿ ಪರಿಸರವನ್ನು ಹಾನಿ ಮಾಡುತ್ತಿರುವ ಅನಧಿಕೃತ ಬಡಾವಣೆಗಳು ಕಟ್ಟಡಗಳು ಕಾರ್ಖಾನೆ ಇತ್ಯಾದಿಗಳು ಎಷ್ಟಿವೆ; ಅವುಗಳನ್ನು ತೆರವುಗೊಳಿಸಲು ಸರ್ಕಾರ ಹಮ್ಮಿಕೊಂಡಿರುವ ಕ್ರಮಗಳೇನು ?

## ಬಲಿಜ ಸಂಘ' ಕ್ಕೆ ಆಡಳಿತಾಧಿಕಾರಿ ನೇಮಕ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) :-**

೨೧೫೦ (೨೫೨೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಚಾಮರಾಜಪೇಟೆಯಲ್ಲಿರುವ 'ಕರ್ನಾಟಕ ಪ್ರದೇಶ ಬಲಿಜ ಸಂಘ' ಕ್ಕೆ ಸರ್ಕಾರ ಆಡಳಿತಾಧಿಕಾರಿಯನ್ನು ನೇಮಕ ಮಾಡಿದೆ. ಈ ನೇಮಕ ಮಾಡಲು ಸರ್ಕಾರದ ಮುಂದಿದ್ದ ಸಂಘದ ಅಕ್ರಮಗಳು ಯಾವುವು ;

(ಆ) ಆಡಳಿತಾಧಿಕಾರಿಯನ್ನು ನೇಮಕ ಮಾಡಿ, ೨-೩ ವರ್ಷಗಳು ಕಳೆದರೂ ಈವರೆಗೂ ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸದಿರಲು ಕಾರಣಗಳೇನು ?

## ಅರಣ್ಯ ಇಲಾಖೆಯಲ್ಲಿ ಸೃಜಿಸಲಾಗಿರುವ ಹುದ್ದೆಗಳು

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) :-**

೨೧೫೧ (೨೪೩೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಅಡಿ ಸೃಜಿಸಲಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು; ಅವು ಯಾವುವು ;

## ಅರಣ್ಯ ಪ್ರದೇಶದಲ್ಲಿ ಅರಣ್ಯ ಕೈಗಾರಿಕೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೧೫೩ (೨೪೫೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ಕೈಗಾರಿಕೆ ನಡೆಸುವ ಯೋಜನೆ ಸರ್ಕಾರಕ್ಕೆ ಇದೆಯೇ; ಹೌದಾದಲ್ಲಿ, ಯಾವ ಯಾವ ಪ್ರದೇಶದ ಅರಣ್ಯಗಳಲ್ಲಿ ಅರಣ್ಯ ಕೈಗಾರಿಕೆ ನಡೆಸಲಾಗುತ್ತದೆ ;

(ಆ) ಅರಣ್ಯ ಕೈಗಾರಿಕೆ ನಡೆಸುವುದರಿಂದ ಅರಣ್ಯ ನಾಶ ಉಂಟಾದಲ್ಲಿ ಇದಕ್ಕೆ ಯಾರು ಹೊಣೆ ;

(ಇ) ಅರಣ್ಯದಲ್ಲಿ ಸಿಗುವ ವಸ್ತುಗಳನ್ನು ಮಾರಾಟ ಮಾಡಲು ಅವಕಾಶ ಕಲ್ಪಿಸಿದರೆ ಇದರಿಂದ ನಿರಂತರ ಅರಣ್ಯ ನಾಶಕ್ಕೆ ಅನುಮತಿ ನೀಡಿದಂತಾಗುವುದಿಲ್ಲವೇ ?

## ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ವಿಳಂಬ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೧೫೪ (೨೪೪೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಹಾಗೂ ೨೦೧೪–೨೦೧೫ನೇ ಸಾಲಿನಲ್ಲಿ ಬೃಹತ್ ನೀರಾವರಿಗಾಗಿ ಹಂಚಿಕೆಯಾದ ಅನುದಾನವೆಷ್ಟು ;

(ಆ) ಈ ಅನುದಾನದಲ್ಲಿ ಬಿಡುಗಡೆಯಾದ ಹಣವೆಷ್ಟು ಹಾಗೂ ಬಿಡುಗಡೆಯಾದ ಹಣಕ್ಕೆ ವ್ಯಯಿಸಲಾದ ಹಣದ ಮಾಹಿತಿಯನ್ನು ಒದಗಿಸುವುದು ; (ಯೋಜನೆವಾರು)

(ಇ) ನೀರಾವರಿಗೆ ಹೆಚ್ಚು ಒತ್ತು ಕೊಟ್ಟು ಅನುದಾನ ಹಂಚಿಕೆ ಮಾಡಿದ್ದರೂ ಕೂಡ, ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ವಿಳಂಬವಾಗಿ ಹಣವನ್ನು ವ್ಯಯಿಸದೇ ಇರಲು ಕಾರಣಗಳೇನು ?

## ಸರ್ಕಾರಿ ಸ್ವಾಮ್ಯದ ಪ್ರಿಯದರ್ಶಿನಿ ಸಂಸ್ಥೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೧೫೫ (೨೫೦೪) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಸ್ವಾಮ್ಯದ ಪ್ರಿಯದರ್ಶಿನಿ ಸಂಸ್ಥೆಯು ಕಳೆದ ೩ ವರ್ಷಗಳಲ್ಲಿ ಮಾಡಿದ ವಹಿವಾಟಿನ ಮಾಹಿತಿಯನ್ನು ಒದಗಿಸುವುದು ;

(ಆ) ಸರ್ಕಾರಿ ಶಾಲೆಯ ಮಕ್ಕಳಿಗೆ ಒದಗಿಸುವ ಸಿದ್ಧ ಉಡುಪುಗಳನ್ನು ಈ ಸಂಸ್ಥೆಯಿಂದಲೇ ಒದಗಿಸಲಾಗುತ್ತಿದೆಯೇ ;

(ಇ) ಪ್ರಿಯದರ್ಶಿನಿ ಸಂಸ್ಥೆಯು ರಾಜ್ಯದ ನೇಕಾರರಿಗೆ ಪ್ರೋತ್ಸಾಹಿಸಲು ಯಾವ ಹೊಸ ಯೋಜನೆಗಳನ್ನು ರೂಪಿಸಿದೆ ? (ಮಾಹಿತಿ ನೀಡುವುದು)

## ಅರಣ್ಯ ಪ್ರದೇಶಗಳಲ್ಲಿ ಸಂಭವಿಸುವ ಅಗ್ನಿ ದುರಂತಗಳು.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೧೫೬ (೨೪೫೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅರಣ್ಯ ಪ್ರದೇಶದಲ್ಲಿ ಕಳೆದ ೬ ತಿಂಗಳಿನಿಂದ ಎಷ್ಟು ಅಗ್ನಿ ದುರಂತಗಳು ಸಂಭವಿಸಿವೆ ; ಇದರಿಂದ ಎಷ್ಟು ಎಕರೆ ಅರಣ್ಯ ಪ್ರದೇಶ ನಾಶವಾಗಿದೆ ;

(ಆ) ಈ ಅಗ್ನಿ ದುರಂತಗಳು ಸಂಭವಿಸಲು ಕಾರಣಗಳೇನು ;

(ಇ) ಬೇಸಿಗೆಯ ಪ್ರಾರಂಭದಲ್ಲಿ ಅಗ್ನಿ ದುರಂತಗಳು ಸಂಭವಿಸುತ್ತಿದ್ದು, ಅನೇಕ ಪ್ರಕಾರದ ಪ್ರಾಣಿ ಪಕ್ಷಿಗಳು ಅಗ್ನಿಗೆ ಆಹುತಿಯಾಗುತ್ತಿರುವುದರಿಂದ ಮುಂಬರುವ ಬೇಸಿಗೆಯಲ್ಲಿ ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಈಗಾಗಲೇ ಅಗ್ನಿ ಅನಾಹುತದಿಂದ ಉಂಟಾದ ಅರಣ್ಯ ನಾಶವನ್ನು ಸರಿಪಡಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಕೊಳವೆ ಬಾವಿ ನಿಷೇಧ.

**ಶ್ರೀ ಸೋಮಣ್ಣ ಮ.ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೫೭ (೨೪೫೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೊಳವೆ ಬಾವಿ ನಿಷೇಧಿಸಲಾಗುವುದೆಂದು ರೈತರು ಆತಂಕ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೌದಾದರೆ, ಇದರಿಂದ ರೈತರಿಗೆ ತೊಂದರೆಯಾಗುವುದಿಲ್ಲವೆ ; ಯಾವ ಕಾರಣಕ್ಕಾಗಿ ನಿಷೇಧಿಸಲಾಗುವುದು ;

(ಇ) ತೊಂದರೆಯಾದರೆ, ರಾಜ್ಯದ ಎಲ್ಲಾ ರೈತರ ಜಮೀನುಗಳಿಗೆ ಯಾವ ರೀತಿ ನೀರಾವರಿ ಸೌಲಭ್ಯ ಒದಗಿಸುವಿರಿ ?

## ರಾಣೇಬೆನ್ನೂರು ತಾಲ್ಲೂಕಿನ ಆಸುಂಡಿ ಕೆರೆ.

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೧೫೮ (೨೪೫೩) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಣೇಬೆನ್ನೂರು ತಾಲ್ಲೂಕಿನ ಆಸುಂಡಿ ಕೆರೆ ಎಷ್ಟು ವಿಸ್ತೀರ್ಣ ಹೊಂದಿದೆ ;

(ಆ) ಈ ಕೆರೆಯಲ್ಲಿಯ ತುಂಬಿದ ಹೂಳನ್ನು ತೆಗೆಸುವ ವಿಚಾರವೇನಾದರೂ ಸರ್ಕಾರದ ಗಮನದಲ್ಲಿಯೇ ;

(ಇ) ಈ ಕೆರೆಯಿಂದ ಎಷ್ಟು ಎಕರೆ ಜಮೀನುಗಳಿಗೆ ನೀರಾವರಿ ಸೌಲಭ್ಯ ಆಗುತ್ತದೆ ;

(ಈ) ಈ ಕೆರೆಯ ಹೂಳು ತೆಗೆಯುವುದರಿಂದ ತುಂಗಾ ಮೇಲ್ದಂಡೆ ನೀರಾವರಿ ಯೋಜನೆಯಿಂದ ವಂಚಿತರಾದ ಗ್ರಾಮಗಳಾದ ಕಾಕೋಳ, ಕುಜ್ಜರಿ, ಹೂಲಿಹಳ್ಳಿ, ಕೂನಬೇವು, ಶಿಡಗನಹಳ್ಳಿ, ದೇವರಗಡ್ಡ, ಕದರಮಂಡಲಗಿ, ಬನ್ನಿಹಟ್ಟಿ, ಲಕಮಾಜಿಕೊಪ್ಪ, ಉಕ್ಕುಂದ, ಸರವಂದ, ಬೆಳಕೇರಿ ಗ್ರಾಮಗಳಿಗೆ ನೀರಾವರಿ ಸೌಲಭ್ಯ ದೊರಕಬಹುದೆಯೇ ;

(ಉ) ಒಂದು ವೇಳೆ ಸರ್ಕಾರಕ್ಕೆ ಈ ಯೋಜನೆ ಇದ್ದರೆ, ಈ ಕಾಮಗಾರಿಗೆ ಯಾವಾಗ ಚಾಲನೆ ನೀಡುತ್ತೀರಿ ;

(ಊ) ಹಾವೇರಿ ಜಿಲ್ಲೆಯ ತುಂಗಾ ಮೇಲ್ದಂಡೆ ಯೋಜನೆಯಿಂದ ವಂಚನೆಗೆ ಒಳಗಾದ ಗ್ರಾಮಗಳಾವುವು ?

# ರಾಜ್ಯದಲ್ಲಿನ ಉಪವಿಭಾಗಾಧಿಕಾರಿಗಳ ಹಾಗೂ ತಹಶೀಲ್ದಾರ ಕಛೇರಿಗಳ ಬಗ್ಗೆ.

**ಶ್ರೀ ಸೋಮಣ್ಣ ಮ.ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೧೫೯ (೨೪೫೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಲ್ಲಾ ವಿಭಾಗದಲ್ಲಿ ಉಪವಿಭಾಗಧಿಕಾರಿಗಳು (ಅಸಿಸ್ಟಂಟ್ ಕಮಿಷನರ್) ಕಛೇರಿಗಳು ಸ್ವಂತ ಕಟ್ಟಡದಲ್ಲಿದ್ದಾವೆಯೇ ; ಅಥವಾ ಬಾಡಿಗೆ ಕಟ್ಟಡದಲ್ಲಿದ್ದಾವೆಯೇ ; (ಮಾಹಿತಿ ಒದಗಿಸುವುದು)

(ಆ) ರಾಜ್ಯದ ಎಲ್ಲಾ ತಹಶೀಲ್ದಾರ ಕಛೇರಿಗಳು ಸ್ವಂತ ಕಟ್ಟಡದಲ್ಲಿದ್ದಾವೆಯೇ ಅಥವಾ ಬಾಡಿಗೆ ಕಟ್ಟಡದಲ್ಲಿದ್ದಾವೆಯೇ ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ನಾಡಕಛೇರಿಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಈ) ಎಲ್ಲಾ ನಾಡಕಛೇರಿಗಳು ಸ್ವಂತ ಕಟ್ಟಡದಲ್ಲಿದ್ದಾವೆಯೇ ; ಅಥವಾ ಬಾಡಿಗೆ ಕಟ್ಟಡದಲ್ಲಿದ್ದಾವೆಯೇ ; ಬಾಡಿಗೆ ಕಟ್ಟಡವಲ್ಲಿದ್ದರೆ, ಇವುಗಳನ್ನು ಸ್ವಂತ (ಸರ್ಕಾರದ ಕಟ್ಟಡ) ಕಟ್ಟಡದಲ್ಲಿ ಮಾಡಿ ಯಾವಾಗ ಕಾರ್ಯಾಲಯ ಪ್ರಾರಂಭಿಸುತ್ತೀರಿ ;

(ಉ) ರಾಜ್ಯದಲ್ಲಿ ವಿವಿಧ ಸಮುದಾಯದವರಿಗೆ ಜಾತಿ ಸರ್ಟಿಫಿಕೇಟ್ ನೀಡುವಾಗ ಇರುವ ನಿಬಂಧನೆಗಳೇನು ;

(ಊ) ಸಾಮಾನ್ಯರಿಗೆ ಕೊಡುವ ಮೀಸಲಾತಿ ಯಾವುದು ;

(ಋ) ಎಸ್.ಸಿ/ಎಸ್.ಟಿ ೨ಎ ಜಾತಿಗೆ ಯಾವ ಸಮುದಾಯಗಳು ಬರುತ್ತದೆ ; ಹಾವೇರಿ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಗಾಣಿಗ ಸಮುದಾಯದವರಿಗೆ ೨ಎ ಸರ್ಟಿಫಿಕೇಟ್ ನೀಡುತ್ತಿಲ್ಲ ಯಾಕೆ ?

## ರಾಜ್ಯದಲ್ಲಿನ ಭೂಮಾಪಕರ ಬಗ್ಗೆ.

**ಶ್ರೀ ಸೋಮಣ್ಣ ಮ.ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೬೦ (೨೫೬೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರಿ ಭೂ ಮಾಪಕರ ಸಂಖ್ಯೆ ಎಷ್ಟು ; ಅರೆಕಾಲಿಕ (ಖಾಸಗಿ) ಭೂಮಾಪಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ರೈತರು ತಮ್ಮ ಜಮೀನುಗಳನ್ನು ಅಳೆಯುವುದಕ್ಕಾಗಿ ಅರ್ಜಿ ಕೊಟ್ಟ ಎಷ್ಟು ದಿನಗಳ ನಂತರ ರೈತರ ಜಮೀನು ಅಳೆದು (ಮಾಪನ) ಕೊಡಲಾಗುತ್ತಿದೆ ;

(ಇ) ಸರ್ಕಾರಿ ಭೂಮಾಪಕರು ಅಳೆದು ಕೊಡುವುದಕ್ಕೂ ಖಾಸಗಿ ಭೂಮಾಪಕರು ಅಳೆದು ಕೊಡುವುದಕ್ಕೂ ಸಮಾನವಾದ ಕಾನೂನು ಅರ್ಥವಿದೆಯೇ ಅಥವಾ ವ್ಯತ್ಯಾಸ ವಿದೆಯೇ ?

## ತುಂಗಾ ಮೇಲ್ದಂಡೆ ಯೋಜನೆಯಿಂದ ವಂಚನೆಯಾದ ಗ್ರಾಮಗಳು.

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೬೧ (೨೪೫೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾವೇರಿ ಜಿಲ್ಲೆಯ ತುಂಗಾ ಮೇಲ್ದಂಡೆ ಯೋಜನೆಯಿಂದ ವಂಚನೆಗೆ ಒಳಗಾದ ಗ್ರಾಮಗಳು ಯಾವುವು ;

(ಆ) ಹಾವೇರಿ ಜಿಲ್ಲೆಯ ರಾಣೇಬೆನ್ನೂರು ತಾಲ್ಲೂಕಿನಲ್ಲಿ ೨೦೧೩ರಲ್ಲಿ ತುಂಗಭದ್ರಾ ನದಿಯಿಂದ ಸುಣಕಲ್ಲಬಿದರಿ, ಆಸುಂಡಿ, ಬೆನಕಕೊಂಡ, ಹೆಡಿಯಾಲ, ಉಕ್ಕುಂದ, ಸರ್ವಂದ, ಜೋಯಿಸರಹರಹಳ್ಳಿ ಗ್ರಾಮಗಳಲ್ಲಿರುವ ಕೆರೆಗಳಿಗೆ ನೀರು ತುಂಬಿಸಲು ಸಿದ್ಧಪಡಿಸಿದ ರೂ. ೩೮ ಕೋಟಿ ಯೋಜನೆ ಈಗ ಯಾವ ಹಂತದಲ್ಲಿದೆ ;

(ಇ) ಈ ಯೋಜನೆಯಿಂದ ಕೆರೆಗಳಿಗೆ ನೀರು ತುಂಬಿಸಲು ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ನೆಮ್ಮದಿ ಕೇಂದ್ರಗಳು.

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೨೧೬೨ (೨೪೭೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ನೆಮ್ಮದಿ ಕೇಂದ್ರಗಳು ಸ್ಥಾಪನೆ ಆಗಿದ್ದು, ಈ ನೆಮ್ಮದಿ ಕೇಂದ್ರಗಳೂ ಸರಿಯಾಗಿ ಕಾರ್ಯನಿರ್ವಹಿಸದೆ ಜನರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನೆಮ್ಮದಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ನೆಮ್ಮದಿ ಕೇಂದ್ರಗಳಿಗೆ ನೌಕರರನ್ನು ನೇಮಿಸಲಾಗಿದೆಯೇ ;

(ಈ) ನೆಮ್ಮದಿ ಕೇಂದ್ರದಿಂದ ರೈತರು ಯಾವ ಯಾವ ಸೌಲಭ್ಯಗಳನ್ನು ತೆಗೆದುಕೊಳ್ಳಬಹುದು ?

## ಕೃಷ್ಣಾ ಮೇಲ್ದಂಡೆ ಯೋಜನೆ ಅಡಿಯ ನೀರಾವರಿ.

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೬೩ (೨೪೭೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯ ಅಡಿಯಲ್ಲಿ ನೀರಾವರಿ ಅಚ್ಚುಕಟ್ಟು ಪ್ರದೇಶವೆಂದು ಘೋಷಣೆ ಮಾಡಿದ ಕ್ಷೇತ್ರ ಎಷ್ಟು ; ಹಾಗೂ ನೀರಾವರಿಗೊಳಪಟ್ಟ ಪ್ರದೇಶ ಎಷ್ಟು ;

(ಆ) ೨೦೧೫–೨೦೧೬ರಲ್ಲಿ ಜೇವರ್ಗಿ ತಾಲ್ಲೂಕಿನ ಮಲ್ಲಾಬಾದಿ ಏತ ನೀರಾವರಿಗೊಳಪಟ್ಟ ಪ್ರದೇಶ ಎಷ್ಟು ?

## ಹೈದರಾಬಾದ್–ಕರ್ನಾಟಕ ಜಿಲ್ಲೆಗಳಲ್ಲಿ ಉದ್ಯೋಗ ಮೇಳ.

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೬೪ (೨೪೭೩) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್–ಕರ್ನಾಟಕ ಜಿಲ್ಲೆಗಳಲ್ಲಿ ಕಳೆದ ಒಂದು ವರ್ಷದಲ್ಲಿ ಎಷ್ಟು ಉದ್ಯೋಗ ಮೇಳವನ್ನು ನಡೆಸಲಾಗಿದೆ ;

(ಆ) ಸದರಿ ಜಿಲ್ಲೆಗಳಲ್ಲಿ ಇರುವ ನಿರುದ್ಯೋಗಿ ಪದವೀಧರರ ಸಂಖ್ಯೆ ಎಷ್ಟು ;

(ಇ) ಎಷ್ಟು ಪದವೀಧರರ ಉದ್ಯೋಗ ಕೋರಿ ಅರ್ಜಿ ಸಲ್ಲಿಸಿರುತ್ತಾರೆ ;

(ಈ) ಎಷ್ಟು ಪದವೀಧರರನ್ನು ಉದ್ಯೋಗ ಮೇಳದ ಮೂಲಕ ಆಯ್ಕೆ ಮಾಡಿಕೊಳ್ಳಲಾಗಿದೆ ? (ಅಂಕಿ–ಅಂಶಗಳನ್ನು ಒದಗಿಸುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಸಣ್ಣ ಕೆರೆಗಳು.

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೬೫ (೨೪೫೭) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಸೇರಿರುವ ಕೆರೆಗಳೆಷ್ಟು ;

(ಆ) ತಾಲ್ಲೂಕು ವ್ಯಾಪ್ತಿಯಲ್ಲಿ ಕೈಗೊಂಡಿರುವ ಏತ ನೀರಾವರಿ ಯೋಜನೆಗಳೆಷ್ಟು ;

(ಇ) ಪ್ರಸಕ್ತ ವರ್ಷದಲ್ಲಿ ಎಷ್ಟು ಸಣ್ಣ ಕೆರೆಗಳನ್ನು ಅಭಿವೃದ್ಧಿ ಮಾಡವುದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಅಭಿವೃದ್ಧಿಗಾಗಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕೊಳಚೆ ನೀರಿನ ಸದ್ಬಳಕೆ.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೨೧೬೬ (೨೪೯೬) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನಿಂದ ಕೊಳಚೆ ನೀರು ಎಷ್ಟು ಪ್ರಮಾಣದಲ್ಲಿ ತಮಿಳುನಾಡಿಗೆ ಹರಿದು ಹೋಗುತ್ತಿದೆ ;

(ಆ) ಇದನ್ನು ಲೆಕ್ಕ ಹಾಕುವ ಮಾನದಂಡವೇನು ;

(ಇ) ಈ ಕೊಳಚೆ ನೀರಿನಿಂದ ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಕೆರೆ ತುಂಬಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ;

(ಈ) ರೂಪಿಸಿದ್ದರೆ, ಯೋಜನೆಯ ರೂಪರೇಷೆಗಳೇನು ; ಯೋಜನೆಯ ಅಂದಾಜು ವೆಚ್ಚ, ನೀರಿನ ಪ್ರಮಾಣ, ಗುಣಾತ್ಮಕ ನೀರು ಹಾಗೂ ಯಾವ ಅವಧಿಯೊಳಗೆ ಈ ಯೋಜನೆ ಪೂರ್ಣಗೊಳ್ಳುವುದು ? (ಮಾಹಿತಿ ನೀಡುವುದು)

## ೭೯ಎ, ೭೯ಬಿ ಪ್ರಕರಣಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೧೬೭ (೨೪೮೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೭೯ಎ, ೭೯ಬಿ ಅಡಿ ಬಾಕಿ ಇರುವ ಪ್ರಕರಣಗಳು ಎಷ್ಟು ;

(ಆ) ಇಷ್ಟು ಪ್ರಕರಣಗಳು ಬಾಕಿ ಇರಲು ಕಾರಣಗಳೇನು ;

(ಇ) ೭೯ಎ, ೭೯ಬಿ ಪ್ರಕರಣಗಳಲ್ಲಿ ಕಂದಾಯ ಇಲಾಖೆ ಅಧಿಕಾರಿಗಳು ರೈತರನ್ನು ಹಾಗೂ ವ್ಯಾಪಾರಸ್ಥರನ್ನು ಸುಲಿಗೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕೃಷಿ ಭೂಮಿ ಖರೀದಿ ಮಿತಿಯನ್ನು ೨ ಲಕ್ಷದಿಂದ ೧೦ ಲಕ್ಷಕ್ಕೆ ಏರಿಸಲು ಇರುವ ತೊಂದರೆಗಳೇನು ;

(ಉ) ಬಾಕಿ ಇರುವ ಎಲ್ಲಾ ಪ್ರಕರಣಗಳನ್ನು ಇತ್ಯರ್ಥಗೊಳಿಸಲು ಕಂದಾಯ ಆಂದೋಲನವನ್ನು ಹಮ್ಮಿಕೊಳ್ಳುವಿರೇ ?

## ರಕ್ತಚಂದನ ಮರಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೧೬೮ (೨೪೫೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೆಳೆಯುವ ರಕ್ತಚಂದನ ಮರಗಳ ಪ್ರಮಾಣ ಎಷ್ಟು ;

(ಆ) ಈ ರಕ್ತಚಂದನ ಮರಗಳ ಮಾರುಕಟ್ಟೆ ಬೆಲೆ ಎಷ್ಟು ;

(ಇ) ರಕ್ತಚಂದನ ಮರಗಳ ಅಕ್ರಮ ವಹಿವಾಟಿಗೆ ಅರಣ್ಯ ಇಲಾಖೆಯ ಅಧಿಕಾರಿಗಳು ಸಹಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಪ್ರಕರಣಗಳ ವಿವರ ನೀಡುವುದು ;

(ಉ) ರೈತರ ತೋಟಗಳಲ್ಲಿ ರಕ್ತಚಂದನ ಬೆಳೆಸಲು ಪರವಾನಗಿ ಹಾಗೂ ಪ್ರೋತ್ಸಾಹಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

## ಹುಲಿ ಗಣತಿ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೧೬೯ (೨೪೫೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಹುಲಿಗಳ ಸಂಖ್ಯೆ ಎಷ್ಟು ;

(ಆ) ಹುಲಿಗಳ ಕಾರಿಡಾರ್ ಯಾವುದು ;

(ಇ) ಹುಲಿಗಳನ್ನು ಲೆಕ್ಕ ಹಾಕುವ ಪದ್ಧತಿ ಯಾವುದು ;

(ಈ) ಇತ್ತೀಚೆಗೆ ಬಂದ ವರದಿ ಪ್ರಕಾರ ಹುಲಿ ಗಣತಿ ದೋಷಪೂರಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ಹುಲಿ ಗಣತಿಯನ್ನು ಸಮರ್ಪಕವಾಗಿ ನಡೆಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಾವೇರಿ ಹ್ಯಾಂಡ್‌ಲೂಮ್ಸ್ ಪುನಶ್ಚೇತನ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೧೭೦ (೨೪೬೨) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

(ಅ) ಹಲವಾರು ವರ್ಷಗಳಿಂದ ಕಾವೇರಿ ಹ್ಯಾಂಡ್‌ಲೂಮ್ಸ್ ಕಾರ್ಪೋರೇಷನ್ ಪರಿಸ್ಥಿತಿ ಹದಗೆಟ್ಟಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಬಡ ನೇಕಾರರು ಉತ್ಪತ್ತಿ ಮಾಡಲಾಗುತ್ತಿರುವ ಹಾಗೂ ತಯಾರು ಮಾಡುತ್ತಿರುವ ಬಟ್ಟೆಗಳನ್ನು ಖರೀದಿ ಮಾಡಲು ಏನು ಕ್ರಮ ಕೈಗೊಳ್ಳಲಾಗುತ್ತಿದೆ ;

(ಇ) ಪುನಶ್ಚೇತನ ಮಾಡಿ ರಾಜ್ಯ ನೇಕಾರರಿಗೆ ಅನುಕೂಲ ಮಾಡಿಕೊಡಲು ಹಲವಾರು ಬೇಡಿಕೆ ಬಂದಿದ್ದರೂ ನಿರ್ಲಕ್ಷಿಸಲು ಕಾರಣವೇನು ;

(ಈ) ನೇಕಾರರ ಬೇಡಿಕೆ ಪುರಸ್ಕರಿಸಿ ಈ ವರ್ಷ ಪುನಶ್ಚೇತನ ಮಾಡಿ ಅನುಕೂಲ ಮಾಡಿಕೊಡಲಾಗುವುದೆ ?

## ತುಮಕೂರು ಜಿಲ್ಲೆಯ ಹೇಮಾವತಿ ಯೋಜನೆ ಬಗ್ಗೆ.

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೧೭೧ (೨೪೬೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯಲ್ಲಿ ಎಷ್ಟು ತಾಲ್ಲೂಕುಗಳಿಗೆ ಹೇಮಾವತಿ ನೀರು ನೀಡಲಾಗುತ್ತದೆ ;

(ಆ) ಯಾವ ಉದ್ದೇಶಕ್ಕೆ ನೀಡಲಾಗುತ್ತದೆ ; ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಬೆಳೆಗೆ ನೀರು ಕೊಡಲಾಗುವುದು ಅಥವಾ ಇನ್ನಿತರ ಬೆಳೆಗೆ ಎಷ್ಟು ಪ್ರದೇಶಕ್ಕೆ ನೀರು ಕೊಡಲಾಗುತ್ತಿದೆ ;

(ಇ) ಕುಡಿಯುವ ನೀರಿಗೆ ಯಾವ-ಯಾವ ತಾಲ್ಲೂಕಿನ ನಗರಗಳಿಗೆ ಎಷ್ಟೆಷ್ಟು ನೀರು ಕೊಡಲಾಗುತ್ತಿದೆ ;

(ಈ) ಹೊಸದಾಗಿ ಕುಡಿಯುವ ನೀರಿಗೆ ಗ್ರಾಮಾಂತರ ಹಾಗೂ ನಗರಗಳಿಂದ ಬಂದಿರುವ ಬೇಡಿಕೆಗಳೆಷ್ಟು ; ಎಷ್ಟು ಮಂಜೂರು ಮಾಡಲಾಗಿದೆ ;

(ಉ) ತಡೆ ಹಿಡಿಯಲಾಗಿರುವ ಬೇಡಿಕೆಗಳಾವುವು ತಡೆಹಿಡಿಯಲು ಕಾರಣವೇನು ? (ವಿವರ ನೀಡುವುದು)

## ತುರುವೇಕೆರೆ ತಾಲ್ಲೂಕಿನ ಅರಣ್ಯ ಪ್ರದೇಶದ ಅಭಿವೃದ್ಧಿ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೧೭೨ (೨೪೬೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂರು ವ್ಯಾಪ್ತಿಯಲ್ಲಿರುವ ಅರಣ್ಯ ಪ್ರದೇಶ ಎಷ್ಟು ; ಯಾವ ಯಾವ ಗ್ರಾಮದ ಸರ್ವೆ ನಂಬರ್‌ಗಳಲ್ಲಿ ಎಷ್ಟೆಷ್ಟು ಎಕರೆ ಅರಣ್ಯ ಪ್ರದೇಶವಿದೆ ;

(ಆ) ಹಾಲಿ ಅರಣ್ಯ ಜಮೀನುಗಳನ್ನು ಎಲ್ಲೆಲ್ಲಿ ಯಾವ ಯಾವ ಜಾಗದಲ್ಲಿ ಅಭಿವೃದ್ಧಿ ಪಡಿಸಲಾಗಿದೆ ; ಎಷ್ಟು ವರ್ಷದಿಂದ ;

(ಇ) ಖಾಲಿ ಇರುವ ಅರಣ್ಯ ಪ್ರದೇಶ ಎಷ್ಟು, ಇದನ್ನು ಅಭಿವೃದ್ಧಿ ಪಡಿಸದಿರಲು ಕಾರಣವೇನು ;

(ಈ) ತುರುವೇಕೆರೆ ತಾಲ್ಲೂಕಿನ ಅರಣ್ಯ ಇಲಾಖೆಯಲ್ಲಿ ಸಿಬ್ಬಂದಿಗಳು ಎಷ್ಟು, ಯಾರ್ಯಾರು, ಎಲ್ಲೆಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ ;

(ಉ) ಅರಣ್ಯ ಪ್ರದೇಶ ಒತ್ತುವರಿ ಮಾಡಿಕೊಂಡಿರುವ ಗ್ರಾಮಗಳು ಯಾವುವು ; ಯಾವ ಯಾವ ಸರ್ವೆ ನಂಬರ್‌ಗಳಲ್ಲಿ ಒತ್ತುವರಿಯಾಗಿದೆ ; ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ?

## ಕೈಮಗ್ಗ ವಸ್ತು ಪ್ರದರ್ಶನಗಳ ಮಾಹಿತಿ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೧೭೩ (೨೪೬೩) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಯಾವ-ಯಾವ ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳಿಂದ ಕೈಮಗ್ಗ ಮೇಳಗಳನ್ನು ಹಾಗೂ ವಸ್ತು ಪ್ರದರ್ಶನಗಳನ್ನು ಏರ್ಪಡಿಸಲಾಗಿತ್ತು ; (ಏರ್ಪಡಿಸಿದ ವಸ್ತು ಪ್ರದರ್ಶಗಳು ಎಷ್ಟೆಷ್ಟು ದಿನಗಳು ಎಲ್ಲೆಲ್ಲಿ ನಡೆದಿರುವ ಬಗ್ಗೆ ಪೂರ್ಣ ವಿವರ ಕೊಡುವುದು)

(ಆ) ಕೇಂದ್ರ ಸರ್ಕಾರ-ರಾಜ್ಯ ಸರ್ಕಾರದ ಅನುದಾನದ ಪಾಲುಗಳೆಷ್ಟು ;

(ಇ) ಪ್ರತಿಯೊಂದು ವಸ್ತು ಪ್ರದರ್ಶನದಲ್ಲಿ ಯಾರ್ಯಾರಿಗೆ ಮಳಿಗೆ ನೀಡಲಾಗಿದೆ ; ವಿಳಾಸ ಸಮೇತ ಪ್ರತಿಯೊಬ್ಬರ ವಹಿವಾಟೆಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಈ) ವಸ್ತು ಪ್ರದರ್ಶನದಲ್ಲಿ ಭಾಗವಹಿಸಿದ ಕೈಮಗ್ಗ ನೇಕಾರರಿಗೆ ಸರ್ಕಾರದ ಸಬ್ಸಿಡಿ ಎಷ್ಟೆಷ್ಟು ದೊರೆತಿದೆ ? (ಪೂರ್ಣ ಮಾಹಿತಿ ನೀಡುವುದು)

## ಕಂದಾಯ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೧೭೪ (೨೪೬೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕಂದಾಯ ಇಲಾಖೆಯ ಎಲ್ಲಾ ತಾಲ್ಲೂಕುಗಳು ಸೇರಿದಂತೆ ಮಂಜೂರು ಮಾಡಿರುವ ಹುದ್ದೆಗಳೆಷ್ಟು ;

(ಆ) ಹಾಗಿದ್ದಲ್ಲಿ, ಖಾಲಿಯಾಗಿ ಉಳಿದಿರುವ ಹುದ್ದೆಗಳೆಷ್ಟು ;

(ಇ) ಖಾಲಿ ಇರುವ ಹುದ್ದೆಗಳು ಯಾವುವು ; ಎಲ್ಲೆಲ್ಲಿ ; ಎಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಈ) ಖಾಲಿಯಾಗಿರುವ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಉ) ಖಾಲಿ ಇರುವ ಹುದ್ದೆಗಳಿಂದ ಸಾರ್ವಜನಿಕರಿಗೆ ತೊಂದರೆಯಾಗಿ ಅನೇಕ ದೂರು ಬಂದಿರುವುದನ್ನು ಸರ್ಕಾರ ಯಾವ ರೀತಿ ನಿಭಾಯಿಸುತ್ತದೆ ?

## ಬೆಳಗಾವಿ ಜಿಲ್ಲೆಯಲ್ಲಿರುವ ಕೆರೆಗಳ ಹೂಳೆತ್ತುವ ಬಗ್ಗೆ.

**ಶ್ರೀ ವೀರಕುಮಾರ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೭೫ (೨೫೩೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು ; ಯಾವ ಯಾವ ಕೆರೆಗಳನ್ನು ಒತ್ತುವರಿ ಮಾಡಲಾಗಿದೆ ; ಒತ್ತುವರಿ

ಮಾಡಿರುವ ಕೆರೆಗಳ ವಿಸ್ತೀರ್ಣ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈವರೆವಿಗೆ ತೆರವುಗೊಳಿಸಲಾದ ಕೆರೆಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಕೆರೆಗಳ ಸಂಖ್ಯೆ ಎಷ್ಟು ; ಒತ್ತುವರಿ ವಿಸ್ತೀರ್ಣ ಎಷ್ಟು ; ಎಲ್ಲಾ ಕೆರೆಗಳನ್ನು ಒತ್ತುವರಿಂದ ತೆರವುಗೊಳಿಸಲು ಬೇಕಾಗಿರುವ ಕಾಲಾವಕಾಶ ಎಷ್ಟು ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಅಂತರ ಜಲಮಟ್ಟ ಕುಸಿದಿರುವುದರಿಂದ ಜಿಲ್ಲೆಯಲ್ಲಿರುವ ಕೆರೆಗಳ ಹೂಳು ಎತ್ತಲು ವಿಶೇಷ ಪ್ಯಾಕೆಜನ್ನು ನೀಡಲು ಸರ್ಕಾರ ಉದ್ದೇಶಿಸಿದೆಯೇ ;

(ಈ) ಹಾಗಿದ್ದಲ್ಲಿ, ಕೆರೆಗಳ ಹೂಳೆತ್ತಲು ನಿಗಧಿಪಡಿಸಿರುವ ಕಾಲಾವಕಾಶ ಎಷ್ಟು ?

## ಕಾನೂನು ಸಲಹೆಗಾರರ ಹುದ್ದೆಗೆ ನೇಮಕ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೭೬ (೨೪೭೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಜಿಲ್ಲಾ ಕಾನೂನು ಕೋಶದಲ್ಲಿ ಕಾನೂನು ಸಲಹೆಗಾರರಾಗಿ ನೇಮಕ ಮಾಡಿಕೊಳ್ಳುವಾಗ ಜಿಲ್ಲಾ ನ್ಯಾಯಾಧೀಶರ ಬದಲಿಗೆ ಪರ್ಯಾಯವಾಗಿ ನಿವೃತ್ತ ಕಂದಾಯ ಅಧಿಕಾರಿಗಳನ್ನು ನೇಮಿಸಿಕೊಳ್ಳುವ ಆದೇಶವನ್ನು ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲಾ ನಿವೃತ್ತ ನ್ಯಾಯಾಧೀಶರ ಸ್ಥಾನವನ್ನು ಉಳಿದ ಅಧಿಕಾರಿಗಳೊಂದಿಗೆ ಸಮನಾಗಿ ಪರಿಗಣಿಸಿರುವುದರಿಂದ ನಿವೃತ್ತ ನ್ಯಾಯಾಧೀಶರ ಹುದ್ದೆಗೆ ಚ್ಯುತಿ ತಂದಂತಾಗುವುದಿಲ್ಲವೇ ;

(ಇ) ಕಂದಾಯ ಅಧಿಕಾರಿಗಳಿಗೆ ಬೇರೆ ಆದೇಶ ಹೊರಡಿಸುವ ಬದಲಾಗಿ ಜಿಲ್ಲಾ ನ್ಯಾಯಾಧೀಶರ ಪರ್ಯಾಯವಾಗಿ ಎಂದು ಪರಿಗಣಿಸಿರುವುದು ಸರಿಯೇ ;

(ಈ) ಜಿಲ್ಲಾ ನ್ಯಾಯಾಧೀಶರ ಹುದ್ದೆಗೆ ಚ್ಯುತಿ ಉಂಟಾಗದಂತೆ ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಜಿಲ್ಲಾ ಕಾನೂನು ಸಲಹೆಗಾರರ ಮುಂದುವರಿಕೆ ಆದೇಶ ಮತ್ತು ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೭೭ (೨೪೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಜಿಲ್ಲಾ ಕಾನೂನು ಕೋಶದಲ್ಲಿ ಕಾನೂನು ಸಲಹೆಗಾರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲಾ ನ್ಯಾಯಾಧೀಶರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಜಿಲ್ಲಾ ನ್ಯಾಯಾಧೀಶರುಗಳಿಗೆ ಸರ್ಕಾರ ನಿಗದಿಪಡಿಸಿದ ಎಲ್ಲಾ ಸೌಲಭ್ಯಗಳನ್ನು ನೀಡಲಾಗಿದೆಯೇ ; (ಸೌಲಭ್ಯದ ಆದೇಶದ ಪೂರ್ಣ ವಿವರ ನೀಡುವುದು)

(ಇ) ಕಾನೂನು ಸಲಹೆಗಾರರಾದ ನ್ಯಾಯಾಧೀಶರುಗಳಿಗೆ ಕಾಲಕಾಲಕ್ಕೆ ಮುಂದುವರಿಕೆ ಆದೇಶ ನೀಡಲಾಗಿದೆಯೇ ;

(ಈ) ಸರ್ಕಾರಕ್ಕೆ ಕಾನೂನು ಕೋಶ ಮುಂದುವರಿಕೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ;

(ಉ) ಮುಂದುವರಿಕೆ ಆದೇಶ ಮತ್ತು ಸೌಲಭ್ಯ ನೀಡಲು ಸರ್ಕಾರಕ್ಕಿರುವ ತೊಂದರೆಯೇನು ;

(ಊ) ಒಟ್ಟಾರೆ ಜಿಲ್ಲಾ ಕಾನೂನು ಸಲಹೆ ಸೌಲಭ್ಯ ಮತ್ತು ಮುಂದುವರಿಕೆ ಆದೇಶದ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಆಸ್ತಿಗಳ ನೋಂದಣಿಯಲ್ಲಿ ಲೋಪವಾಗುತ್ತಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೭೮(೨೪೭೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಆದೇಶದ ಹೊರತಾಗಿಯೂ ಗ್ರಾಮ ಪಂಚಾಯತ್ ನೀಡುವ ನಮೂನೆ ೯,೧೧, ಮತ್ತು ೧೧ ಬಿ ಇಲ್ಲದೆ ಆಸ್ತಿಗಳು ಉಪನೋಂದಣಾಧಿಕಾರಿ ಕಛೇರಿಯಲ್ಲಿ ನೋಂದಣಿ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೌದಾದಲ್ಲಿ, ಸರ್ಕಾರದಿಂದ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಕಳೆದ ೩ ವರ್ಷಗಳಲ್ಲಿ ಗ್ರಾಮ ಪಂಚಾಯತ್ ನೀಡುವ ನಮೂನೆ ೯,೧೧ ಮತ್ತು ೧೧ ಬಿ ಇಲ್ಲದೆ ನೋಂದಣಿಯಾದ ಆಸ್ತಿಗಳ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು ಉಪನೋಂದಣಿ ಕಛೇರಿವಾರು ವಿವರ ನೀಡುವುದು)

(ಈ) ಕಳೆದ ೧ ವರ್ಷದ ಅವಧಿಯಲ್ಲಿ ಡಿಜಿಟಲ್ ಸಹಿ ಇಲ್ಲದ ನಮೂನೆ ೯,೧೧ ಮತ್ತು ೧ಬಿ ಮೂಲಕ ನೋಂದಣಿ ಆದ ಆಸ್ತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಉಪನೋಂದಣಿ ಕಛೇರಿವಾರು ವಿವರ ನೀಡುವುದು)

(ಉ) ಸರ್ಕಾರದ ಆದೇಶ ಉಲ್ಲಂಘಿಸಿ ಅಕ್ರಮವಾಗಿ ನಮೂನೆ ೯,೧೧ ಮತ್ತು ೧೧ಬಿ ಇಲ್ಲದೆ ಹಾಗೂ ಡಿಜಿಟಲ್ ಸಹಿ ಇಲ್ಲದ ನಮೂನೆ ೯, ೧೧ ಮತ್ತು ೧೧ಬಿ ಮೂಲಕ ನೋಂದಣಿ ಮಾಡಿರುವ ಬಗ್ಗೆ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ ? (ವಿವರ ನೀಡುವುದು)

## ಕೃಷಿ ಭೂಮಿಯಲ್ಲಿ ಫಾರ್ಮ್‌ಹೌಸ್ ನಿರ್ಮಾಣಕ್ಕೆ ಅನುಮತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೭೯ (೨೪೬೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರೈತರಿಗೆ ಕೃಷಿ ಭೂಮಿಯಲ್ಲಿ ಫಾರ್ಮ್‌ಹೌಸ್ ನಿರ್ಮಾಣಕ್ಕೆ ಅನುಮತಿ ನೀಡದೆ ಇರುವುದರಿಂದ ರೈತರಿಗಾಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಫಾರ್ಮ್ ಹೌಸ್ ನಿರ್ಮಾಣಕ್ಕೆ ಪರವಾನಿಗೆ ಅಥವಾ ಅನುಮತಿ ನೀಡಿರುವ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಫಾರ್ಮ್ ಹೌಸ್ ನಿರ್ಮಾಣಕ್ಕೆ ಅನುಮತಿ ನೀಡುವ ಸಂಬಂಧ ಆದೇಶ ಮಾರ್ಗಸೂಚಿಗಳನ್ನು ಇಲಾಖೆ/ ಸರ್ಕಾರದಿಂದ ಹೊರಡಿಸಲಾಗಿದೆಯೇ ; (ಹೌದಾದಲ್ಲಿ ಪ್ರತಿ ನೀಡುವುದು)

(ಈ) ಇಲ್ಲವಾದಲ್ಲಿ, ರೈತರಿಗೆ ಕೃಷಿ ಭೂಮಿಯಲ್ಲಿ ಫಾರ್ಮ್ ಹೌಸ್ ನಿರ್ಮಾಣಕ್ಕೆ ಅನುಮತಿ ನೀಡುವ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; ಯಾವಾಗ ಈ ಬಗ್ಗೆ ಆದೇಶ ಮಾರ್ಗಸೂಚಿಗಳನ್ನು ಹೊರಡಿಸಲಾಗುವುದು ?

## ಕಲ್ಯಾಣ ನಿಧಿ ಪಾವತಿಯಾಗದೆ ಪಂಚಾಯಿತಿಗಳಲ್ಲಿ ಬಾಕಿ ಇರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೮೦ (೨೪೬೯) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರ್ಮಿಕ ಇಲಾಖೆಯಿಂದ ನೋಂದಾಯಿತ ಕಾರ್ಮಿಕರಿಗೆ ಸಿಗುತ್ತಿರುವ ಸೌಲಭ್ಯಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಇನ್ನೂ ಹೆಚ್ಚಿನ ಕಾರ್ಮಿಕರನ್ನು, ಸೇಂಧಿ ತೆಗೆಯುವವರನ್ನು ಹಾಗೂ ಇತರ ಅಸಂಘಟಿತ ವಲಯಗಳನ್ನು ಕಾರ್ಮಿಕ ಇಲಾಖೆಯ ವ್ಯಾಪ್ತಿಯಲ್ಲಿ ತರಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಇ) ಗ್ರಾಮ ಪಂಚಾಯತ್‌ಗಳಲ್ಲಿ ವಸೂಲಾಗುವ ಕಾರ್ಮಿಕ ಕಲ್ಯಾಣ ನಿಧಿ ಸರ್ಕಾರದ ಲೆಕ್ಕ ಶೀರ್ಷಿಕೆಗೆ ಪಾವತಿಯಾಗದೇ ಗ್ರಾಮ ಪಂಚಾಯತ್ ಖಾತೆಯಲ್ಲಿಯೇ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಈ) ಗ್ರಾಮ ಪಂಚಾಯತ್‌ಗಳಿಂದ ಸರ್ಕಾರಕ್ಕೆ ಬರತಕ್ಕ ಕಾರ್ಮಿಕ ಕಲ್ಯಾಣ ನಿಧಿಯ ಮೊತ್ತವೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಉ) ಕಾರ್ಮಿಕ ಕಲ್ಯಾಣ ನಿಧಿಯ ಶೇ. ೨೫ರಷ್ಟು ಮೊತ್ತವನ್ನು ಗ್ರಾಮ ಪಂಚಾಯತ್‌ಗಳಿಗೆ ನೀಡಲು ಸರ್ಕಾರಕ್ಕಿರುವ ತೊಡಕುಗಳೇನು ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಊ) ಕಾರ್ಮಿಕ ಇಲಾಖೆಯು ಯೋಜನೆಗಳನ್ನು ಪ್ರತಿಯೊಬ್ಬ ಕಾರ್ಮಿಕರಿಗೂ ತಲುಪಿಸಲು ಹಾಗೂ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಗ್ರಾಮ ಪಂಚಾಯತ್ ಮೂಲಕ ಅನುಷ್ಠಾನಗೊಳಿಸಲು ಸರ್ಕಾರಕ್ಕಿರುವ ತೊಡಕುಗಳೇನು ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಮಂಗಳೂರಿನ ಕುಳಾಯಿಯಲ್ಲಿ ಹೊಸ ಮೀನುಗಾರಿಕಾ ಬಂದರು ನಿರ್ಮಾಣ ಯೋಜನೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೧೮೧ (೨೪೭೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರಿನ ಕುಳಾಯಿಯಲ್ಲಿ ಹೊಸ ಮೀನುಗಾರಿಕಾ ಬಂದರು ನಿರ್ಮಾಣ ಯೋಜನೆ ವಿಳಂಬಗೊಳ್ಳಲು ಕಾರಣಗಳೇನು ;

(ಆ) ಈ ಯೋಜನೆಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ;

(ಇ) ಈ ಯೋಜನೆಗೆ ಬೇಕಾದ ಅನುಮತಿ ಪಡೆಯಲಾಗಿದೆಯೇ ; ಕೇಂದ್ರ ಸರ್ಕಾರ ನೀಡಿದ ಅನುದಾನ ಎಷ್ಟು ;

(ಈ) ಈ ಯೋಜನೆಯನ್ನು ನವಮಂಗಳೂರು ಬಂದರು ಟ್ರಸ್ಟ್ ವತಿಯಿಂದ ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) ಬಂದರಿನಿಂದ ಎಷ್ಟು ಬೋಟ್/ಟ್ರಾಲರ್‌ಗಳಿಗೆ ಪ್ರಯೋಜನವಾಗುವುದು ? (ವಿವರ ನೀಡುವುದು)

## ನಿಗಮಗಳ ವಿಲೀನ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೧೮೨ (೨೪೭೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮದ ಮತ್ತು ಕರ್ನಾಟಕ ಗೇರು ಅಭಿವೃದ್ಧಿ ನಿಗಮಗಳ ಜೊತೆ ಕರ್ನಾಟಕ ಅರಣ್ಯ ಕೈಗಾರಿಕಾ ಅಭಿವೃದ್ಧಿ ನಿಗಮಗಳನ್ನು ವಿಲೀನಗೊಳಿಸುವುದರ ಬಗ್ಗೆ ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದರೆ, ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಕರ್ನಾಟಕ ಗೇರು ಅಭಿವೃದ್ಧಿ ನಿಗಮ, ಗೇರು ತೋಟಗಳನ್ನು ಅಭಿವೃದ್ಧಿ ಪಡಿಸಲು ನಿಗಮ ಹಾಕಿಕೊಂಡ ಯೋಜನೆಗಳಾವುವು ; ಈ ನಿಗಮಗಳನ್ನು ವಿಲೀನ ಮಾಡುವುದರಿಂದ ಇಲಾಖೆಗೆ ಉಂಟಾಗುವ ಲಾಭವೇನು ; ವಿಲೀನಗೊಳಿಸಿದ್ದಲ್ಲಿ ವಿಲೀನಗೊಳ್ಳುವ ನಿಗಮಗಳು ನಷ್ಟ ಅನುಭವಿಸುವುದಿಲ್ಲವೇ ;

(ಇ) ೨೦೧೨-೧೩ ರಿಂದ ೨೦೧೩-೧೪ನೇ ಸಾಲಿನಲ್ಲಿ ಗೇರು ಅಭಿವೃದ್ಧಿ ನಿಗಮಕ್ಕೆ ಫಸಲಿನ ಹರಾಜಿನ ಮೂಲಕ ಸಂಗ್ರಹವಾದ ಆದಾಯ ಎಷ್ಟು ;

(ಈ) ೨೦೧೩-೧೪ ರಿಂದ ೨೦೧೪-೧೫ನೇ ಸಾಲಿನಲ್ಲಿ ಹೊಸ ತಳಿಗಳ ಮೂಲಕ ಗೇರು ಅಭಿವೃದ್ಧಿ ತೋಟಕ್ಕೆ ವಿನಿಯೋಗಿಸಿದ ಹಣ ಎಷ್ಟು ;

(ಉ) ಗೇರು ಅಭಿವೃದ್ಧಿ ನಿಗಮ ನಿರ್ವಹಣೆಗೆ ವಿನಿಯೋಗ ಮಾಡಿದ ಹಣವೆಷ್ಟು ?

## ಆರ್.ಟಿ.ಸಿ. ವಿತರಣೆಯ ವ್ಯವಸ್ಥೆ ಸುಧಾರಣೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೧೮೩ (೨೪೮೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ತಾಲ್ಲೂಕು ಮಟ್ಟದಲ್ಲಿ ಆರ್.ಟಿ.ಸಿ. ನೀಡುವ ವ್ಯವಸ್ಥೆಯ ಬಗ್ಗೆ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯನ್ನು ಹೊಂದಿದ್ದು, ತಾಲ್ಲೂಕು ಕಛೇರಿಯಲ್ಲಿ ಒಂದು ಆರ್.ಟಿ.ಸಿ. ಕೇಂದ್ರ ಇರುವುದರಿಂದ ಎಲ್ಲಾ ಹೋಬಳಿಯ ಜನರು ಆರ್.ಟಿ.ಸಿ. ಗಾಗಿ ಕಾಯುತ್ತಿರುವುದರಿಂದ ತೊಂದರೆ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಒಂದೇ ದಿನಕ್ಕೆ ಆರ್.ಟಿ.ಸಿ. ಕೇಂದ್ರದಿಂದ ಎಲ್ಲಾ ಅರ್ಜಿದಾರರಿಗೆ ಆರ್.ಟಿ.ಸಿ. ಯನ್ನು ನೀಡಲು ಸಾಧ್ಯವಾಗುವುದಿಲ್ಲವೇ ;

(ಇ) ಆರ್.ಟಿ.ಸಿ. ಗಳನ್ನು ಹೋಬಳಿ ಮಟ್ಟದಲ್ಲಿ ವಿಂಗಡಿಸಿ, ಹೋಬಳಿ ಮಟ್ಟದಲ್ಲಿ ಆರ್.ಟಿ.ಸಿ. ಕೇಂದ್ರ ತೆರೆದು ಜನರಿಗೆ ಸೌಲಭ್ಯವನ್ನು ಒದಗಿಸಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಈ) ಮಂಗಳೂರು ತಾಲ್ಲೂಕು ಕಛೇರಿಯಲ್ಲಿ ಒತ್ತಡ ನಿವಾರಿಸಲು ಕನಿಷ್ಠ ೫ ಆರ್.ಟಿ.ಸಿ. ಕೇಂದ್ರಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳುವುದೇ ; ಹಾಗೂ ಹೋಬಳಿ ಮಟ್ಟದಲ್ಲಿ ಸ್ಥಾಪಿಸಲಾಗುವುದೇ ? (ವಿವರ ನೀಡುವುದು)

## ಐ.ಟಿ.ಐ.ಗಳಲ್ಲಿ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೧೮೪ (೨೪೭೭) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಐ.ಟಿ.ಐ. ಗಳಲ್ಲಿ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ "ಮಧ್ಯಾಹ್ನದ ಬಿಸಿ ಊಟ ನೀಡಲು" ಇಲಾಖೆ ಕಾರ್ಯಕ್ರಮ ಹಮ್ಮಿಕೊಳ್ಳುವುದೇ ;

(ಆ) ರಾಜ್ಯದಲ್ಲಿ ಐ.ಟಿ.ಐ. ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಯಾವ ಯಾವ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ ; (ವಿವರ ನೀಡುವುದು)

(ಇ) ಪ್ರೌಢ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಊಟ ನೀಡುವ ರೀತಿಯಲ್ಲಿ ಐ.ಟಿ.ಐ. ವಿದ್ಯಾರ್ಥಿಗಳಿಗೆ ಊಟ ವಿಸ್ತರಿಸುವುದರಿಂದ ತಗಲುವ ಹೆಚ್ಚುವರಿ ಆರ್ಥಿಕ ಹೊರೆ ಎಷ್ಟು ;

(ಈ) ಸರ್ಕಾರಿ ಐ.ಟಿ.ಐ. ಗಳಲ್ಲಿರುವ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆಯನ್ನು ಮಾಡಲು ಇಲಾಖೆ ಕ್ರಮಕೈಗೊಳ್ಳುವುದೇ ;

(ಉ) ರಾಜ್ಯದಲ್ಲಿ ಸ್ವಂತ ಕಟ್ಟಡ ಇಲ್ಲದೇ ರಾಜ್ಯದಲ್ಲಿ ನಡೆಸಲ್ಪಟ್ಟ ಐ.ಟಿ.ಐ.ಗಳ ಸಂಖ್ಯೆ ಎಷ್ಟು ?

# ಉದ್ಯೋಗ ವಿನಿಮಯ ಕೇಂದ್ರಗಳು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೧೮೫ (೨೪೭೮) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಉದ್ಯೋಗ ವಿನಿಮಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ;

(ಆ) ೨೦೧೪-೧೫ನೇ ವರ್ಷದಲ್ಲಿ ರಾಜ್ಯದಲ್ಲಿ ಉದ್ಯೋಗಕ್ಕಾಗಿ ನೋಂದಾಯಿಸಲ್ಪಟ್ಟ ಅಭ್ಯರ್ಥಿಗಳ ಸಂಖ್ಯೆ ಎಷ್ಟು ;

(ಇ) ಉದ್ಯೋಗ ವಿನಿಮಯ ಕೇಂದ್ರದಲ್ಲಿ ಅರೇ ಸರ್ಕಾರಿ ಮತ್ತು ಖಾಸಗಿ ಸರ್ಕಾರಿ ಉದ್ಯೋಗ ಪಡೆಯಲು ಇಲಾಖೆ ಕೈಗೊಂಡ ಕ್ರಮಗಳಾವುವು ; ವಿವರ ನೀಡುವುದು ;

(ಈ) ರಾಜ್ಯಾದ್ಯಂತ ವರ್ಷವೊಂದಕ್ಕೆ ಉದ್ಯೋಗ ವಿನಿಮಯ ಕೇಂದ್ರದಿಂದ ಎಷ್ಟು ಜನರಿಗೆ ಉದ್ಯೋಗ ಒದಗಿಸಿಕೊಡಲಾಗಿದೆ ; ಎಷ್ಟು ವಿದ್ಯಾರ್ಥಿಗಳು/ನೋಂದಾಯಿತ ನಿರುದ್ಯೋಗಿಗಳು ಉದ್ಯೋಗವನ್ನು ಬಯಸಿದ್ದಾರೆ ; (ವಿವರ ನೀಡುವುದು)

(ಉ) ಶಾಲಾ-ಕಾಲೇಜುಗಳಲ್ಲಿ ಉದ್ಯೋಗ ಬಯಸುವವರಿಗೆ ನೋಂದಾವಣೆ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ? (ವಿವರ ನೀಡುವುದು)

# ಸಿಮೆಂಟ್ ಹಾಗೂ ಉಕ್ಕಿನ ಕಾರ್ಖಾನೆಗಳಿಂದ ಪರಿಸರ ಮಾಲಿನ್ಯ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೧೮೬ (೨೪೮೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿ ಸ್ಥಾಪಿಸಿರುವ ಒಟ್ಟು ಸಿಮೆಂಟ್ ಕಾರ್ಖಾನೆಗಳೆಷ್ಟು ; ಹಾಗೂ ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಸ್ಥಾಪಿಸಿರುವ ಉಕ್ಕಿನ ಕಾರ್ಖಾನೆಗಳೆಷ್ಟು ; (ಸವಿವರವಾಗಿ ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಈ ಸದರಿ ಸಿಮೆಂಟ್ ಹಾಗೂ ಉಕ್ಕಿನ ಕಾರ್ಖಾನೆಗಳಿಂದ ಹೊರ ಹೊಮ್ಮುವ ಹೊಗೆ ಹಾಗೂ ಧೂಳಿನಿಂದ ಪರಿಸರ ಮಾಲಿನ್ಯ ಉಂಟಾಗಿ ಬೆಳೆಗಳ ಮೇಲೆ, ಜಾನುವಾರುಗಳ ಮೇಲೆ ಹಾಗೂ ಮಾನವನ ಆರೋಗ್ಯದ ಮೇಲೆ ಆಗುವಂತಹ ದುಷ್ಪರಿಣಾಮಗಳೇನು ; (ವಿವರ ನೀಡುವುದು)

(ಇ) ಈ ಅನಾಹುತಗಳ ಬಗ್ಗೆ ಸಮಗ್ರ ಹಾಗೂ ವಿಶ್ವಾಸಾರ್ಹ "ವೈಜ್ಞಾನಿಕ ವರದಿ" ಸಂಬಂಧಪಟ್ಟ ಇಲಾಖೆಯಿಂದ ತಯಾರಿಸಲಾಗಿದೆಯೇ ; ಇದ್ದರೆ, ಮಾಹಿತಿ ನೀಡುವುದು ; ಇಲ್ಲದಿದ್ದರೆ, "ವೈಜ್ಞಾನಿಕ ವರದಿ" ತಯಾರಿಸಲು ಸರ್ಕಾರ ಮುಂದಾಗುವುದೇ ; ಯಾವ ಕಾಲಮಿತಿಯೊಳಗೆ ಈ ವರದಿಯನ್ನು ತಯಾರಿಸಲಾಗುವುದು ; (ಮಾಹಿತಿ ನೀಡುವುದು)

(ಈ) ಸದರಿ ಸಿಮೆಂಟ್ ಮತ್ತು ಉಕ್ಕಿನ ಕಾರ್ಖಾನೆಗಳಿಂದ ಹೊರ ಹೊಮ್ಮುವ ಹೊಗೆ ಹಾಗೂ ಧೂಳಿನಿಂದ ಪರಿಸರ ಮಾಲಿನ್ಯದ

ಮೇಲೆ ಆಗುವಂತಹ ದುಷ್ಪರಿಣಾಮಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಕಾರ್ಖಾನೆವಾರು ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಸಣ್ಣ ನೀರಾವರಿ ಕಾಮಗಾರಿಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೧೮೭ (೨೪೮೩) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ನೀರಾವರಿ ಇಲಾಖೆಯು ಕಳೆದ ೫ ವರ್ಷಗಳಿಂದ ಹೈದ್ರಾಬಾದ್–ಕರ್ನಾಟಕ ಭಾಗದ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಲ್ಲಿ ಕೈಗೆತ್ತಿಕೊಂಡಿರುವ ಯೋಜನೆಗಳು ಯಾವುವು ; (ಕಾಮಗಾರಿವಾರು ಯೋಜನೆಯ ವಿವರ ನೀಡುವುದು)

(ಆ) ಈ ಯೋಜನೆಗಳಿಗೆ ಮಂಜೂರು ಮಾಡಿರುವ, ಬಿಡುಗಡೆ ಮಾಡಿರುವ ಮತ್ತು ವೆಚ್ಚ ಮಾಡಿರುವ ಹಣ ಎಷ್ಟು ; (ಯೋಜನೆವಾರು/ಕಾಮಗಾರಿವಾರು ಮಾಹಿತಿ ನೀಡುವುದು)

(ಇ) ಯೋಜನೆಗಳು ಯಾವಾಗ ಪೂರ್ಣಗೊಳ್ಳಬೇಕಿತ್ತು ; ಈಗ ಯಾವ ಹಂತದಲ್ಲಿವೆ ; (ಯೋಜನೆವಾರು ಮಾಹಿತಿ ನೀಡುವುದು)

(ಈ) ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಕೈಗೊಂಡಿರುವ ಕ್ರಮಗಳೇನು ?

## ಹೈದ್ರಾಬಾದ್-ಕರ್ನಾಟಕದ ಪ್ರದೇಶಕ್ಕೆ "ಜವಳಿ ಪಾರ್ಕ್"

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೧೮೮ (೨೪೮೧) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ "ಜವಳಿ ಪಾರ್ಕ್" (ಟೆಕ್ಸ್‌ಟೈಲ್ ಪಾರ್ಕ್) ಸ್ಥಾಪಿಸುವ ಯೋಜನೆ ಸರ್ಕಾರದ ಮುಂದಿದೆಯೇ ; (ಹಾಗಿದ್ದಲ್ಲಿ, ಜಿಲ್ಲಾವಾರು ಸಂಪೂರ್ಣ ಯೋಜನೆಗಳ ಮಾಹಿತಿ ನೀಡುವುದು)

(ಆ) ಸದರಿ "ಜವಳಿ ಪಾರ್ಕ್"ಗೆ (ಟೆಕ್ಸ್‌ಟೈಲ್ ಪಾರ್ಕ್) ಸ್ವಾಧೀನಪಡಿಸಿಕೊಂಡ ಭೂಮಿ ಎಷ್ಟು ; (ಜಿಲ್ಲಾವಾರು, ಎಕರೆವಾರು ಮಾಹಿತಿ ನೀಡುವುದು)

(ಇ) ಸದರಿ "ಜವಳಿ ಪಾರ್ಕ್"ಗೆ (ಟೆಕ್ಸ್‌ಟೈಲ್ ಪಾರ್ಕ್) ಎಷ್ಟು ಬಂಡವಾಳ ಹೂಡಿಕೆ ಹಾಗೂ ಉದ್ಯೋಗದ ಸೃಷ್ಟಿಯಾಗಲಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸದರಿ "ಜವಳಿ ಪಾರ್ಕ್"ಗೆ ಇಲ್ಲಿಯವರೆಗೆ ಎಷ್ಟು ಉದ್ದಿಮೆಗಳನ್ನು ಸ್ಥಾಪಿಸಲಾಗಿದ್ದು ; ಎಷ್ಟು ಉದ್ಯೋಗಗಳನ್ನು ಸೃಜಿಸಲಾಗಿದೆ ? (ಉದ್ದಿಮೆವಾರು, ಜಿಲ್ಲಾವಾರು ಹಾಗೂ ಸಂಖ್ಯಾವಾರು ಪ್ರತ್ಯೇಕ ಮಾಹಿತಿ ನೀಡುವುದು)

# ಹೈದ್ರಾಬಾದ್-ಕರ್ನಾಟಕದ ಜಿಲ್ಲೆಗಳಲ್ಲಿ ಅಕಾಲಿಕ ಆಲಿಕಲ್ಲು ಮಳೆಯಿಂದ ಹಾನಿ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೧೮೯ (೨೪೮೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇತ್ತೀಚೆಗೆ ಸುರಿದ (ದಿನಾಂಕ : ೦೭-೦೩-೨೦೧೫ರಂದು) ಅಕಾಲಿಕ ಮತ್ತು ಆಲಿಕಲ್ಲು ಮಳೆಯಿಂದ ಹೈದ್ರಾಬಾದ್-ಕರ್ನಾಟಕದ ಜಿಲ್ಲೆಗಳಲ್ಲಿ ರೈತರ ಬೆಳೆಗಳು ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು ;

(ಆ) ಅಕಾಲಿಕ ಮತ್ತು ಆಲಿಕಲ್ಲು ಮಳೆಯಿಂದ ಕಳೆದ ೦೩ ವರ್ಷಗಳಲ್ಲಿ ಆದ ಹಾನಿಗೆ ರೈತರಿಗೆ ಸರಿಯಾದ ರೀತಿಯ ಪರಿಹಾರ ಕೊಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸಂಪೂರ್ಣ ವಿವರ ನೀಡುವುದು ;

(ಇ) ಈ ಭಾಗದ ರೈತರಿಗೆ ನ್ಯಾಯಯುತವಾಗಿ ಸಿಗಬೇಕಾದ ಪರಿಹಾರ ಕೊಡಲು ಸರ್ಕಾರ ಮುಂದಾಗುವುದೇ ; ಹಾಗಿದ್ದರೆ, ಸರ್ಕಾರವು ಕೈಗೊಳ್ಳುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ರೈತರಿಗೆ ಸೂಕ್ತ ಪರಿಹಾರ ನೀಡಲಾಗುವುದು ? (ಮಾಹಿತಿ ನೀಡುವುದು)

## ಅರಣ್ಯ ಇಲಾಖೆಯಿಂದ ಕಾಮಗಾರಿಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೯೦ (೨೪೮೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲೆಯ ಎಲ್ಲ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಅರಣ್ಯ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು ಎಷ್ಟು ; (ವಿಧಾನಸಭಾ ಕ್ಷೇತ್ರವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾಗಿರುವ ಹಣ ಎಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳಿಗೆ ಖರ್ಚಾಗಿರುವ ಹಣ ಎಷ್ಟು ; ಉಳಿಕೆಯಾದ ಮೊತ್ತ ಎಷ್ಟು ; (ಕಾಮಗಾರಿವಾರು, ವರ್ಷವಾರು ಮಾಹಿತಿ ನೀಡುವುದು)

(ಈ) ಮುಕ್ತಾಯಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಪ್ರಗತಿಯಲ್ಲಿರುವ ಕಾಮಗಾರಿಗಳು ಎಷ್ಟು ; ಯಾವ ಕಾಲಮಿತಿಯೊಳಗೆ ಮುಕ್ತಾಯಗೊಳಿಸಲಾಗುವುದು ; ಇದಕ್ಕೆ ರೂಪಿಸಲಾಗಿರುವ ರೂಪರೇಷೆಗಳು ಯಾವುವು ? (ವಿವರ ನೀಡುವುದು)

## ಆನೆ ಮತ್ತು ಹುಲಿಗಳ ಹಾವಳಿ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೧ (೨೪೮೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆನೆಗಳು ಮತ್ತು ಹುಲಿಗಳ ಹಾವಳಿಯಿಂದ ಮೃತಪಟ್ಟವರ ಸಂಖ್ಯೆ ಎಷ್ಟು ;

(ಆ) ಮೃತ ಕುಟುಂಬ ಸದಸ್ಯರಿಗೆ ಸರ್ಕಾರದಿಂದ ನೀಡಿರುವ ಪರಿಹಾರದ ಹಣವೆಷ್ಟು ;

(ಇ) ರಾಜ್ಯದಲ್ಲಿ ವನ್ಯಜೀವಿಗಳ ಪಾಲನೆ ಮತ್ತು ಸಂರಕ್ಷಣೆಗಾಗಿ ಸರ್ಕಾರ ತೆಗೆದುಕೊಂಡಿರುವ ಯೋಜನೆಗಳಾವುವು ;

(ಈ) ೨೦೧೪-೧೫ನೇ ಸಾಲಿನಲ್ಲಿ ವನ್ಯಜೀವಿ ಸಂರಕ್ಷಣೆಗಾಗಿ ಬಿಡುಗಡೆಯಾದ ಅನುದಾನವೆಷ್ಟು ;

(ಉ) ಅಳಿವಿನಂಚಿನಲ್ಲಿರುವ ಪ್ರಾಣಿ ಸಂಕುಲದ ಸಂರಕ್ಷಣೆಗಾಗಿ ಎಷ್ಟು ಅರಣ್ಯ ಪ್ರದೇಶಗಳನ್ನು ಗುರುತಿಸಲಾಗಿದೆ ; ಈ ಅರಣ್ಯ ಪ್ರದೇಶಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ?

## ಮೀನುಗಾರರ ಅಭಿವೃದ್ಧಿ ಯೋಜನೆಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೨ (೨೪೯೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಮೀನುಗಾರರ ಅಭಿವೃದ್ಧಿಗೆ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಮೀನುಗಾರರ ವಸತಿ ಸೌಕರ್ಯ ಕಲ್ಪಿಸಲು ರೂಪಿಸಿರುವ ಯೋಜನೆಗಳಾವುವು ; (ಮಾಹಿತಿ ಒದಗಿಸುವುದು)

(ಇ) ಈ ಜಿಲ್ಲೆಯಲ್ಲಿ ಎಷ್ಟು ಮೀನುಗಾರರಿಗೆ ವಸತಿ ಸೌಕರ್ಯಗಳನ್ನು ಕಲ್ಪಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಎಷ್ಟು ಮೀನು ಮಾರಾಟ ಕೇಂದ್ರಗಳನ್ನು ತೆರೆಯಲಾಗಿದೆ ಹಾಗೂ ಜಿಲ್ಲೆಯಲ್ಲಿ ಯಾವ ಯಾವ ಸ್ಥಳದಲ್ಲಿ ಮೀನು ಸಾಕಾಣಿಕೆ ಮಾಡಲಾಗುತ್ತಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಅರಣ್ಯ ಇಲಾಖಾ ಯೋಜನೆಯಡಿ ಕಾಮಗಾರಿಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೯೯೩ (೨೫೨೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಅರಣ್ಯ ಇಲಾಖೆ ವತಿಯಿಂದ ಯಾವ ಯಾವ ಯೋಜನೆಯಡಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ವಿಭಾಗವಾರು, ವಲಯವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಅರಣ್ಯ ಇಲಾಖೆ ಅಭಿವೃದ್ಧಿ ಕಾಮಗಾರಿಗೆ ನೀಡಲಾದ ಅನುದಾನವು ಸಮರ್ಪಕವಾಗಿ ಬಳಕೆಯಾಗುತ್ತಿದೆಯೇ ; (ವಿವರ ನೀಡುವುದು)

(ಇ) ಇಲಾಖೆಯಿಂದ ಜಿಲ್ಲೆಯಲ್ಲಿ ಅರಣ್ಯ ಪಾರ್ಕ್‌ನ್ನು ನಿರ್ಮಿಸಲು ಏನಾದರೂ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆಯೇ ; (ಹಾಗಿದ್ದರೆ ವಿವರ ನೀಡುವುದು)

(ಈ) ರಾಜ್ಯದಲ್ಲಿ ಎಷ್ಟು ಎಕರೆ ಅರಣ್ಯ ಭೂಮಿಯನ್ನು ಒತ್ತುವರಿ ಮಾಡಲಾಗಿದೆ ? (ವಿವರ ನೀಡುವುದು)

## ಎದುರುಬೈಲಿನಲ್ಲಿ ನಿರ್ಮಿಸಲ್ಪಟ್ಟ ಬ್ರಿಡ್ಜ್ ಕಂ ಬ್ಯಾರೇಜ್

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೯೪ (೨೪೯೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ನೀರಾವರಿ ನಿಗಮದಿಂದ ಕುಂದಾಪುರ ತಾಲ್ಲೂಕಿನ ಆಲೂರು ಗ್ರಾಮದ ಗುಂಡೂರಿನಲ್ಲಿ ಸೌಪರ್ಣಿಕಾ ನದಿಗೆ ಅಡ್ಡಲಾಗಿ ಎದುರುಬೈಲು ಎಂಬಲ್ಲಿ ನಿರ್ಮಿಸಲಾದ ಬ್ರಿಡ್ಜ್ ಕಂ ಬ್ಯಾರೇಜ್ ಹಾಗೂ ಡೈವರ್ಷನ್ ವಿಯರ್‌ನ ಕಾಮಗಾರಿಯ ಅಂದಾಜು ಮೊತ್ತವೆಷ್ಟು ; ಟೆಂಡರ್ ಕರಾರು ಮೊತ್ತವೆಷ್ಟು; ಕಾಮಗಾರಿ ಪೂರ್ಣಗೊಂಡಾಗ ಪಾವತಿಸಲಾದ ಒಟ್ಟು ಮೊತ್ತವೆಷ್ಟು ; ಮತ್ತು ಈ ಕಾಮಗಾರಿಯನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು ;

(ಆ) ಈ ಮೇಲಿನ ಯೋಜನೆಗೆ ಪೂರಕವಾಗಿ ನಿರ್ಮಿಸಲಾದ ಒಟ್ಟು ಚೆಕ್‌ಡ್ಯಾಂಗಳ ಸಂಖ್ಯೆ ಎಷ್ಟು ; ಮತ್ತು ಇವುಗಳ ಅಂದಾಜು ಮೊತ್ತವೆಷ್ಟು ; ಟೆಂಡರ್ ಕರಾರು ಮೊತ್ತವೆಷ್ಟು ; ಮತ್ತು ಕಾಮಗಾರಿ ಮುಕ್ತಾಯವಾದಾಗ ಪಾವತಿಸಲಾದ ಒಟ್ಟು ಮೊತ್ತವೆಷ್ಟು ; ಮತ್ತು ಈ ಕಾಮಗಾರಿಯನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು ; ಮತ್ತು ಈ ಕಾಮಗಾರಿಗಳಿಂದ ನೀರಾವರಿ ಆಗುವ ಒಟ್ಟು ಕೃಷಿ ಭೂಮಿಯ ವಿಸ್ತೀರ್ಣವೆಷ್ಟು ;

(ಇ) ಮೇಲಿನ ಬ್ರಿಡ್ಜ್ ಕಂ ಬ್ಯಾರೇಜ್ ಹಾಗೂ ಚೆಕ್‌ಡ್ಯಾಂಗಳ ನಿರ್ವಹಣೆಯನ್ನು ಯಾರಿಗೆ ಹಸ್ತಾಂತರಿಸಲಾಗಿದೆ ; ಮತ್ತು ಕಾಮಗಾರಿ ಪೂರ್ಣಗೊಂಡ ದಿನದಿಂದ ಇಂದಿನ ತನಕ ಇದರ ನಿರ್ವಹಣೆಗೆ ತಗುಲಿದ ಒಟ್ಟು ಮೊತ್ತವೆಷ್ಟು ? (ಉದ್ದೇಶ, ಮೊತ್ತವಾರು ವರ್ಷವಾರು ವಿವರ ನೀಡುವುದು)

## ಪಾವತಿಗೆ ಬಾಕಿ ಇರುವ ಮೊತ್ತ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೯೫ (೨೪೯೬) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಸಣ್ಣ ನೀರಾವರಿ ಇಲಾಖೆಯಿಂದ ಬೇರೆ, ಬೇರೆ ಜಿಲ್ಲೆಗಳಿಗೆ ಪಾವತಿಸಲು ಬಾಕಿ ಇರುವ ಮೊತ್ತವೆಷ್ಟು ; (ಜಿಲ್ಲಾವಾರು, ಕಾಮಗಾರಿವಾರು ವಿವರ ನೀಡುವುದು)

(ಆ) ಗುತ್ತಿಗೆದಾರರಿಗೆ ಹಣ ಪಾವತಿ ಮಾಡದೆ ಇರುವುದರಿಂದ ಕಾಮಗಾರಿಗಳು ಅಪೂರ್ಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಹಾಗೂ ಕೈಗೊಳ್ಳುವ ಕ್ರಮಗಳೇನು ; ಇಲ್ಲವಾದಲ್ಲಿ ಕಾರಣವೇನು ?

## ಅರಣ್ಯ ಪ್ರೇರಕರ ವಿವರ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೯೬ (೨೪೯೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರಣ್ಯ ಪ್ರೇರಕರ ಒಟ್ಟು ಸಂಖ್ಯೆ ಎಷ್ಟು ; ಇವರನ್ನು ಎಂದು ನೇಮಿಸಿಕೊಳ್ಳಲಾಯಿತು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರಣ್ಯ ಪ್ರೇರಕರಿಗೆ ನೀಡಲಾಗುತ್ತಿರುವ ವೇತನವೆಷ್ಟು ; ಅವರಿಗೆ ನೀಡಲಾಗುತ್ತಿರುವ ಸೌಲಭ್ಯಗಳು ಯಾವುವು ;

(ಇ) ಸುಮಾರು ೩೫ ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವ ಅರಣ್ಯ ಪ್ರೇರಕರಿಗೆ ಉದ್ಯೋಗ ಭದ್ರತೆ ಮತ್ತು ಸರ್ಕಾರಿ ನೌಕರರಿಗಿರುವ ಸೌಲಭ್ಯಗಳನ್ನು ಒದಗಿಸಲಾಗುವುದೇ ; ಇಲ್ಲವಾದಲ್ಲಿ, ಕಾರಣವೇನು ?

## ವರಾಹಿ ಯೋಜನೆಯಲ್ಲಿ ಉಪಯೋಗಿಸಿಕೊಂಡ ಅರಣ್ಯಕ್ಕೆ ಪಾವತಿ ಬಾಕಿ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೯೭ (೨೪೯೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನೀರಾವರಿ ನಿಗಮದ ವರಾಹಿ ನೀರಾವರಿ ಯೋಜನೆಯಲ್ಲಿ ಉಪಯೋಗಿಸಿಕೊಂಡ ಅರಣ್ಯಕ್ಕೆ ಪಾವತಿಸಲು ಬಾಕಿ ಇರುವ ಮೊತ್ತವೆಷ್ಟು ; ಬಾಕಿ ಇದ್ದಲ್ಲಿ, ಎಂದು ಪಾವತಿಸಲಾಗುವುದು ;

(ಆ) ಕರ್ನಾಟಕ ನೀರಾವರಿ ನಿಗಮದಿಂದ ವರಾಹಿ ನೀರಾವರಿ ಯೋಜನೆಗೆ ಉಪಯೋಗಿಸಿಕೊಂಡ ಅರಣ್ಯಕ್ಕೆ ಪಾವತಿಸಲು ಬಾಕಿ ಇರುವ ಮೊತ್ತಕ್ಕೆ ಹಣ ಪಾವತಿಸುವಂತೆ ಅರಣ್ಯ ಇಲಾಖೆಯಿಂದ ಎಷ್ಟು ಜ್ಞಾಪನಾ ಪತ್ರ ಬಂದಿರುತ್ತದೆ ; ಅರಣ್ಯ ಇಲಾಖೆಯಿಂದ ಹಲವು ಬಾರಿ ಜ್ಞಾಪನಾ ಪತ್ರ ಬಂದರೂ ಸಹ ಈ ತನಕ ಪಾವತಿಸದಿರಲು ಕಾರಣವೇನು ?

## ಕಾಲುವೆ ಕಾಮಗಾರಿ ತ್ವರಿತಕ್ಕೆ ಮತ್ತು ಲಿಂಕ್ ಚಾನಲ್ ನಿರ್ಮಾಣ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೯೮ (೨೪೯೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಹಾದುಹೋಗುವ ನಾರಾಯಣಪುರ ಬಲದಂಡೆ ಕಾಲುವೆಯ ಉದ್ದ ಎಷ್ಟು ; ಎಲ್ಲಿಯವರೆಗೆ ಹಾಗೂ ಎಷ್ಟನೇ ಮೈಲಿಯವರೆಗೆ ಕಾಲುವೆ ನಿರ್ಮಾಣ ಕಾಮಗಾರಿ ನಡೆದಿದೆ ; (ಈ ಕಾಮಗಾರಿ ಪೂರ್ಣಗೊಳ್ಳುವುದು ಯಾವಾಗ ವಿವರ ಒದಗಿಸುವುದು)

(ಆ) ಎನ್.ಆರ್.ಬಿ.ಸಿ. ೧೦೬ನೇ ಮೈಲಿಯಿಂದ ರಾಯಚೂರು ನಗರ ಹಾಗೂ ಅರವತ್ತು ಗ್ರಾಮಗಳಿಗೆ ಕುಡಿಯುವ ನೀರಿಗಾಗಿ ಲಿಂಕ್ ಚಾನಲ್ ನಿರ್ಮಾಣ ಮಾಡುವ ಯೋಜನೆಯನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕುಡಿಯುವ ನೀರಿನ ಅತಿಪ್ರಮುಖ ಯೋಜನೆಯಾದ ಲಿಂಕ್ ಚಾನಲ್ ನಿರ್ಮಾಣ ಕಾಮಗಾರಿಗೆ ಮಂಜೂರಾತಿ ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು ; (ಪೂರ್ಣ ವಿವರ ಒದಗಿಸುವುದು)

(ಈ) ತುಂಗಭದ್ರಾ ಹಿನ್ನೀರಿನ ಅಣೆಕಟ್ಟೆಯಲ್ಲಿ ತುಂಬಿರುವ ಹೂಳಿನಿಂದ ೩೫ ಟಿಎಂಸಿ ಸಾಮರ್ಥ್ಯದ ನೀರು ಶೇಖರಣೆ ನಷ್ಟವಾಗುತ್ತಿರುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; ನೀರು ಶೇಖರಣೆಯನ್ನು ಹೆಚ್ಚಿಸಲು ತುಂಗಭದ್ರಾ ಹಿನ್ನೀರಿನ ಅಣೆಕಟ್ಟೆಯಲ್ಲಿ

ತುಂಬಿರುವ ಹೂಳನ್ನು ತೆಗೆಸಲು ಗ್ಲೋಬಲ್ ಟೆಂಡರ್ ಕರೆದಿರುವುದು ಯಾವ ಹಂತದಲ್ಲಿದೆ ; ಕಾಮಗಾರಿ ಯಾವಾಗ ಪೂರ್ಣಗೊಳಿಸಲಾಗುವುದು ? (ಪೂರ್ಣ ವಿವರ ನೀಡುವುದು)

## ಸಣ್ಣ ನೀರಾವರಿ ಇಲಾಖೆಗೆ ಬಿಡುಗಡೆಯಾದ ಅನುದಾನ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೯೯ (೨೪೯೫) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ವಿಭಾಗದಲ್ಲಿ ಬರುವ ರಾಯಚೂರು, ಮಾನ್ವಿ, ದೇವದುರ್ಗ ತಾಲ್ಲೂಕುಗಳಲ್ಲಿ ಇರುವ ಸಣ್ಣ ನೀರಾವರಿ ಇಲಾಖೆಗೆ ಸೇರಿದ ಒಟ್ಟು ಕೆರೆಗಳೆಷ್ಟು ; ಸದರಿ ಕೆರೆಗಳ ಅಭಿವೃದ್ಧಿಗಾಗಿ ೨೦೧೩–೨೦೧೪ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಒಟ್ಟು ಅನುದಾನವೆಷ್ಟು ; (ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ರಾಯಚೂರು ತಾಲ್ಲೂಕಿನ ಕೆರೆಗಳಿಗೆ ಕೃಷ್ಣ ಮತ್ತು ತುಂಗಭದ್ರ ನದಿಗಳಿಂದ ನೀರು ತುಂಬಿಸುವ ಯೋಜನೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ ಸದರಿ ಯೋಜನೆಯ ಮಂಜೂರಾತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಪೂರ್ಣ ವಿವರ ನೀಡುವುದು)

(ಇ) ತುಂಗಭದ್ರಾ ಎಡದಂಡೆಯು ಮುಖ್ಯ ಕಾಲುವೆ ಹಾಗೂ ನಾರಾಯಣಪುರ ಬಲದಂಡೆ ಕಾಲುವೆಯು ರಾಯಚೂರು ಜಿಲ್ಲೆಯ ಕೊನೆಯ ಭಾಗದಲ್ಲಿ ಬರುವುದರಿಂದ ನೀರಿನ ಕೊರತೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ನೀರಿನ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಪೂರ್ಣ ವಿವರ ಒದಗಿಸುವುದು)

## ಜಮೀನು ಸ್ವಾಧೀನದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೦೦ (೨೫೦೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರವು ಸೇರಿದಂತೆ ರಾಜ್ಯದ ಹಲವು ಕಡೆ ವಿವಿಧ ಯೋಜನೆಗಳ ಸಲುವಾಗಿ ಸ್ವಾಧೀನಪಡಿಸಿಕೊಂಡಿರುವ ರೈತರ ಕೃಷಿ ಭೂಮಿ ಎಷ್ಟು ; (ಜಿಲ್ಲಾವಾರು ಎಕರೆವಾರು ವಿವರ ಒದಗಿಸುವುದು)

(ಆ) ಇದಕ್ಕೆ ರೈತರಿಗೆ ಸಮರ್ಪಕವಾದ ಪರಿಹಾರ ಧನವನ್ನು ನೀಡಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ; ಪರಿಹಾರ ನೀಡುವಿಕೆಗೆ ಬಾಕಿಯಿರುವ ಪ್ರಕರಣಗಳೆಷ್ಟು ;

(ಇ) ಹಲವಾರು ಕಡೆಗಳಲ್ಲಿ ಭೂಸ್ವಾಧೀನ ಪ್ರಕ್ರಿಯೆ ನಡೆದಿದ್ದರೂ ಸಹ, ನಡೆದಿರುವುದೆಲ್ಲಾ ಭೂಕಬಳಿಕೆಯ ಪ್ರಕರಣಗಳೇ ಜಾಸ್ತಿಯಾಗಿದ್ದು ಅಂತಹ ಪ್ರಕರಣಗಳೆಷ್ಟು ;

(ಈ) ರೈತರ ಕೃಷಿ ಭೂಮಿಯ ಜೊತೆಗೆ ಸರ್ಕಾರ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗುತ್ತಿದೆಯೇ ?

## ಸ್ಟ್ಯಾಂಪ್ ಪೇಪರ್ ಕೊರತೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೨೨೦೧ (೨೫೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎರಡು ರೂಪಾಯಿ ಮುಖಬೆಲೆಯ ಸ್ಟ್ಯಾಂಪ್ ಪೇಪರ್ (ದಾಸ್ತವೇಜು ಹಾಳೆ) ಕೊರತೆ ಎದುರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ದಾಸ್ತಾವೇಜು ಹಾಳೆಯ ಮುದ್ರಣ, ಪೂರೈಕೆ ಹಾಗೂ ವಿತರಣೆ ಸ್ಥಗಿತಗೊಂಡಿರುವುದು ನಿಜವೇ ; ನಿಜವಾಗಿದ್ದಲ್ಲಿ ಕಾರಣವೇನು ;

(ಇ) ೨ ರೂಪಾಯಿ ಬೆಲೆಯ ಸ್ಟ್ಯಾಂಪ್ ಪೇಪರ್‌ನ ಸಮರ್ಪಕ ಪೂರೈಕೆಗೆ ಬೇಕಾಗುವ ಕಾಲಾವಧಿ ಏನು ;

(ಈ) ಅಲ್ಲಿಯವರೆಗೆ ಸಾರ್ವಜನಿಕರಿಗೆ ತೊಂದರೆ ತಪ್ಪಿಸಲು ಪರ್ಯಾಯ ವ್ಯವಸ್ಥೆಯನ್ನೇನಾದರೂ ಕಲ್ಪಿಸಲಾಗಿದೆಯೇ ?

## ಅರಣ್ಯ ಪ್ರದೇಶದಲ್ಲಿ ಪ್ಲಾಸ್ಟಿಕ್ ನಿಷೇಧ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೨೨೦೨ (೨೫೩೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ ಜಿಲ್ಲೆಯ ಕುಮಟಾ ಮತ್ತು ಶಿರಸಿ ತಾಲ್ಲೂಕಿನ ನಡುವೆ ಇರುವ ಯಾಣ ಹಾಗೂ ಸುತ್ತಲಿನ ಪ್ರದೇಶವು ಅರಣ್ಯ ಇಲಾಖೆಗೆ ಸೇರಿರುವುದು ನಿಜವೇ ;

(ಆ) ಇಲ್ಲಿಗೆ ನಿಸರ್ಗದತ್ತವಾದ ಎತ್ತರದ ಕಲ್ಲಿನ ಶಿಖರಗಳನ್ನು ನೋಡಲು ಸಾಕಷ್ಟು ಸಂಖ್ಯೆಯಲ್ಲಿ ಪ್ರವಾಸಿಗರು ಬರುತ್ತಿದ್ದು, ಇದರ ಪರಿಣಾಮವಾಗಿ ಪ್ಲಾಸ್ಟಿಕ್ ಬಾಟಲುಗಳು ಹಾಗೂ ಪ್ಲಾಸ್ಟಿಕ್ ಪೊಟ್ಟಣಗಳ ರಾಶಿ ಯಾಣದ ಸುತ್ತಮುತ್ತಲು ಸೇರುತ್ತಿದ್ದು, ಈ ಪರಿಸರ ನೈರ್ಮಲ್ಯವನ್ನು ತಡೆಗಟ್ಟಲು ಇಲಾಖೆಯು ಯಾವ ರೀತಿಯ ಕಠಿಣ ಕ್ರಮ ಕೈಗೊಂಡಿದೆ ;

(ಇ) ಪ್ರವಾಸಿಗರಿಗೆ ಶೌಚಾಲಯ ವ್ಯವಸ್ಥೆ ಕಲ್ಪಿಸಲು ಕನಿಷ್ಟ ಮೊಬೈಲ್ ಶೌಚಾಲಯ ಅಳವಡಿಸಲು ಪ್ರವಾಸೋದ್ಯಮ ಇಲಾಖೆಗೆ

ಅನುಮತಿಸಲು ಅಥವಾ ಅರಣ್ಯ ಇಲಾಖೆಯಿಂದಲೇ ಅಳವಡಿಸಲು ಮುಂದಾಗುವುದೇ ;

(ಈ) ಯಾಣ ಹಾಗೂ ಸುತ್ತಮುತ್ತಲಿನ ಅರಣ್ಯ ಪ್ರದೇಶವನ್ನು ಪ್ಲಾಸ್ಟಿಕ್ ನಿಷೇಧಿತ ಪ್ರದೇಶವೆಂದು ಘೋಷಿಸಿ ಕ್ರಮ ಕೈಗೊಳ್ಳುವುದೇ ?

## ಕಬ್ಬನ್‌ಪಾರ್ಕಿನ ಮತ್ಸ್ಯಾಗಾರವನ್ನು ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೨೦೩ (೨೫೪೯) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಕಬ್ಬನ್ ಪಾರ್ಕಿನಲ್ಲಿರುವ ಸರ್ಕಾರಿ ಮತ್ಸ್ಯಾಗಾರದಲ್ಲಿ ಇರುವ ಒಟ್ಟು ಅಕ್ವೇರಿಯಂ ತೊಟ್ಟಿಗಳೆಷ್ಟು ; ಇರುವ ಒಟ್ಟು ತೊಟ್ಟಿಗಳಲ್ಲಿ ಅಂದಾಜು ಎಷ್ಟು ಮೀನುಗಳನ್ನು ಸಾಕಬಹುದಾಗಿದೆ ;

(ಆ) ಇರುವ ಒಟ್ಟು ತೊಟ್ಟಿಗಳಲ್ಲಿ ಎಷ್ಟು ತೊಟ್ಟಿಗಳು ಮೀನು ಸಾಕಲು ಯೋಗ್ಯವಾಗಿವೆ ;

(ಇ) ಶಿಥಿಲವಾಗಿರುವ ಹಾಗೂ ಸೋರುತ್ತಿರುವ ಅಕ್ವೇರಿಯಂ ತೊಟ್ಟಿಗಳನ್ನು ಬದಲಾಯಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಈ) ಕಳೆದ ಮೂರು ತಿಂಗಳಿನಿಂದ ಸಾಕಷ್ಟು ಮೀನುಗಳು ಮರಣಿಸಿದ್ದು, ಅವುಗಳ ಸಂಖ್ಯೆಯಲ್ಲಿ ಕುಸಿತವಾಗಿರುವುದು ನಿಜವೇ ; ಇದಕ್ಕೆ ಕಾರಣಗಳೇನು ;

(ಉ) ವಿದ್ಯುತ್ ಬಿಲ್ಲು ನೀರಿನ ಬಿಲ್ಲನ್ನು ಕಟ್ಟಲಾಗದ ಆರ್ಥಿಕ ದುಸ್ಥಿತಿಯಲ್ಲಿ ಮತ್ಸ್ಯಾಗಾರವಿರುವುದು ನಿಜವೇ ;

(ಊ) ನಿಜವಾಗಿದ್ದಲ್ಲಿ, ಹೆಚ್ಚಿನ ಅನುದಾನ ನೀಡುವ ಮೂಲಕ ಮತ್ಸ್ಯಾಗಾರವನ್ನು ಅಭಿವೃದ್ಧಿಪಡಿಸುವಲ್ಲಿ ಸರ್ಕಾರವು ಮುಂದಾಗುವುದೇ ?

## ಹೊಸ ತಾಲ್ಲೂಕುಗಳ ರಚನೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೨೦೪ (೨೫೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸ ತಾಲ್ಲೂಕುಗಳ ರಚನೆಗೆ ಸರ್ಕಾರ ಮುಂದಾಗಿರುವುದು ನಿಜವೇ ;

(ಆ) ನಿಜವಿದ್ದಲ್ಲಿ, ಈ ಪ್ರಕ್ರಿಯೆ ಈಗ ಯಾವ ಹಂತದಲ್ಲಿದೆ ; ಸದರಿ ಪ್ರಕ್ರಿಯೆ ವಿಳಂಬವಾಗಲು ಕಾರಣವೇನು ; ಹೊಸ ತಾಲ್ಲೂಕುಗಳನ್ನು ರಚಿಸಿ ಘೋಷಿಸಲು ಬೇಕಾಗುವ ಕಾಲಾವಧಿ ಏನು ;

(ಇ) ಹೊಸದಾಗಿ ರಚಿಸಲಿರುವ ತಾಲ್ಲೂಕುಗಳು ಯಾವುವು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸೊಂಡೆಕೊಪ್ಪ ಗ್ರಾಮ ಮತ್ತು ತಿಪ್ಪಗೊಂಡನಹಳ್ಳಿಯ ಕೆರೆಯ ಆಜು ಬಾಜಿನ ವ್ಯವಸಾಯ ಭೂಮಿಯಲ್ಲಿ ಅನಧಿಕೃತ ಬಡಾವಣೆಗಳ ನಿರ್ಮಾಣ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೦೫ (೨೫೦೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ದಕ್ಷಿಣ ತಾಲ್ಲೂಕು, ದಾಸನಪುರ ಹೋಬಳಿಯ ಸೊಂಡೆಕೊಪ್ಪ ಗ್ರಾಮದ ಮತ್ತು ತಿಪ್ಪಗೊಂಡನಹಳ್ಳಿ ಕೆರೆಯ ಆಜು

ಬಾಜಿನ ವ್ಯವಸಾಯ ಭೂಮಿಯಲ್ಲಿ ಸರ್ಕಾರದ ಪೂರ್ವ ಅನುಮತಿಯನ್ನು ಪಡೆದು ಅಥವಾ ಪಡೆಯದೇ ಬಡಾವಣೆಗಳು ನಿರ್ಮಾಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ ; ಇದರಿಂದ ತಿಪ್ಪಗೊಂಡನಹಳ್ಳಿ ಜಲಾಶಯಕ್ಕೆ ಹಾನಿಯಾಗುವುದಿಲ್ಲವೇ ; ಇದರ ಬಗ್ಗೆ ತೆಗೆದುಕೊಂಡಿರುವ ಇಲಾಖಾ ನಿರ್ಧಾರವೇನು ;

(ಆ) ರಾಜ್ಯದಲ್ಲಿರುವ ಉಪ ನೋಂದಾಣಾಧಿಕಾರಿಗಳ ಕಛೇರಿಗಳೆಷ್ಟು ; ೨೦೧೩-೧೪ ಮತ್ತು ೨೦೧೪-೧೫ರಲ್ಲಿ ಸಂಗ್ರಹವಾದ ರಾಜಧನವೆಷ್ಟು ? (ಜಿಲ್ಲಾವಾರು ವಿವರ ನೀಡುವುದು ಮತ್ತು ಬೆಂಗಳೂರಿನಲ್ಲಿರುವ ಉಪ ನೋಂದಣಾಧಿಕಾರಿಗಳ ಕಛೇರಿಗಳ ವಿಳಾಸವನ್ನು ನೀಡುವುದು)

## ಅಸಂಘಟಿತ ಕಾರ್ಮಿಕರ ಮಕ್ಕಳಿಗೆ ವಸತಿ ಶಾಲೆ ಸೌಲಭ್ಯ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೦೬ (೨೫೩೩) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಸಂಘಟಿತ ಕಾರ್ಮಿಕ ಮಕ್ಕಳಿಗಾಗಿ ವಸತಿ ಶಾಲೆ ತೆರೆಯುವ ಯೋಜನೆ ಸರ್ಕಾರದ ಮುಂದಿದೆಯೇ ; ಅತೀ ಹೆಚ್ಚು ಅಸಂಘಟಿತ ಕಾರ್ಮಿಕರು ಕೆಲಸ ಮಾಡುವ ಬೆಂಗಳೂರು ಮಹಾನಗರ ಮತ್ತು ಬೆಂಗಳೂರು ನಗರ ಜಿಲ್ಲೆಯಲ್ಲಿ ವಸತಿ ಶಾಲೆಗಳನ್ನು ತೆರೆಯಲಾಗಿದೆಯೇ ; ತೆರೆದಿದ್ದರೆ ಎಷ್ಟು ಕಡೆ ತೆರೆಯಲಾಗಿದೆ ; ಇದಕ್ಕಾಗಿ ಬಿಡುಗಡೆ ಮಾಡಿರುವ ಹಣವೆಷ್ಟು ;

(ಆ) ಸರ್ಕಾರಿ ಆಸ್ಪತ್ರೆಗಳಲ್ಲಿ ಗುತ್ತಿಗೆ ಆಧಾರದಲ್ಲಿ ಸ್ವಚ್ಛತಾ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ಇ.ಎಸ್.ಐ. ಪಿ.ಎಫ್., ವೇತನ

ಸಮವಸ್ತ್ರದ ಸೌಲಭ್ಯವಿಲ್ಲದೇ ಶೋಷಣೆಗೊಳಪಟ್ಟಿದ್ದು, ರಾಜ್ಯ ಸಫಾಯಿ ಕರ್ಮಚಾರಿ ಅಧ್ಯಕ್ಷರು ಆಸ್ಪತ್ರೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಕಾರ್ಮಿಕರು ತಮ್ಮ ಅಳಲನ್ನು ಹೊರ ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಇವರಿಗೆ ಯಾವ ರೀತಿ ನ್ಯಾಯ ಒದಗಿಸಲಾಗುತ್ತಿದೆ ?

## ತಿಪ್ಪಗೊಂಡನಹಳ್ಳಿ ವ್ಯಾಪ್ತಿಯ ಅರ್ಕಾವತಿ ಪುನಶ್ಚೇತನ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೦೭ (೨೫೦೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತಿಪ್ಪನಗೊಂಡನಹಳ್ಳಿ ವ್ಯಾಪ್ತಿಯ ಅರ್ಕಾವತಿ ಪುನಶ್ಚೇತನಕ್ಕೆ (ರಾಜಕಾಲುವೆ) ಬಿಡುಗಡೆ ಮಾಡಿದ ಹಣವೆಷ್ಟು ; ಬಿಡುಗಡೆ ಮಾಡಲಾಗಿದ್ದು ಯಾವಾಗ, ಪುನಶ್ಚೇತನ ಕೆಲಸ ಮುಕ್ತಾಯಗೊಂಡಿದೆಯೇ ;

(ಆ) ನೆಲಮಂಗಲ ತಾಲ್ಲೂಕು ಸೊಂಡೆಕೊಪ್ಪ ಗ್ರಾಮದ ಸೊಂಡೆಕೊಪ್ಪ ಕೆರೆ ಕೋಡಿ ರಾಜಕಾಲುವೆಯನ್ನು ಒತ್ತುವರಿ ಮಾಡಿಕೊಂಡ ಸರ್ವೆ ನಂ.೨೦೬ರ ಜಮೀನಿನ ಪೂರ್ವಕ್ಕೆ ರಾಜಕಾಲುವೆಯನ್ನು ಮುಚ್ಚಿ ಬಡಾವಣೆ ನಿರ್ಮಾಣ ಮಾಡಲು ಹೊರಟಿರುವುದು ನೀರಾವರಿ ಇಲಾಖೆಯ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ತೆಗೆದುಕೊಂಡಿರುವ ಕ್ರಮವೇನು ;

(ಇ) ರಾಜಕಾಲುವೆ ಪುನಶ್ಚೇತನದಿಂದ ತಿಪ್ಪಗೊಂಡನಹಳ್ಳಿಯ ಜಲಾಶಯದಲ್ಲಿ ಎಷ್ಟು ನೀರನ್ನು ಸಂಗ್ರಹಿಸಲಾಗಿದೆ ; ಹರಿದು ಹೋಗಿರುವ ನೀರಿನ ಪ್ರಮಾಣ ಎಷ್ಟು ?

## ಮಳೆ ನೀರು ಸಂಗ್ರಹ ಯೋಜನೆಗಳ ಅನುಷ್ಠಾನ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೦೮ (೨೫೧೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಳೆ ನೀರು ಸಂಗ್ರಹ ಕುರಿತು ಯೋಜನೆಗಳು ಅನುಷ್ಠಾನಗೊಂಡಿವೆಯೇ ; ಹಾಗಿದ್ದಲ್ಲಿ, ಈ ಕುರಿತಾದ ಯೋಜನೆಗಳಾವುವು ;

(ಆ) ಮಳೆ ನೀರು ಸಂಗ್ರಹಕ್ಕೆ ನೀಡುತ್ತಿರುವ ತಾಂತ್ರಿಕ ಮತ್ತು ಸಂಪ್ರದಾಯಿಕ ಜ್ಞಾನ, ಮಾರ್ಗದರ್ಶನ ಹಾಗೂ ಆರ್ಥಿಕ ನೆರವಿನ ವಿವರಗಳನ್ನು ಒದಗಿಸುವುದು ?

## ನೀರಾವರಿ ಯೋಜನೆಗಳ ಪ್ರಗತಿ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೦೯ (೨೫೧೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಗತಿಯಲ್ಲಿರುವ ಭಾರಿ ಮತ್ತು ಮಧ್ಯಮ ನೀರಾವರಿ ಯೋಜನೆಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಯೋಜನೆಗಳ ಅಂದಾಜು ಮೊತ್ತವೆಷ್ಟು ಹಾಗೂ ಕಾಲಮಿತಿಯೇನು ;

(ಇ) ಕಳೆದ ಎರಡು ವರ್ಷಗಳಲ್ಲಿ ಈ ಯೋಜನೆಗಳಿಗೆ ಸರ್ಕಾರ ಬಿಡುಗಡೆ ಮಾಡಿರುವ ಮೊತ್ತ ಎಷ್ಟು ; (ಯೋಜನೆವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸದರಿ ಯೋಜನೆಗಳಲ್ಲಿ ಕಳಪೆ ಮಟ್ಟದಲ್ಲಿ ನಡೆಯುತ್ತಿರುವ ಬಗ್ಗೆ ದೂರುಗಳು ಬಂದಿದೆಯೇ ;

(ಉ) ಹಾಗಿದ್ದರೆ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಬಡ ಕುಟುಂಬಗಳಿಗೆ ಅಂತ್ಯ ಸಂಸ್ಕಾರಕ್ಕಾಗಿ ನೀಡುವ ಆರ್ಥಿಕ ಸಹಾಯ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೧೦ (೨೫೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಘೋಷಿತ ಯೋಜನೆಯಾದ ಬಡ ಜನರಿಗೆ ಅಂತ್ಯ ಸಂಸ್ಕಾರಕ್ಕಾಗಿ ನೀಡಲಾಗುತ್ತಿದ್ದ ಆರ್ಥಿಕ ಸಹಾಯದ ಯೋಜನೆಯನ್ನು ಈಗಲೂ ಸರ್ಕಾರ ಮುಂದುವರೆಸಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ ಎಷ್ಟು ಕುಟುಂಬಗಳಿಗೆ ಆರ್ಥಿಕ ಸಹಾಯ ನೀಡಲಾಗಿದೆ ;

(ಇ) ಬಡ ಕುಟುಂಬಗಳಿಗೆ ಸಹಾಯವಾಗುವ ಈ ಆರ್ಥಿಕ ನೆರವನ್ನು ಸಕಾಲದಲ್ಲಿ ಒದಗಿಸಿಕೊಡಲು ಹಾಗೂ ಸರಳೀಕರಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಪ್ರಸ್ತುತ ಅಂತ್ಯ ಸಂಸ್ಕಾರಕ್ಕಾಗಿ ನೀಡುತ್ತಿರುವ ಹಣ ಎಷ್ಟು ; ಸದರಿ ನೆರವಿನ ಹಣವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಭೂಮಿ ಒತ್ತುವರಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೧೧ (೨೫೦೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಿಂದ ಬೆಂಗಳೂರು ಮತ್ತು ಬೆಂಗಳೂರು ಸುತ್ತಮುತ್ತಲು ಒತ್ತುವರಿಯಾಗಿರುವ ಭೂಮಿಯ ವಿಸ್ತೀರ್ಣ ಎಷ್ಟು ;

(ಆ) ಭೂಮಿ ಒತ್ತುವರಿ ಮಾಡಿದ ವ್ಯಕ್ತಿಗಳ ವಿರುದ್ಧ ಸರ್ಕಾರವು ಕೈಗೊಂಡಿರುವ ಕಾನೂನು ಕ್ರಮಗಳೇನು ;

(ಇ) ಒತ್ತುವರಿಯಿಂದ ವಶಪಡಿಸಿಕೊಂಡಿರುವ ಭೂಮಿಯ ಕುರಿತು ಸರ್ಕಾರದ ಮುಂದಿನ ನಿಲುವೇನು ?

## ಬರಪೀಡಿತ ಪ್ರದೇಶಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೨೧೨ (೨೫೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಎಷ್ಟು ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳು ಎಂದು ಘೋಷಿಸಲಾಗಿದೆ ;

(ಆ) ಸದರಿ ತಾಲ್ಲೂಕುಗಳಿಗೆ ಬರಪೀಡಿತ ಕಾಮಗಾರಿ ಕೈಗೊಳ್ಳಲು ಬಿಡುಗಡೆ ಮಾಡಿರುವ ಹಣ ಎಷ್ಟು ;

(ಇ) ಬರಪೀಡಿತ ಪ್ರದೇಶಗಳಲ್ಲಿ ಕೈಗೊಳ್ಳುವ ಕಾಮಗಾರಿಗಳು ಯಾವುವು ;

(ಈ) ತುಮಕೂರು, ಚಿತ್ರದುರ್ಗ, ದಾವಣಗೆರೆ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳ ಬರಪೀಡಿತ ತಾಲ್ಲೂಕುಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ ?

## ಗೋಮಾಳ ಜಮೀನಿನ ಒತ್ತುವರಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೨೧೩ (೨೫೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು, ಚಿತ್ರದುರ್ಗ, ದಾವಣಗೆರೆ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಯಲ್ಲಿರುವ ಗೋಮಾಳದ ಜಮೀನು ಎಷ್ಟು ; (ತಾಲ್ಲೂಕುವಾರು ವಿವರ ಕೊಡುವುದು)

(ಆ) ಇದರಲ್ಲಿ ಒತ್ತುವರಿ ಆಗಿರುವ ಜಮೀನು ಎಷ್ಟು ;

(ಇ) ಒತ್ತುವರಿದಾರರ ಮೇಲೆ ಸರ್ಕಾರ ಈವರೆಗೆ ಏನು ಕ್ರಮ ಜರುಗಿಸಿದೆ ;

(ಈ) ಗೋಮಾಳ ಅಂದರೇನು ; ಈ ಜಮೀನಿನನ್ನು ಯಾವ ಉದ್ದೇಶಕ್ಕಾಗಿ ಕಾಯ್ದಿರಿಸಲಾಗಿದೆ ?

## ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ (I.T.I) ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೨೧೪ (೨೫೧೩) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಖಾಸಗಿಯಾಗಿ ೨೦೧೪ರಿಂದ ಕೈಗಾರಿಕಾ ತರಬೇತಿ ಸಂಸ್ಥೆ (ಐಟಿಐ) ಪ್ರಾರಂಭಿಸಿರುವ ಸಂಸ್ಥೆಗಳಾವುವು ;

(ಆ) ರಾಜ್ಯದಲ್ಲಿ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಉದ್ಯೋಗಕಾಂಕ್ಷಿಗಳಿಗೆ ಕೈಗಾರಿಕಾ ತರಬೇತಿ ನೀಡುವ ಈ ಸಂಸ್ಥೆಗಳಿಗೆ ಸರ್ಕಾರದಿಂದ ದೊರಕುವ ಸೌಲಭ್ಯಗಳೇನು ; (ವಿವರ ನೀಡುವುದು)

(ಇ) ಈಗಾಗಲೇ ೨೦೧೪ರಿಂದ ಕೆಲವು ಖಾಸಗಿಯಾಗಿ ಪ್ರಾರಂಭಗೊಂಡಿರುವ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಮಾನ್ಯತೆ ನೀಡುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಚಾಮರಾಜನಗರ ಜಿಲ್ಲೆಯ ಯಳಂದೂರು ತಾಲ್ಲೂಕಿನ ಎಸ್.ಡಿ.ವಿ.ಎಸ್ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ ಮಾನ್ಯತೆ ಪಡೆಯುವ ಬಗ್ಗೆ ಮನವಿ ಸಲ್ಲಿಸಿದ ಬಳಿಕೆ ಕೈಗೊಂಡ ಕ್ರಮವೇನು ; ಮಾನ್ಯತೆ ನೀಡಲು ಎಷ್ಟು ಸಮಯ ತಗಲುವುದು ; (ವಿವರ ನೀಡುವುದು)

(ಉ) ರಾಜ್ಯದಲ್ಲಿನ ಗ್ರಾಮೀಣ ಪ್ರದೇಶದಲ್ಲಿ ಹೊಸದಾಗಿ ತೆರೆಯಲಿರುವ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಸರ್ಕಾರ ಪ್ರೋತ್ಸಾಹಿಸುವುದೇ ಹಾಗಿದ್ದಲ್ಲಿ, ವಿವರ ನೀಡುವುದು ?

## ಉದ್ಯೋಗ ಮೇಳಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೨೧೫ (೨೫೧೭) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ಯಾವ ಯಾವ ಸ್ಥಳಗಳಲ್ಲಿ ಉದ್ಯೋಗ ಮೇಳಗಳನ್ನು ಆಯೋಜಿಸಲಾಗಿತ್ತು ;

(ಆ) ಯಾವ ದಿನಾಂಕಗಳಂದು ಉದ್ಯೋಗ ಮೇಳಗಳನ್ನು ಆಯೋಜಿಸಲಾಗಿತ್ತು ; ಈ ಉದ್ಯೋಗ ಮೇಳಗಳಲ್ಲಿ ಯಾವ ಯಾವ ಖಾಸಗಿ ಕಂಪನಿಗಳು ಭಾಗವಹಿಸಿದ್ದವು ;

(ಇ) ಈ ಉದ್ಯೋಗ ಮೇಳಗಳಲ್ಲಿ ಎಷ್ಟು ಸ್ಥಳೀಯ ನಿರುದ್ಯೋಗಿ ಯುವಕರಿಗೆ ಉದ್ಯೋಗವಕಾಶ ದೊರಕಿದೆ ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಮೀನುಗಾರಿಕೆ ಅಭಿವೃದ್ಧಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೨೧೬ (೨೫೧೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೀನುಗಾರಿಕೆ ಇಲಾಖೆಯಲ್ಲಿ ಮಂಜೂರು ಆಗಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; ಅವು ಯಾವುವು ; ಅವುಗಳಲ್ಲಿ ಭರ್ತಿಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಹುದ್ದೆಯ ಪದನಾಮ, ವೇತನ ಶ್ರೇಣಿಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು ;

(ಆ) ಮೀನುಗಾರಿಕೆ ಇಲಾಖೆಯಿಂದ ರೈತರಿಗೆ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; (ಮಾಹಿತಿ ನೀಡುವುದು)

(ಇ) ಕೇಂದ್ರ ಸರ್ಕಾರದಿಂದ ಮೀನುಗಾರಿಕೆ ಅಭಿವೃದ್ಧಿಗೆ ಯಾವ ಯಾವ ಲೆಕ್ಕ ಶೀರ್ಷಿಕೆ/ಯೋಜನೆಗಳಲ್ಲಿ ಎಷ್ಟು ಹಣ ರಾಜ್ಯಕ್ಕೆ ಬಂದಿರುತ್ತದೆ ? (ಮಾಹಿತಿ ನೀಡುವುದು)

# ಒಳಾಂಗಣ ಕ್ರೀಡಾಂಗಣ ನಿರ್ಮಿಸುವ ಬಗ್ಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):-**

೨೨೧೭ (೨೫೬೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಮತ್ತು ಬಾಗಲಕೋಟೆ ಅವಳಿ ಜಿಲ್ಲೆಗಳಲ್ಲಿ ಎಲ್ಲಾ ತಾಲ್ಲೂಕು ಕೇಂದ್ರದಲ್ಲಿ ಸುಸಜ್ಜಿತ ಕ್ರೀಡಾಂಗಣ ನಿರ್ಮಾಣವಾಗಿದ್ದರೆ ಅದರಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಿಸಲಾಗಿದೆಯೇ ;

(ಆ) ಒಳಾಂಗಣ ಕ್ರೀಡಾಂಗಣ ಮಾಡುವ ಆಲೋಚನೆ ಸರ್ಕಾರದ ಮುಂದಿದೆಯೇ ;

(ಇ) ಯಾವ ಯಾವ ತಾಲ್ಲೂಕುಗಳ ಕ್ರೀಡಾಂಗಣಗಳಲ್ಲಿ ಮಲ್ಟಿ ಜಿಮ್‌ಗಳನ್ನು ನಿರ್ಮಿಸಲಾಗಿದೆ ; (ವಿವರ ನೀಡುವುದು)

(ಈ) ಅವಳಿ ಜಿಲ್ಲೆಗಳ ತಾಲ್ಲೂಕು ಕ್ರೀಡಾಂಗಣಗಳಲ್ಲಿ ಮಲ್ಟಿ ಜಿಮ್ ನಿರ್ಮಿಸುವ ಆಲೋಚನೆ ಸರ್ಕಾರಕ್ಕೆ ಇದೆಯೇ ;

(ಉ) ಇದ್ದರೆ, ಯಾವ ಕಾಲಮಿತಿಯಲ್ಲಿ ನಿರ್ಮಿಸಲಾಗುವುದು ?

## ಅರಣ್ಯವಾಸಿಗಳಿಗೆ ಹಕ್ಕುಪತ್ರ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):–**

೨೨೧೮ (೨೫೧೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಬುಡಕಟ್ಟಿನ ಸಮುದಾಯ ಮತ್ತು ಇತರೆ ಪಾರಂಪರಿಕ ಅರಣ್ಯವಾಸಿಗಳಿಗೆ ಅರಣ್ಯ ಹಕ್ಕು ಕಾಯ್ದೆ ೨೦೦೬ರ ಅಡಿಯಲ್ಲಿ ಅರ್ಹ ಕುಟುಂಬಗಳಿಗೆ ಹಕ್ಕುಪತ್ರವನ್ನು ವಿತರಿಸುವ ಅವಕಾಶವಿದ್ದು, ರಾಜ್ಯದಲ್ಲಿ ಈ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಜನ ಅರಣ್ಯವಾಸಿಗಳಿಗೆ ಹಕ್ಕುಪತ್ರ ನೀಡಲಾಗಿದೆ ;

(ಇ) ಹಕ್ಕುಪತ್ರ ವಿತರಿಸದೇ ಇದ್ದಲ್ಲಿ ವಿಳಂಬಕ್ಕೆ ಕಾರಣಗಳೇನು ; ಯಾವಾಗ ವಿತರಿಸಲಾಗುವುದು ?

## ಕರಾವಳಿ ಮೀನುಗಾರರು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):–**

೨೨೧೯ (೨೫೨೪) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕರಾವಳಿ ಪ್ರದೇಶಗಳಲ್ಲಿ ಮೀನುಗಾರಿಕೆ ವೃತ್ತಿಯಲ್ಲಿರುವವರ ಜನಸಂಖ್ಯೆ ಎಷ್ಟು ;

(ಆ) ಅವರ ಜೀವನ ಸುಧಾರಣೆ ಮತ್ತು ರಕ್ಷಣೆ ಬಗ್ಗೆ ಸರ್ಕಾರ ರೂಪಿಸಿ, ಜಾರಿಗೊಳಿಸುತ್ತಿರುವ ಯೋಜನೆ ಮತ್ತು ಕಾರ್ಯಕ್ರಮಗಳು ಯಾವುವು ;

(ಇ) ಸರ್ಕಾರದ ಯೋಜನೆಗಳು ಈ ಮೀನುಗಾರರಿಗೆ ತಲುಪುತ್ತಿರುವುದನ್ನು ಖಾತ್ರಿಪಡಿಸಿಕೊಳ್ಳಲಾಗುತ್ತಿದೆಯೇ ?

## ಪ್ರಾಣಿ ಸಂಕುಲಗಳ ರಕ್ಷಣೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು):-**

೨೨೨೦ (೨೫೨೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಳಿವಿನಂಚಿನಲ್ಲಿರುವ ಪ್ರಾಣಿ ಸಂಕುಲಗಳ ಸಂರಕ್ಷಣೆಗಾಗಿ ರಾಜ್ಯದಲ್ಲಿ ಯಾವ ಯಾವ ಅರಣ್ಯ ಪ್ರದೇಶಗಳನ್ನು ಗುರುತಿಸಿ "ವನ್ಯಜೀವಿ ಧಾಮ"ಗಳೆಂದು ಸರ್ಕಾರ ಘೋಷಣೆ ಮಾಡಿದೆ ;

(ಆ) ಆ ಅರಣ್ಯಗಳಲ್ಲಿ ಯಾವ ಯಾವ ವಿದಧ ವನ್ಯಜೀವಿಗಳ ಸಾಕಾಣಿಕೆ ಮತ್ತು ರಕ್ಷಣೆಗೆ ಯೋಜನೆ ರೂಪಿಸಲಾಗಿದೆ ;

(ಇ) ವನ್ಯಜೀವಿಗಳ ಪಾಲನೆ ಮತ್ತು ರಕ್ಷಣೆಯ ಈ ಯೋಜನೆಯಿಂದ ಮುಂದಿನ ವರ್ಷಗಳಲ್ಲಿ ಎಷ್ಟು ಆನೆ, ಹುಲಿ, ಸಿಂಹ ಇತ್ಯಾದಿ ಪ್ರಾಣಿಗಳ ಸಂತತಿ ಹೆಚ್ಚಳ ಆಗಲಿದೆ ? (ಪ್ರಾಣಿಗಳವಾರು ವಿವರ ನೀಡುವುದು)

## ಕರ್ನಾಟಕ ಭೂ ಸುಧಾರಣಾ ಖಾಯಿದೆ ಕಲಂ ೭೯ (ಎ) ಮತ್ತು (ಬಿ) ನಿಯಮದ ಬಗ್ಗೆ

**ಶ್ರೀ ಗೋ. ಮಧುಸೂಧನ (ಪದವೀಧರರ ಕ್ಷೇತ್ರ ):–**

೨೨೨೧ (೨೫೩೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಭೂ ಸುಧಾರಣಾ ಖಾಯಿದೆ ಕಲಂ ೭೯ (ಎ) ಮತ್ತು (ಬಿ) ನಿಯಮದಂತೆ ಭೂಮಿಯನ್ನು ಖರೀದಿಸಲು ಇರುವ ನಿಬಂಧನೆಗಳೇನು ;

(ಆ) ಕರ್ನಾಟಕ ರಾಜ್ಯಾದ್ಯಂತ ಕೃಷಿ ಭೂಮಿಯು ಉಪನೋಂದಣಾಧಿಕಾರಿ ಕಛೇರಿಯ ಪ್ರತಿ ಎಕರೆಗೆ ಮಾರ್ಗದರ್ಶಿ ಬೆಲೆಯ ಕನಿಷ್ಠ ಮತ್ತು ಗರಿಷ್ಟ ಬೆಲೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕರ್ನಾಟಕ ರಾಜ್ಯಾದ್ಯಂತ ಕಳೆದ ಎರಡು ವರ್ಷಗಳಲ್ಲಿ ಕರ್ನಾಟಕ ಭೂ ಸುಧಾರಣಾ ಕಾಯಿದೆಯ ಕಲಂ ೭೯ (ಎ) ಮತ್ತು (ಬಿ)ಗಳ ಉಲ್ಲಂಘನೆಯ ಎಷ್ಟು ಪ್ರಕರಣಗಳಲ್ಲಿ ನೋಟಿಸ್ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಕಳೆದ ೨ ವರ್ಷಗಳಲ್ಲಿ ಈ ರೀತಿ ನೋಟಿಸ್ ನೀಡಲಾದ ಎಷ್ಟು ಪ್ರಕರಣಗಳು ಇತ್ಯರ್ಥವಾಗಿದೆ ; ಎಷ್ಟು ಪ್ರಕರಣಗಳಲ್ಲಿ ಈ ಕಲಂಗಳ ಉಲ್ಲಂಘನೆ ಸಾಬೀತಾಗಿದೆ ; ಉಳಿದಂತೆ, ಎಷ್ಟು ಪ್ರಕರಣಗಳಲ್ಲಿ ಭೂಮಿ ಖರೀದಿ ವಿವರಣೆಯನ್ನು ಒಪ್ಪಿಕೊಂಡು

ಖಾತಾ ಮಾಡಿಕೊಡಲು ಆದೇಶ ನೀಡಲಾಯಿತು ; ತೀರ್ಮಾನವಾಗದೇ ಉಳಿದಿರುವ ಪ್ರಕರಣಗಳು ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಅನುಸೂಚಿತ ಜಾತಿ/ ಪಂಗಡಗಳಿಗೆ ದರಖಾಸ್ತು ಜಮೀನಿನ ಮಂಜೂರಾತಿ ಬಗ್ಗೆ

**ಶ್ರೀ ಗೋ.ಮಧುಸೂದನ (ಪದವೀಧರರ ಕ್ಷೇತ್ರ) :-**

೨೨೨೨ (೨೫೩೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೧೦ ವರ್ಷಗಳಲ್ಲಿ ಕರ್ನಾಟಕ ರಾಜ್ಯದಲ್ಲಿ ಭೂ ರಹಿತರಿಗೆ- ಅನುಸೂಚಿತ ಜಾತಿ, ಅನುಸೂಚಿತ ಪಂಗಡ ಮತ್ತು ಅನ್ಯರಿಗೆ ದರಖಾಸ್ತು ಮೂಲಕ ಮಂಜೂರು ಮಾಡಲಾಗಿರುವ ಜಮೀನಿನ ವಿಸ್ತೀರ್ಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ರೀತಿಯ ಮಂಜೂರಾತಿಗೆ ಯಾವ ಯಾವ ನಿಬಂಧನೆಗಳನ್ನು ವಿಧಿಸಲಾಗುತ್ತದೆ ;

(ಇ) ಈ ಹಿಂದೆ ದರಖಾಸ್ತಿನಲ್ಲಿ ಮಂಜೂರಾತಿ ಪಡೆದ ಅನುಸೂಚಿತ ಜಾತಿ ಮತ್ತು ಪಂಗಡದ ಜಮೀನಿಗೆ ಸಂಬಂಧಪಟ್ಟಂತೆ, ಮಾರಾಟ ಮಾಡಲು ಕಳೆದ ಹತ್ತು ವರ್ಷಗಳಲ್ಲಿ ಎಷ್ಟು ಜನರಿಗೆ ಅನುಮತಿ ನೀಡಲಾಗಿದೆ; ಈ ರೀತಿ ಅನುಮತಿ ನೀಡುವ ಸಂದರ್ಭದಲ್ಲಿ ಯಾವ ಯಾವ ನಿಬಂಧನೆಗಳನ್ನು ವಿಧಿಸಲಾಗಿದೆ ;

(ಈ) ಪಿಟಿಸಿಎಲ್ ನಿಯಮದಡಿ ಕಳೆದ ೧೦ ವರ್ಷಗಳಲ್ಲಿ ಎಷ್ಟು ಪ್ರಕರಣಗಳು ನೋಂದಣಿಯಾಗಿದೆ; ಇವುಗಳಲ್ಲಿ ಬಗೆಹರಿದ ಪ್ರಕರಣಗಳ ಸಂಖ್ಯೆ ಎಷ್ಟು; ಬಾಕಿ ಉಳಿದ ಸಂಖ್ಯೆ ಎಷ್ಟು ?

## ಗದಗ ಜಿಲ್ಲೆಯ ಕೆರೆಗಳಲ್ಲಿ ಮೀನು ಕೃಷಿ ಕೈಗೊಳ್ಳುವ ಬಗ್ಗೆ

**ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) :-**

೨೨೨೩ (೨೫೩೮) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗದಗ ಜಿಲ್ಲೆಯ ಎಷ್ಟು ಕೆರೆಗಳಲ್ಲಿ ಮೀನು ಕೃಷಿ ಕೈಗೊಳ್ಳಲಾಗುತ್ತಿದೆ ;

(ಆ) ಬೆಳೆದಂತಹ ಮೀನುಗಳನ್ನು ಯಾವ ರೀತಿ ಮಾರಾಟ ಮಾಡಲಾಗುತ್ತಿದೆ; ಇದರ ವಾರ್ಷಿಕ ಆದಾಯ ಎಷ್ಟು ;

(ಇ) ಜಿಲ್ಲೆಯ ಮೀನುಗಾರಿಕೆ ಅಭಿವೃದ್ಧಿಗಾಗಿ ಹೊಸ ಯೋಜನೆಗಳನ್ನೇನಾದರೂ ಕೈಗೊಳ್ಳಲಾಗಿದೆಯೇ ;

(ಈ) ರೈತರ ಹೊಲಗಳಲ್ಲಿರುವ ಅವರದೇ ಆದ ಕೆರೆಗಳಲ್ಲಿ ಮೀನುಗಾರಿಕೆ ಮಾಡಲು ಪ್ರೋತ್ಸಾಹ ಹಾಗೂ ತರಬೇತಿ ನೀಡುವ ಯೋಜನೆಗಳೇನಾದರೂ ಇವೆಯೇ ?

## ಉಪನೋಂದಣಾ ಕಛೇರಿಗಳ ಬಗ್ಗೆ

**ಶ್ರೀ ಎಂ.ಆರ್. ಹುಲಿನಾಯ್ಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨೨೪ (೨೫೪೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ನಗರದಲ್ಲಿ ಎಷ್ಟು ಉಪನೋಂದಣಾ ಕಛೇರಿಗಳಿವೆ ;

(ಆ) ತುಮಕೂರು ಮಹಾನಗರ ಪಾಲಿಕೆಯಾಗಿರುವ ಹಿನ್ನೆಲೆಯಲ್ಲಿ ಉಪನೋಂದಣಾ ಕಛೇರಿಗಳನ್ನು ವಿಭಜಿಸುವ ಉದ್ದೇಶ ಹೊಂದಿದೆಯೇ; ಇದ್ದರೆ, ಅದನ್ನು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಲಾಗುವುದು ;

(ಇ) ತುಮಕೂರು ನಗರದಲ್ಲಿ ಮಂಜೂರಾಗಿರುವ ರೆವಿನ್ಯೂ ಇನ್ಸ್‌ಪೆಕ್ಟರ್ ಹುದ್ದೆಗಳ ಸಂಖ್ಯೆ ಎಷ್ಟು, ತುಮಕೂರು ತಾಲ್ಲೂಕು ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಮಂಜೂರಾದ ರೆವಿನ್ಯೂ ಇನ್ಸ್‌ಪೆಕ್ಟರ್ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ತುಮಕೂರು ನಗರ ಹಾಗೂ ತುಮಕೂರು ತಾಲ್ಲೂಕಿನ ಕಛೇರಿಗಳಲ್ಲಿ ರೆವಿನ್ಯೂ ಇನ್ಸ್‌ಪೆಕ್ಟರ್ ಹುದ್ದೆಗಳನ್ನು ತುಂಬದೆ ದೀರ್ಘಕಾಲ ಉಸ್ತುವಾರಿಯಲ್ಲಿಡಲು ಕಾರಣವೇನು ?

## ಕೊಡಗು ಜಿಲ್ಲೆಯ ಅಸಂಘಟಿತ ಕಾರ್ಮಿಕರ ಬಗ್ಗೆ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೨೫ (೨೫೫೧) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಅಸಂಘಟಿತ ಕಾರ್ಮಿಕರ ಸಮೀಕ್ಷೆ ನಡೆದಿದೆಯೇ ;

(ಆ) ಸರಕಾರದಿಂದ ಇವರಿಗೆ ನೀಡುವ ಸೌಲಭ್ಯಗಳೇನು ; (ಮಾಹಿತಿ ಒದಗಿಸುವುದು)

(ಇ) ಕೊಡಗು ಜಿಲ್ಲೆಯಲ್ಲಿ ಅಸಂಘಟಿತ ಕಾರ್ಮಿಕರ ಪೈಕಿ ಎಷ್ಟು ಜನ ಫಲಾನುಭವಿಗಳನ್ನು ಗುರುತಿಸಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಕಾಳಿ ನದಿ ನೀರಾವರಿ ಯೋಜನೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೨೬ (೨೫೫೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಕಾಳಿ ನದಿ ನೀರಾವರಿ ಯೋಜನೆ ಈ ಹಿಂದಿನ ಬಜೆಟ್‌ನಲ್ಲಿ ಮಂಡನೆಯಾಗಿದ್ದರೂ ಕೂಡಾ ಇಲ್ಲಿಯವರೆಗೆ ಕಾರ್ಯಗತವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಈ ಯೋಜನೆ ಕಾರ್ಯಗತವಾದೇ ಇಲ್ಲಿಯ ಸಮಸ್ತ ರೈತರಿಗೆ ಬಹಳಷ್ಟು ತೊಂದರೆಯಾಗಿರುವುದರಿಂದ ಸರ್ಕಾರ ಈ ಯೋಜನೆಯನ್ನು ಕೂಡಲೇ ಪ್ರಾರಂಭಿಸಿ ರೈತರಿಗೆ ಅನುಕೂಲ ಮಾಡಿಕೊಡಲು ಎಷ್ಟು ಕಾಲಾವಕಾಶ ಬೇಕಾಗಿರುತ್ತದೆ ?

## ಕುಮಟಾ ತಾಲ್ಲೂಕಿನ ದೀವಗಿ ನದಿ ತೀರದ ಖಾರ್ಲೆಂಡ್ ಕಳಪೆ ಕಾಮಗಾರಿ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨೨೭ (೨೫೫೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರವಾರ ಜಿಲ್ಲಾ ಕುಮಟಾ ತಾಲ್ಲೂಕಿನ ದೀವಗಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಅಘನಾಶಿನಿಯ ನದಿಯಗುಂಟ ನಿರ್ಮಿಸಿದ ಬೃಹತ್ ಖಾರ್ಲೆಂಡ್ ಕಳಪೆ ಮಟ್ಟದಲ್ಲಾಗಿದೆ ಎಂದು ಗ್ರಾಮಸ್ಥರು ಲೋಕಾಯುಕ್ತಕ್ಕೆ ದೂರು ನೀಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಣ್ಣ ನೀರಾವರಿ ಇಲಾಖೆಯಿಂದ ರೂ.೪೦.೦೦ ಲಕ್ಷ ವೆಚ್ಚದಲ್ಲಿ ೧ ಕಿ.ಮೀ. ಖಾರ್ಲೆಂಡ್ ನಿರ್ಮಿಸಲಾಗಿದೆ. ಖಾರ್ಲೆಂಡ್ ಕಾಮಗಾರಿ ಮುಗಿದ ೬ ತಿಂಗಳು ಕಳೆಯುವುದರೊಳಗಾಗಿಯೇ ಖಾರ್ಲೆಂಡ ಅಲ್ಲಲ್ಲಿ ಕುಸಿಯಲು ಪ್ರಾರಂಭಿಸಿದೆ. ಖಾರ್ಲೆಂಡ್ ಬಳಸಿದ ಕಲ್ಲುಗಳು ದಿಕ್ಕು ಪಾಲಾಗಿದೆ. ಮುಂದಿನ ಒಂದು

ಮಳೆಗಾಲ ಮುಗಿಯುವುದರೊಳಗಾಗಿ ಈ ಕಾಮಗಾರಿಯೂ ಸಂಪೂರ್ಣ ನೀರಿನಲ್ಲಿ ಹೋಮ ಮಾಡಿದಂತಾಗಲಿದೆ. ಇದಕ್ಕೆ ಯಾರು ಹೊಣೆಗಾರರು ; (ವಿವರ ನೀಡುವುದು)

(ಇ) ಈಗಾಗಲೇ, ಈ ಕಾಮಗಾರಿಯನ್ನು ಕಳಪೆ ಮಟ್ಟದಲ್ಲಿ ನಡೆಸಿದ ಗುತ್ತಿಗೆದಾರರನ್ನು ಕಪ್ಪು ಪಟ್ಟಿಯಲ್ಲಿ ಸೇರಿಸಿ ಕೆಲಸ ಸರಿಯಾಗಿ ಪರಿಶೀಲಿಸದೆ ನಿಷ್ಕಾಳಜಿ ವಹಿಸಿರುವ ಇಲಾಖೆ ಅಧಿಕಾರಿಗಳ ಮೇಲೆ ಸರ್ಕಾರ ಸೂಕ್ತ ಶಿಸ್ತಿನ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಐ.ಟಿ.ಐ ಕಾಲೇಜಿನಲ್ಲಿ ಸಲಕರಣೆ ಖರೀದಿಯಲ್ಲಿ ಅವ್ಯವಹಾರ

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨೨೮ (೨೫೫೪) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರವಾರ ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿರುವ ಐ.ಟಿ.ಐ. ಕಾಲೇಜಿನಲ್ಲಿ ಕಳೆದ ೧೦ ವರ್ಷಗಳಿಂದ ಕಾಲೇಜಿಗೆ ಖರೀದಿಸಿರುವ ಸಲಕರಣೆಗಳಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಐ.ಟಿ.ಐ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾಗಿ ಬೇಕಾಗಿರುವ (ಲ್ಯಾಬ್) ಪ್ರಾಕ್ಟಿಕಲ್ ಕುರಿತಾದ ಸಲಕರಣೆಗಳನ್ನು ನಿಯಮಾವಳಿಯ ರೀತ್ಯಾ

ಖರೀದಿಸಿರುತ್ತಾರೆಯೇ ; ಯಾವ ಯಾವ ಏಜೆನ್ಸಿಯವರ ಮುಖಾಂತರ ಖರೀದಿಸಿರುತ್ತಾರೆ ? (ಅವರು ನೀಡಿರುವ ದರಪಟ್ಟಿ ಹಾಗೂ ಖರೀದಿಸಿದ ರಸೀದಿಯ ಸಮೇತ ವರ್ಷವಾರು ವಿವರ ನೀಡುವುದು)

## ರಕ್ತ ಚಂದನ ಮರಗಳನ್ನು ಕಳ್ಳಸಾಗಣೆ ಮಾಡುತ್ತಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ನಾಮನಿರ್ದೇಶನ ಹೊಂದಿದವರು) :-**

೨೨೨೯ (೨೫೫೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರಕ್ತ ಚಂದನ ಮರಗಳನ್ನು ಕಳ್ಳಸಾಗಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈವರೆವಿಗೆ ಎಷ್ಟು ಟನ್ ರಕ್ತ ಚಂದನ ಮರಗಳನ್ನು ವಶಪಡಿಸಿಕೊಳ್ಳಲಾಗಿದೆ ; (ವರ್ಷವಾರು ವಿವರ ನೀಡುವುದು)

(ಇ) ಈ ರೀತಿಯ ಕಳ್ಳ ಸಾಗಾಣೆ ಘಟನೆಯಲ್ಲಿ ಎಷ್ಟು ಜನರನ್ನು ಬಂದಿಸಲಾಗಿದೆ; (ಆರೋಪಿಗಳ ವಿವರ ಹಾಗೂ ರಾಷ್ಟ್ರೀಯತೆ ಕುರಿತು ಮಾಹಿತಿ ನೀಡುವುದು)

(ಈ) ಇದುವರೆಗೆ ವಶಪಡಿಸಿಕೊಂಡಿರುವ ರಕ್ತ ಚಂದನ ಮರಗಳನ್ನು ವಿಲೇವಾರಿ ಮಾಡಲು ಸರ್ಕಾರ ಕೈಗೊಂಂಡಿರುವ ಕ್ರಮಗಳೇನು ?

## ಕಲಬುರ್ಗಿ ಜಿಲ್ಲೆಯ ಕೆರೆಗೆ ಜೀರ್ಣೋದ್ದಾರ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ) :–**

೨೨೩೦ (೧೬೧೦) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆರೆಗಳ ಜೀರ್ಣೋದ್ದಾರಕ್ಕಾಗಿ ಕಳೆದ ಎರಡು ವರ್ಷಗಳಲ್ಲಿ ಕಲಬುರ್ಗಿ ಜಿಲ್ಲೆಯಲ್ಲಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು;

(ಆ) ಈ ಅನುದಾನವನ್ನು ಸಂಪೂರ್ಣವಾಗಿ ಉಪಯೋಗಿಸ–ಲಾಗಿದೆಯೇ; (ವಿವರ ಒದಗಿಸುವುದು)

(ಇ) ಉಪಯೋಗವಾಗದಿದ್ದಲ್ಲಿ ಸಂಬಂಧಪಟ್ಟವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಕ್ರೀಡಾ ಇಲಾಖೆಯಿಂದ ಗ್ರಾಮೀಣ ಕ್ರೀಡೋತ್ಸವ ಕಾರ್ಯಕ್ರಮ ಜಾರಿ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೩೧ (೨೪೪೭) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸಕ್ತ ವರ್ಷದಲ್ಲಿ ಕ್ರೀಡಾ ಇಲಾಖೆಯಿಂದ "ಗ್ರಾಮೀಣ ಕ್ರೀಡೋತ್ಸವ" ಎಂಬ ಹೊಸ ಕಾರ್ಯಕ್ರಮವನ್ನು ಜಾರಿಗೆ ತರಲಾಗಿದೆಯೇ ;

(ಆ) ಈ ಕಾರ್ಯಕ್ರಮವನ್ನು ಜಾರಿಗೆ ತಂದಿದ್ದಲ್ಲಿ ಈ ಕಾರ್ಯಕ್ರಮಕ್ಕೆ ಎಷ್ಟು ಹಣವನ್ನು ನಿಗಧಿಪಡಿಸಿದೆ; ತಾಲ್ಲೂಕುವಾರು ಹಂಚಿಕೆ ಮಾಡಿದ ಅನುದಾನ ಎಷ್ಟು ;

(ಇ) ಈ ಕಾರ್ಯಕ್ರಮ ಜಾರಿಯಾದಾಗಿನಿಂದ ಎಷ್ಟು ತಾಲ್ಲೂಕುಗಳಲ್ಲಿ ಈ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ಕಾರ್ಯಕ್ರಮ ಅನುಷ್ಠಾನಕ್ಕೆ ಬಂದರೂ ತಾಲ್ಲೂಕು ಮಟ್ಟದಲ್ಲಿ ಕ್ರೀಡೋತ್ಸವ ಆಯೋಜಿಸದೆ ಇರುವ ಪ್ರಕರಣಗಳು ಇವೆಯೇ; ಇದ್ದಲ್ಲಿ, ವಿವರಗಳನ್ನು ನೀಡುವುದು ?

## ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಯಲ್ಲಿನ ಅರಣ್ಯ ಇಲಾಖೆಯ ಜಮೀನು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨೩೨ (೨೪೪೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಹಾಗೂ ಕೊಪ್ಪಳ ಜಿಲ್ಲೆಯಲ್ಲಿನ ಅರಣ್ಯ ಇಲಾಖೆಯ ಜಮೀನು ಎಷ್ಟಿದೆ ;

(ಆ) ಒತ್ತುವರಿಯಾಗಿರುವ ಜಮೀನಿನ ಪ್ರಮಾಣ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಒತ್ತುವರಿಯಾಗಿರುವುದನ್ನು ತೆರವುಗೊಳಿಸಲು ಇಲಾಖೆಯವರು ಇದುವರೆಗೂ ಕೈಗೊಂಡ ಕ್ರಮಗಳೇನು ;

(ಈ) ಎರಡೂ ಜಿಲ್ಲೆಗಳಲ್ಲಿ ಅರಣ್ಯ ಜಮೀನನ್ನು ಖಾಸಗಿಯವರಿಗೆ ಬಾಡಿಗೆ ರೂಪದಲ್ಲಿ ನೀಡಿದ ಪ್ರಕರಣಗಳೇನಾದರೂ ಇವೆಯೇ; ಇದ್ದಲ್ಲಿ, ಯಾವ ಯಾವ ಸಂಸ್ಥೆಗಳಿಗೆ ಎಷ್ಟು ಜಮೀನು ನೀಡಲಾಗಿದೆ ; (ವಿವರ ನೀಡುವುದು)

(ಉ) ಇದರಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯ ಎಷ್ಟು ;

(ಊ) ಬಾಡಿಗೆಗೆ ನೀಡಲಾದ ಜಮೀನು ಕ್ಷೇತ್ರದಲ್ಲಿ ಸದರಿ ಸಂಸ್ಥೆಗಳು ಒತ್ತುವರಿ ಮಾಡಿಕೊಂಡಿರುವ ಪ್ರಕರಣಗಳೇನಾದರೂ ಇವೆಯೇ ; ಇದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು?

## ಕಂದಾಯ ಇಲಾಖೆಯ ನೇಮಕಾತಿ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೩೩ (೨೪೪೫೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಲ್ಲಿ ದ್ವಿತೀಯ ದರ್ಜೆಯ ಸಹಾಯಕ, ಪ್ರಥಮ ದರ್ಜೆಯ ಸಹಾಯಕ, ಗ್ರಾಮ ಲೆಕ್ಕಿಗರು ಹಾಗೂ ಕಂದಾಯ ನಿರೀಕ್ಷಕರ ಹುದ್ದೆಗಳಿಗೆ ಈ ಹಿಂದೆ ಮಾಡಲಾದ ನೇರ ನೇಮಕಾತಿ ದಿನಾಂಕಗಳು ಯಾವುವು ;

(ಆ) ಸದ್ಯ ಕಂದಾಯ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಯಾವಾಗ ನೇರ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು ?

## ಸಬ್ ರಿಜಿಸ್ಟ್ರಾರ್ ಕಛೇರಿಗಳಲ್ಲಿ ಭ್ರಷ್ಟಾಚಾರ ನಿರ್ಮೂಲನೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)**

೨೨೩೪ (೨೫೦೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಬ್ ರಿಜಿಸ್ಟ್ರಾರ್ ಕಛೇರಿಗಳಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಮಾಡಲು ಕಂದಾಯ ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದೆಲ್ಲೆಡೆ ಭ್ರಷ್ಟಾಚಾರ ನಿರ್ಮಾಲನೆಗೆ ಪೂರಕವಾಗಿ ಸಬ್ ರಿಜಿಸ್ಟ್ರಾರ್ ಕಛೇರಿಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಲಾಗಿದೆಯೇ ;

(ಇ) ಇಲ್ಲದಿದ್ದಲ್ಲಿ, ಸಿಸಿ ಕ್ಯಾಮೆರಾ ಅಳವಡಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; (ಮಾಹಿತಿ ಒದಗಿಸಿರಿ)

## ಸರ್ಕಾರಿ ಜಮೀನು ಭೂ ಕಬಳಿಕೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)**

೨೨೩೫ (೨೫೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎ.ಟಿ. ರಾಮಸ್ವಾಮಿ ವರದಿ ಪ್ರಕಾರ ಬೆಂಗಳೂರು ನಗರ/ಗ್ರಾಮಾಂತರ ಜಿಲ್ಲೆಗಳಲ್ಲಿ ಕಬಳಿಕೆಯಾಗಿರುವ ಸರ್ಕಾರದ ಭೂಮಿಯ ಪ್ರಮಾಣ ಎಷ್ಟು ; (ಮಾಹಿತಿ ಒದಗಿಸುವುದು)

(ಆ) ಇದರಲ್ಲಿ ವರದಿ ಆಧರಿಸಿ ಸರ್ಕಾರ ಹಿಂಪಡೆದ ಭೂಮಿಯ ಪ್ರಮಾಣ ಎಷ್ಟು ; (ಮಾಹಿತಿ ಒದಗಿಸುವುದು)

(ಇ) ಉಳಿದಂತೆ ಕಬಳಿಕೆಯಾಗಿರುವ ಭೂಮಿ ಹಿಂಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮ ಏನು ? (ವಿವರ ಒದಗಿಸುವುದು)

## ಅರಣ್ಯ ಇಲಾಖೆಯ ನೇಮಕಾತಿಯಲ್ಲಿ ನಡೆದಿರುವ ಅಕ್ರಮದ ಕುರಿತು.

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೩೬(೨೫೨೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅರಣ್ಯ ಇಲಾಖೆಯಲ್ಲಿ ನೇಮಕಾತಿಗಳನ್ನು ಮಾಡಿಕೊಳ್ಳಲು ಇರುವ ಮಾರ್ಗಸೂಚಿಗಳು ಏನು; (ವಿವರ ನೀಡುವುದು)

(ಆ) ಇತ್ತೀಚೆಗೆ ಅರಣ್ಯ ಇಲಾಖೆಯಲ್ಲಿ ನಡೆದ ನೇಮಕಾತಿಗಳು ಯಾವುವು; ಯಾವ ಆಧಾರದಲ್ಲಿ ನೇಮಕಾತಿಗಳನ್ನು ಮಾಡಲಾಗಿದೆ ;

(ಇ) ವಲಯ ಅರಣ್ಯಾಧಿಕಾರಿ (ಆರ್.ಎಫ್.ಓ) ನೇರನೇಮಕಾತಿಯ ಪೂರ್ವಭಾವಿ ಪರೀಕ್ಷೆಯಲ್ಲಿ ನಕಲು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಇದಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕಾಡು ಬಾದಾಮಿ ಮರವನ್ನು ಕಡಿದು ಹಾಕುವ ಬಗ್ಗೆ.

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೩೭(೨೫೪೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯನಗರದ ಬಸವೇಶ್ವರ ಬಡಾವಣೆಯ ೧ನೇ ಮುಖ್ಯ ರಸ್ತೆಯ ಮನೆ ಸಂಖ್ಯೆ ೪ರ ಮುಂದಿರುವ ಕಾಡು ಬಾದಾಮಿ ಮರವನ್ನು ಆಗಾಗ ಕೆ.ಪಿ.ಟಿ.ಸಿ.ಎಲ್‌ನವರು ಒಂದೇ ಕಡೆ ಕೊಂಬೆಗಳನ್ನು ಕಡಿಯುವುದರಿಂದ ಮರವು ರಸ್ತೆಯ ಕಡೆಗೆ ಬಾಗಿರುವುದು ಹಾಗೂ ಬೇರುಗಳು ಭೂಮಿಯ ಮೇಲ್ಭಾಗದಲ್ಲೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜೋರಾಗಿ ಮಳೆ ಬೀಳುವ ಸಂದರ್ಭದಲ್ಲಿ ವಾಹನಗಳ ಮೇಲೆ ಮರವು ಬೀಳುವ ಸಂಭವವಿರುತ್ತದೆ ಅಲ್ಲದೆ ರಸ್ತೆಯಲ್ಲಿ ಚಿಕ್ಕ

ಮಕ್ಕಳು ಆಟವಾಡುತ್ತಿರುವ ಸಂದರ್ಭದಲ್ಲಿ ಮರವು ಬಿದ್ದರೆ ಪ್ರಾಣಾಪಾಯವು ಉಂಟಾಗುವ ಸಾಧ್ಯತೆಗಳಿರುತ್ತದೆ ಹಾಗೂ ಅಲ್ಲಿನ ಸುತ್ತಮುತ್ತಲಿನ ಮನೆಗಳಿಗೆ ಅಪಾಯ ಉಂಟಾಗುವ ಸಂಭವವಿರುವುದರಿಂದ ಮರವನ್ನು ಕೂಡಲೇ ಕಡಿದು ಹಾಕಲು ಕ್ರಮವನ್ನು ಕೈಗೊಳ್ಳಲಾಗುವುದೇ ?

## ರಾಜ್ಯದಲ್ಲಿ ಲಭ್ಯವಾಗುತ್ತಿರುವ ನೀರಿನ ಬಗ್ಗೆ.

**ಶ್ರೀ ವಿ. ಎಸ್. ಉಗ್ರಪ್ಪ (ನಾಮನಿರ್ದೇಶನ):–**

೨೨೫೮(೨೫೫೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷ್ಣ, ಕಾವೇರಿ, ಪೆನ್ನಾರ್, ಗೋದಾವರಿ ಕಣಿವೆಗಳಿಂದ ಹಾಗೂ ಪಶ್ಚಿಮ ಘಟ್ಟಗಳಿಂದ ಒಟ್ಟಾರೆ ಪ್ರತಿ ವರ್ಷ ರಾಜ್ಯಕ್ಕೆ ಎಷ್ಟು ಟಿ.ಎಮ್. ಸಿ ನೀರು ಲಭ್ಯವಾಗುತ್ತಿದೆ ; (ಕಣಿವೆವಾರು ಪ್ರದೇಶವಾರು ವಿವರ ನೀಡುವುದು)

(ಆ) ಈಗ ಕಣಿವೆ/ಪ್ರದೇಶವಾರು ಲಭ್ಯವಾಗುವ ನೀರಿನಲ್ಲಿ ಎಷ್ಟು ಟಿ.ಎಮ್.ಸಿ ನೀರನ್ನು ಕುಡಿಯಲು, ಕೈಗಾರಿಕೆಗೆ ಮತ್ತು ನೀರಾವರಿಗೆ ಬಳಸಿಕೊಳ್ಳಲಾಗುತ್ತಿದೆ ; ಎಲ್ಲೆಲ್ಲಿ, ಯಾವ ರೂಪದಲ್ಲಿ ಬಳಸಿಕೊಳ್ಳಲಾಗುತ್ತಿದೆ ; (ಯೋಜನಾವಾರು ವಿವರ ನೀಡುವುದು)

(ಇ) ಈ ರೀತಿ ಬಳಸಿಕೊಂಡಿರುವ ಯೋಜನೆಗಳಿಗೆ ವೆಚ್ಚವಾಗಿರುವ ಹಣ ಎಷ್ಟು ? (ಯೋಜನಾವಾರು ವಿವರ ನೀಡುವುದು)

## ತುಮಕೂರು ಜಿಲ್ಲೆ-ಪಾವಗಡ ತಾಲ್ಲೂಕಿನ ಜನವಸತಿ ಬಗ್ಗೆ.

**ಶ್ರೀ ವಿ. ಎಸ್. ಉಗ್ರಪ್ಪ (ನಾಮನಿರ್ದೇಶನ):-**

೨೨೩೯(೨೫೪೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ಜಿಲ್ಲೆ, ಪಾವಗಡ ತಾಲ್ಲೂಕಿನಲ್ಲಿ ಎಷ್ಟು ಪಟ್ಟಣ, ಗ್ರಾಮ ಜನವಸತಿಗಳಿದ್ದಾವೆ ; ಅವು ಯಾವುವು ; (ಪೂರ್ಣ ವಿವರ ನೀಡುವುದು)

(ಆ) ಆ ತಾಲ್ಲೂಕಿನಲ್ಲಿ ಯಾವ ಯಾವ ಗ್ರಾಮಗಳಲ್ಲಿರುವ ಜನಸಂಖ್ಯೆ ಎಷ್ಟು ; (ವರ್ಗವಾರು ಪ.ಜಾತಿ/ಪ.ಪಂಗಡ, ಹಿಂದುಳಿದ ವರ್ಗ ಹಾಗು ಅಲ್ಪ ಸಂಖ್ಯಾತರ ವಿವರ ನೀಡುವುದು)

(ಇ) ಈ ಜನ ಸಂಖ್ಯೆಯಲ್ಲಿ ಎಷ್ಟು ಜನ ವಿಷ ಪೂರಿತ ನೀರನ್ನು ಕುಡಿದು ವಿವಿಧ ರೋಗಗಳಿಗೆ ತುತ್ತಾಗಿದ್ದಾರೆ ; (ವಿವರ ನೀಡುವುದು)

(ಈ) ಈ ತಾಲ್ಲೂಕಿನ ಜನರಿಗೆ ಭೂಮಿಯ ಮೇಲೆ ಹರಿಯುವ ಶುದ್ಧ ಕುಡಿಯುವ ನೀರನ್ನು ಒದಗಿಸಲು ರಾಜ್ಯ ಉಚ್ಚ ನ್ಯಾಯಾಲಯ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿರುವುದು ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವ ಕ್ರಮವನ್ನು ತೆಗೆದುಕೊಳ್ಳಲಾಗಿದೆ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಕೆರೆಗಳು

**ಶ್ರೀ ವಿ. ಎಸ್. ಉಗ್ರಪ್ಪ (ನಾಮನಿರ್ದೇಶನ):–**

೨೨೪೦ (೨೪೧೬) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ೨೦೧೨–೨೦೧೩, ೨೦೧೩–೨೦೧೪ ಹಾಗೂ ೨೦೧೪–೨೦೧೫ನೇ ಸಾಲಿನಲ್ಲಿ ಎಷ್ಟೆಷ್ಟು ಮಳೆಯಾಗಿದೆ; (ಪೂರ್ಣ ವಿವರ ನೀಡುವುದು)

(ಆ) ರಾಜ್ಯದ ಯಾವ ಯಾವ ತಾಲ್ಲೂಕಿನ, ಯಾವ ಯಾವ ಗ್ರಾಮಗಳಲ್ಲಿ ಸಣ್ಣ, ಅತೀ ಸಣ್ಣ ಮತ್ತು ದೊಡ್ಡ ಕೆರೆಗಳಿದ್ದಾವೆ; (ಪೂರ್ಣ ವಿವರ ನೀಡುವುದು)

(ಇ) ಅಂತಹ ಮಳೆಯಿಂದ ಯಾವ ಯಾವ ತಾಲ್ಲೂಕುಗಳಲ್ಲಿ ಎಷ್ಟು ಸಣ್ಣ, ಅತೀ ಸಣ್ಣ ಮತ್ತು ದೊಡ್ಡ ಕೆರೆಗಳಿಗೆ ಎಷ್ಟೆಷ್ಟು ನೀರು ಸಂಗ್ರಹವಾಗಿದೆ; ಹಾಗೆ ಸಂಗ್ರಹವಾದ ನೀರನ್ನು ಯಾವ ಉದ್ದೇಶಕ್ಕೆ ಬಳಕೆ ಮಾಡಲಾಗಿದೆ ? (ವಿವರ ನೀಡುವುದು)

## ಅರಣ್ಯ ಪ್ರದೇಶದ ಅಭಿವೃದ್ಧಿ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೨೨೪೧ (೨೫೨೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಒಟ್ಟು ಭೂಪ್ರದೇಶವೆಷ್ಟು ; ಆ ಪ್ರದೇಶದಲ್ಲಿ ಎಷ್ಟು ಎಕರೆ ಅರಣ್ಯ ಪ್ರದೇಶವಿದೆ ; (ವಿವರ ನೀಡುವುದು)

(ಆ) ಆ ಅರಣ್ಯ ಪ್ರದೇಶದಲ್ಲಿ ಯಾವ ಯಾವ ಕೆಟಗರಿ ಅರಣ್ಯವನ್ನು ವರ್ಗೀಕರಿಸಲಾಗಿದೆ ; (ವಿವರ ನೀಡುವುದು)

(ಇ) ಹಾಗೆ ವರ್ಗೀಕರಣಗೊಂಡಿರುವ ಅರಣ್ಯ ರಾಜ್ಯದ ೧೭೬ ತಾಲ್ಲೂಕುಗಳಲ್ಲಿ ಎಷ್ಟೆಷ್ಟು ಅರಣ್ಯ ಪ್ರದೇಶವನ್ನು ಮೀಸಲಿಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಹಾಗೆ ಮೀಸಲಿಟ್ಟಿರುವ ಅರಣ್ಯ ಪ್ರದೇಶದಲ್ಲಿ ಎಷ್ಟೆಷ್ಟು ಜಮೀನು ಒತ್ತುವರಿ ಮಾಡಿಕೊಳ್ಳಲಾಗಿದೆ ; (ಗ್ರಾಮವಾರು ಮಾಹಿತಿ ನೀಡುವುದು)

(ಉ) ಕಳೆದ ೫ ವರ್ಷಗಳಲ್ಲಿ ಅರಣ್ಯವನ್ನು ಉಳಿಸಲು–ಬೆಳೆಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಇದಕ್ಕೆ ತಗಲಿರುವ ವೆಚ್ಚವೆಷ್ಟು ; (ಗ್ರಾಮ ಪಂಚಾಯತಿವಾರು ವಿವರ ನೀಡುವುದು)

(ಊ) ಅರಣ್ಯ ಇಲಾಖೆಯಿಂದ ಪ್ರತಿ ವರ್ಷ ಅರಣ್ಯ ವೃದ್ಧಿಸಲು ನೆಡುವ ಸಸಿಗಳು ಎಷ್ಟು ; ಯಾವ ಯಾವ ಜಾತಿ ಸಸಿಗಳನ್ನು ಯಾವ ಯಾವ ಅರಣ್ಯದಲ್ಲಿ ನೆಡಲಾಗಿದೆ ; ಅವುಗಳಲ್ಲಿ ಉಳಿದಿರುವವು ಎಷ್ಟು ; ಪ್ರತಿ ವರ್ಷ ಅರಣ್ಯೀಕರಣಕ್ಕೆ ವೆಚ್ಚ ಮಾಡುವ ಹಣ ಎಷ್ಟು ? (ಕಳೆದ ೫ ವರ್ಷಗಳ ಖರ್ಚಿನ ಪೂರ್ಣ ವಿವರ ನೀಡುವುದು)

## ಅಂತರ್ಜಲ ಮಟ್ಟ ಕುಸಿತ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೪೨ (೨೪೬೫) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಂತರ್ಜಲ ಮಟ್ಟ ಕ್ಷೀಣಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ ; ಅಂತರ್ಜಲದ ಮಟ್ಟವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಅಂತರ್ಜಲದ ಮಟ್ಟವನ್ನು ಹೆಚ್ಚಿಸಲು ಸರ್ಕಾರ ಯಾವುದಾದರೂ ಯೋಜನೆಗಳನ್ನು ರೂಪಿಸಿದೆಯೇ ;

(ಈ) ಹಾಗಿದ್ದಲ್ಲಿ ; ಈ ಯೋಜನೆಗಳ ರೂಪು–ರೇಷೆಗಳೇನು ;

(ಉ) ಈ ಯೋಜನೆಗಳಿಗೆ ಸರ್ಕಾರ ಅನುದಾನವನ್ನೇನಾದರೂ ನಿಗಧಿಪಡಿಸಿದೆಯೇ ;

(ಊ) ಅಂತರ್ಜಲದ ಮಟ್ಟವನ್ನು ಹೆಚ್ಚಿಸುವ ಯೋಜನೆಗಳಿಗೆ ಅನುದಾನವನ್ನು ನೀಡುವಂತೆ ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನೇನಾದರೂ ಸಲ್ಲಿಸಿದೆಯೇ ;

(ಋ) ಹಾಗಿದ್ದಲ್ಲಿ ; ಯಾವಾಗ ಮತ್ತು ಎಷ್ಟು ಅನುದಾನಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ? (ವಿವರಗಳನ್ನು ನೀಡುವುದು)

# ಚಿನ್ನ, ಬೆಳ್ಳಿ ಕಾರ್ಮಿಕರ ಕಲ್ಯಾಣ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೪೩(೨೫೦೫) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸುಮಾರು ೫ ಲಕ್ಷ ಜನ ಪ್ರತ್ಯೇಕ ಹಾಗೂ ಪರೋಕ್ಷವಾಗಿ ಚಿನ್ನ, ಬೆಳ್ಳಿ ವ್ಯಾಪಾರದಲ್ಲಿ ತೊಡಗಿರುತ್ತಾರೆ ; ಅವರ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಆ) ಇವರ ಕಲ್ಯಾಣಕ್ಕಾಗಿ ಯೋಜನೆಗಳನ್ನು ರೂಪಿಸಿದ್ದರೆ, ಅವುಗಳನ್ನು ಸಕ್ರಿಯುವಾಗಿ ಜಾರಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಯೋಜನೆಗಳು ಇಲ್ಲದಿದ್ದಲ್ಲಿ, ಹೊಸ ಯೋಜನೆಗಳನ್ನು ರೂಪಿಸಲು ತೆಗೆದುಕೊಂಡ ಕ್ರಮಗಳೇನು ;

(ಈ) ಇತರೆ ರಾಜ್ಯ ಹಾಗೂ ವಿದೇಶಗಳಲ್ಲಿರುವ ಚಿನ್ನ ಮತ್ತು ಬೆಳ್ಳಿ ಮಾರಾಟದ ಉತ್ತೇಜನಕ್ಕಾಗಿ ವಿಶೇಷ ಪಾರ್ಕ್ ಮಾಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ-2, ಬೆಂಗಳೂರು-59/ಕಾ.ಸೂ. 0 3523/ 1200 ಪ್ರತಿಗಳು/24-03-2015